

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ನೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 231, ಪುಟಗಳು: 8, ಗುರುವಾರ, 30 ಮೇ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಎಲ್ಲರನ್ನೂ ಪ್ರೀತಿಸು, ಕೆಲವರನ್ನಷ್ಟೇ ನಂಬು, ಯಾರಿಗೂ ಕೇಡು ಬಗೆಯಬೇಡ. ಇದುವೇ ಜೀವನದ ನಿಜ ಸೂತ್ರ.

। ವಿಲಿಯಂ ಶೇಕ್ಸ್‌ಪಿಯರ್

**ಪಂಚಾಂಗ**

(ಗುರುವಾರ 30, ಮೇ-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಕೃಷ್ಣ ಪಕ್ಷ,
- ಸಪ್ತಮಿ/ಅಷ್ಟಮಿ, ಗುರುವಾರ,
- ಧನಿಷ್ಠ ನಕ್ಷತ್ರ/ಶತಭಿಷ ನಕ್ಷತ್ರ.
- ರಾಹುಕಾಲ: 01:56 ರಿಂದ 03:32
- ಗುಳಿಕಕಾಲ: 09:08 ರಿಂದ 10:44
- ಯಮಗಂಡಕಾಲ: 05:57 ರಿಂದ 07:32

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

## ಚಾಲಕ ರಹಿತ ಮೆಟ್ರೋ ರೈಲು: ಸಿಗ್ನಲಿಂಗ್ ಟೆಸ್ಟ್ ಜೂನ್ 7ರಿಂದ ಶುರು

**ಬೆಂಗಳೂರು:** ಬೆಂಗಳೂರಿನಲ್ಲಿ ಚಾಲಕ ರಹಿತ ಮೆಟ್ರೋ ರೈಲು ಸಂಚಾರ ಶೀಘ್ರದಲ್ಲೇ ಸನ್ನಿಹಿತವಾಗಲಿದೆ. ಟೆಸ್ಟಿಂಗ್ ಕಾರ್ಯಗಳು ಈಗಾಗಲೇ ಆರಂಭವಾಗಿದ್ದು, ಸಿಗ್ನಲಿಂಗ್ ಟೆಸ್ಟ್ ಪ್ರಕ್ರಿಯೆಗಳು ಜೂನ್ 7ರಿಂದ ಶುರುವಾಗಲಿದೆ ಎಂದು ಬಿಎಂಆರ್ ಸಿಎಲ್ ತಿಳಿಸಿದೆ. ಸಿಗ್ನಲಿಂಗ್ ಟೆಸ್ಟ್, ಸಿಗ್ನಲ್ ಮತ್ತು ರೈಲಿನ ಸಂಯೋಜನೆ ಪರೀಕ್ಷೆಗಳು ಚಾಲಕ ರಹಿತ ರೈಲಿನ ಮುಖ್ಯ ಪರೀಕ್ಷೆಯ ಭಾಗವಾಗಿದೆ ಎಂದು ಮೆಟ್ರೋದ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ. ಆರ್‌ವಿ ರಸ್ತೆ-ಬೊಮ್ಮಸಂದ್ರ ಮಾರ್ಗದಲ್ಲಿ ಡಿಸೆಂಬರ್ ನಲ್ಲಿ ಚಾಲಕ ರಹಿತ ರೈಲು ಸಂಚಾರ ಆರಂಭವಾಗಲಿದೆ ಎಂದು ಅವರು ತಿಳಿಸಿದ್ದಾರೆ.



**ಚಾಲಕರಹಿತ ರೈಲು ಸಂಚಾರಕ್ಕೆ ಮೂಲಸೌಕರ್ಯ ಸಿದ್ಧ:** ಪ್ರತಿ 20 ನಿಮಿಷಗಳಿಗೊಮ್ಮೆ ಚಾಲಕ ರಹಿತ ಮೆಟ್ರೋ ರೈಲು ಸಂಚಾರ ನಡೆಸಲು ಬಿಎಂಆರ್ ಸಿಎಲ್ ಯೋಜನೆ ರೂಪಿಸುತ್ತಿದೆ. ಮೊದಲಿಗೆ ಒಟ್ಟು 57 ಏಕಮುಖ ಸಂಚಾರ ಮತ್ತು ನಂತರದಲ್ಲಿ ದ್ವಿಮುಖ ಸಂಚಾರಕ್ಕೆ ಪ್ಲ್ಯಾನ್ ಮಾಡಲಾಗುತ್ತಿದೆ. ಇದಕ್ಕಾಗಿ 18.82 ಕಿಮೀ ಎತ್ತರದ ಮಾರ್ಗದಲ್ಲಿ ಮತ್ತು ಅದರಲ್ಲಿ ಬರುವ ಎಲ್ಲಾ 16 ನಿಲ್ದಾಣಗಳಲ್ಲಿ ಮೂಲಸೌಕರ್ಯಗಳನ್ನು ಸಿದ್ಧಪಡಿಸಲಾಗಿದೆ. ಆದರೆ ಚೀನಾದ ಸಂಸ್ಥೆಯಾದ ಸಿಆರ್‌ಆರ್‌ಸಿ ನಾನ್‌ಜಿಂಗ್ ಪುಜೆನ್‌ನಿಂದ ಸಂವಹನ ಆಧಾರಿತ ರೈಲು ನಿಯಂತ್ರಣ (ಸಿಬಿಟಿಸಿ) ರೈಲುಗಳ ಪೂರೈಕೆಯಲ್ಲಿ ವಿಳಂಬದಿಂದಾಗಿ ಬಹುನಿರೀಕ್ಷಿತ ಚಾಲಕ ರಹಿತ ಮೆಟ್ರೋ ರೈಲು ಸಂಚಾರ ಆರಂಭ ಮುಂದೂಡಿಕೆಯಾಗುತ್ತಿದೆ.

**ಆರಂಭಿಕ ಪರೀಕ್ಷೆಯೂ ಯಶಸ್ವಿ:** ಬೊಮ್ಮಸಂದ್ರ ಮತ್ತು ಬೊಮ್ಮನಹಳ್ಳಿ ನಡುವೆ ಚಾಲಕ ರಹಿತ ರೈಲಿನ ಸರಳ ಪರೀಕ್ಷಾರ್ಥ ಸಂಚಾರವನ್ನು

ಪುಟ 2

## ಬಾಕ್ಸ್ ಆಕಾರದಲ್ಲಿ ಕಾಮಗಾರಿ

**ಬೆಂಗಳೂರು:** ಚಾಲಕ ರಹಿತ ಮೆಟ್ರೋ ರೈಲು ಪರಿಚಯಿಸಿ ಇಡೀ ದೇಶದಲ್ಲೇ ಮಾದರಿಯಾಗಿರುವ ನಮ್ಮ ಮೆಟ್ರೋ ಇದೀಗ ಹೊಸ ಮೈಲಿಗಲ್ಲು ಸಾಧಿಸಿದೆ. ಹೊಸ ಹೊಸ ತಂತ್ರಜ್ಞಾನದ ಬಳಕೆಗೆ ಮುಂದಾದ ನಮ್ಮ ಮೆಟ್ರೋ ಇದೀಗ ಮತ್ತೊಂದು ಪ್ರಯೋಗ ಮಾಡಿದೆ. ಇಷ್ಟು ದಿನ ವೃತ್ತಾಕಾರದ ಮಾರ್ಗವಾಗಿ ಅಂಡರ್ ಗ್ರೌಂಡ್ ಕಾಮಗಾರಿ ಮಾಡಿ ಯಶಸ್ವಿಯಾಗಿದ್ದ ಬಿಎಂಆರ್ ಸಿಎಲ್ ಇದೀಗ ಬಾಕ್ಸ್ ಆಕಾರದಲ್ಲಿ ಕಾಮಗಾರಿ ಮಾಡಿ ಸಕ್ಸಸ್ ಆಗಿದೆ.

ದೇಶದಲ್ಲಿ ಇದೇ ಮೊದಲ ಬಾರಿಗೆ ಬಾಕ್ಸ್ ಆಕಾರದಲ್ಲಿ ಮೆಟ್ರೋ ಸುರಂಗ ಮಾರ್ಗ ಕಾಮಗಾರಿ



ಮಾಡಲಾಗಿದೆ. 77 ಮೀಟರ್ ಅಗಲದ ಬಾಕ್ಸ್ ಪುಶಿಂಗ್ ಟೆಕ್ನಾಲಜಿ ಬಳಕೆ ಮಾಡಿ ನಾಗವಾರದ ಔಟರ್ ರಿಂಗ್ ರೋಡ್ ಬಳಿ ಮೆಟ್ರೋ ಕಾಮಗಾರಿ ನಡೆಸಲಾಗುತ್ತಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಮತ್ತೆ ಹಾಟ್ ಸಿಟಿಯೊಗುತ್ತಿದೆ ಬೆಂಗಳೂರು!



**ಬೆಂಗಳೂರು:** ಮಳೆಯಾದ ಕಾರಣ ಬೆಂಗಳೂರಿನಲ್ಲಿ ಕಳೆದ ಒಂದು ವಾರದಿಂದ ವಾತಾವರಣ ತುಸು ತಣ್ಣಗಾಗಿತ್ತು. ಆದರೆ, ಈಗ ಮತ್ತೆ ಬಿಸಿಲಿನ ಪ್ರಮಾಣ ಹಾಗೂ ಉಷ್ಣಾಂಶ ಜಾಸ್ತಿಯಾಗುತ್ತಿದೆ. ಕಳೆದ ಒಂದು ವಾರದ ಅವಧಿಯಲ್ಲಿ ನಗರದಲ್ಲಿ ಉಷ್ಣಾಂಶದ ಪ್ರಮಾಣದಲ್ಲಿ ಶೇ 2-3ರಷ್ಟು ಹೆಚ್ಚಳವಾಗಿದೆ. ಒಂದು ತಿಂಗಳ ಹಿಂದೆ ಸಿಲಿಕಾನ್ ಸಿಟಿ ಕಾದ ಕೆಂಡವಾಗಿತ್ತು. ನಂತದಲ್ಲಿ ಒಂದು ವಾರಗಳ ಕಾಲ ಮಳೆಯಾಗಿ ತಂಪಾಗಿತ್ತು. ಈಗ ಮತ್ತೆ ವಾತಾವರಣ ಬದಲಾಗುತ್ತಿದೆ. ಕಳೆದ ವಾರ ಗರಿಷ್ಠ ಉಷ್ಣಾಂಶ 29 ರಿಂದ 30 ಡಿಗ್ರಿ ಇತ್ತು. ಈ ವಾರ ದಿಢೀರ್ ಗರಿಷ್ಠ ಉಷ್ಣಾಂಶ 3 ರಿಂದ 4 ಡಿಗ್ರಿ ಏರಿಕೆಯಾಗಿದೆ. ಜೊತೆಗೆ ಬಿಸಿಗಾಳಿ ಗಾಳಿಯ ಪ್ರಮಾಣವು ಜಾಸ್ತಿಯಾಗಿದೆ.

ಪುಟ 2

### ಪೋಸ್ಟ್ ಆಫೀಸ್ ಮುಂದೆ ಮಹಿಳೆಯರ ನೂಕುನುಗ್ಗಲು!



**ಬೆಂಗಳೂರು:** ಇಂಡಿಯಾ ಮೈತ್ರಿಕೂಟ ಅಧಿಕಾರಕ್ಕೆ ಬಂದ ನಂತರದ ದಿನವೇ ಮಹಿಳೆಯರ ಖಾತೆಗೆ ?ಟಕಾ ಟಕ್ ಹಣ? ಜಮಾವಣೆ ಮಾಡಲಾಗುವುದು ಎಂಬ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಘೋಷಣೆ ಪರಿಣಾಮ, ಪೋಸ್ಟ್ ಆಫೀಸ್‌ಗಳಲ್ಲಿ ಖಾತೆ ತೆರೆಯಲು ಮಹಿಳೆಯರು ಮುಗಿಬಿದ್ದಿದ್ದಾರೆ. ಇವರಲ್ಲಿ ಹೆಚ್ಚಾಗಿ ಮುಸ್ಲಿಂ ಮಹಿಳೆಯರೇ ಕಂಡು ಬರುತ್ತಿದ್ದಾರೆ.ಲೋಕಸಭೆ ಚುನಾವಣೆ ಪ್ರಚಾರದಲ್ಲಿ ಇಂಡಿಯಾ ಒಕ್ಕೂಟ, ಅಧಿಕಾರ ಬಂದ ಕೂಡಲೇ ಸರ್ಕಾರ ನಿಮ್ಮ ಖಾತೆಗೆ ಹಣ ಜಮಾವಣೆ ಮಾಡುವುದಾಗಿ ಘೋಷಣೆ ಮಾಡಿತ್ತು.

ಪುಟ 2

## ನಾಳೆ ಏಳನೇ ಹಂತದ ಮತದಾನ

# ಅಂತಿಮ ಕಸರತ್ತು

**ಉತ್ತರ ಪ್ರದೇಶ:** ಏಪ್ರಿಲ್ 19ರಿಂದ ದೇಶದಲ್ಲಿ ಏಳು ಹಂತಗಳಲ್ಲಿ ಆರಂಭವಾದ ಲೋಕಸಭಾ ಚುನಾವಣೆ ಪ್ರಕ್ರಿಯೆ ಇದೀಗ ಅಂತಿಮ ಹಂತ ತಲುಪಿದೆ. ಏಳನೇ ಮತ್ತು ಕೊನೆಯ ಹಂತದ ಮತದಾನ ಜೂನ್ 1 ರಂದು ನಡೆಯಲಿದೆ. ಇಂದು ಸಂಜೆಯ ವೇಳೆಗೆ ಚುನಾವಣಾ ಪ್ರಚಾರದ ಅಬ್ಬರ ನಿಲ್ಲಲಿದೆ. ಅಂತಿಮ ಹಂತಕ್ಕೆ ಎಲ್ಲ ಪಕ್ಷಗಳ ಹಿರಿಯ ನಾಯಕರು ಕ್ಷೇತ್ರದಲ್ಲಿ ಅಬ್ಬರಿಸಲಿದ್ದು, ಸಾರ್ವಜನಿಕರಲ್ಲಿ ತಮ್ಮ ಅಭಿಪ್ರಾಯ ಮಂಡಿಸಿ ಮತದಾರರನ್ನು ಸೆಳೆಯಲಿದ್ದಾರೆ. ಈ ಕೊನೆಯ ಹಂತದಲ್ಲಿ 8 ರಾಜ್ಯಗಳ 57 ಸ್ಥಾನಗಳಿಗೆ ಮತದಾನ ನಡೆಯಲಿದೆ. ಉತ್ತರ ಪ್ರದೇಶದಲ್ಲಿ 13, ಪಂಜಾಬ್‌ನಲ್ಲಿ 13, ಪಶ್ಚಿಮ ಬಂಗಾಳದಲ್ಲಿ 9, ಬಿಹಾರದಲ್ಲಿ 8, ಒಡಿಶಾದಲ್ಲಿ 6, ಹಿಮಾಚಲ ಪ್ರದೇಶದಲ್ಲಿ 4, ಜಾರ್ಖಂಡ್‌ನಲ್ಲಿ 3 ಮತ್ತು ಚಂಡೀಗಢದಲ್ಲಿ 1 ಸ್ಥಾನಗಳು ಸೇರಿವೆ.

ಪ್ರಧಾನಿ ನರೇಂದ್ರ ಮೋದಿ ಅವರು ಪಂಜಾಬ್‌ನ ಹೋಶಿಯಾರ್‌ಪುರದಲ್ಲಿ ತಮ್ಮ ಕೊನೆಯ ಸಾರ್ವಜನಿಕ ಸಭೆ ನಡೆಸಲಿದ್ದು, ಅಲ್ಲಿ ಬೆಳಗ್ಗೆ 11 ಗಂಟೆಗೆ ಬೃಹತ್ ಫತೇಹ್ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇದೇ ವೇಳೆ ಕಾಂಗ್ರೆಸ್ ನ ಸ್ಟಾರ್ ಪ್ರಚಾರಕ ರಾಹುಲ್ ಗಾಂಧಿ ಒಡಿಶಾದ ಬಾಲಸೋರ್ ಜಿಲ್ಲೆಯಲ್ಲಿ ಪ್ರಚಾರ ನಡೆಸಲಿದ್ದಾರೆ. ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಅವರು ಶಿಮ್ಲಾ ಸಂಸದೀಯ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವಿನೋದ್ ಸುಲ್ತಾನಪುರಿ ಪರವಾಗಿ ಮಧ್ಯಾಹ್ನ 1 ಗಂಟೆಗೆ ಸೋಲನ್‌ನ ಮಾಲ್ ರಸ್ತೆಯಲ್ಲಿ ರೋಡ್ ಶೋ ನಡೆಸಲಿದ್ದಾರೆ.



ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ವೀರೇಂದ್ರ ಚೌಧರಿ ಅವರನ್ನು ಬೆಂಬಲಿಸಿ ಎಸ್‌ಪಿ ಮುಖ್ಯಸ್ಥ ಅಖಿಲೇಶ್ ಯಾದವ್ ಮಹಾರಾಜಂಗಜ್‌ನಲ್ಲಿ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಪಂಜಾಬ್ ಗೆ ಭೇಟಿ ನೀಡುತ್ತಿದ್ದು, ಚುನಾವಣಾ ಪ್ರಚಾರದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ಕೊನೆಯ ಹಂತದಲ್ಲಿ 904 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ವಾರಾಣಸಿ ಲೋಕಸಭಾ ಕ್ಷೇತ್ರದ ಬಗ್ಗೆ ಹೆಚ್ಚು ಚರ್ಚೆಯಾಗುತ್ತಿದೆ.

ಪುಟ 2

## ಪ್ರಜ್ವಲ್ ನಿಜಕ್ಕೂ ಬರ್ತಾರಾ?

# ಕೌಂಟ್‌ಡೌನ್



**ಬೆಂಗಳೂರು:** ನಾಳೆ ಎಸ್‌ಐಟಿ ಎದುರು ಹಾಜರಾಗುವುದಾಗಿ ಪ್ರಜ್ವಲ್ ರೇವಣ್ಣ ಬಿಡುಗಡೆ ಮಾಡಿದ ವಿಡಿಯೋದಲ್ಲಿ ಹೇಳಿರುವ ಹಾಗೂ ಇಂದು ಮಧ್ಯಾಹ್ನ ಜರ್ಮನಿಯ ಮ್ಯೂನಿಚ್‌ನಿಂದ ಪ್ರಜ್ವಲ್ ರೇವಣ್ಣ ಹೆಸರಲ್ಲಿ ಫ್ಲೈಟ್ ಟಿಕೆಟ್ ಬುಕ್ ಮಾಡಿರುವ ಹಿನ್ನೆಲೆಯಲ್ಲಿ, ಹಾಸನ ಸಂಸದರ ಬಂಧನಕ್ಕೆ ಪೊಲೀಸರು ಕ್ಷಣಗಣನೆ ಆರಂಭಿಸಿದ್ದಾರೆ.

ಫ್ಲೈಟ್ ಟಿಕೆಟ್ ಬುಕ್ ಮಾಡಿರುವ ಆಧಾರದಂತೆ ಇಂದು ಮಧ್ಯರಾತ್ರಿ ಪ್ರಜ್ವಲ್ ರೇವಣ್ಣ ಬೆಂಗಳೂರಿಗೆ ಆಗಮಿಸಲಿದ್ದಾರೆ. ಮಧ್ಯರಾತ್ರಿ 12.35ಕ್ಕೆ ಟರ್ಮಿನಲ್ 2ಗೆ ಆಗಮಿಸಲಿರುವ ಪ್ರಜ್ವಲ್ ಅನ್ನು ಸ್ವಾಗತಿಸಲು ಟರ್ಮಿನಲ್ 2ನಲ್ಲಿ ಎಸ್‌ಐಟಿ ತಂಡ ಬೀಡು ಬಿಟ್ಟಿದೆ. ಮಧ್ಯಾಹ್ನ 3 ಗಂಟೆಗೆ ಪ್ರಜ್ವಲ್ ವಿಮಾನ ಹತ್ತಿದ್ದಾರೆಯೇ ಇಲ್ಲವೇ ಎಂಬುದು ಖಚಿತವಾಗಲಿದೆ. ಪ್ರಜ್ವಲ್ ವಿಡಿಯೋ ಮಾಡಿ ಕಳಿಸಿರುವುದು ಎಲ್ಲಿಂದ ಎಂಬುದನ್ನು ನಿನ್ನೆಯೇ ಎಸ್‌ಐಟಿ ಪತ್ತೆ ಹಚ್ಚಿದೆ. ಯುರೋಪ್‌ನ ಹಂಗೇರಿನಿಂದ ಈ ವಿಡಿಯೋ ಬಿಡುಗಡೆಯಾಗಿದೆ. ಅಲ್ಲಿಂದ ಮ್ಯೂನಿಚ್‌ಗೆ ಬಂದು ಪ್ರಜ್ವಲ್ ವಿಮಾನ ಹಿಡಿಯಬೇಕಿದೆ. ಹಂಗೇರಿ, ಬುಡಾಪೆಸ್ಟ್, ಜರ್ಮನಿ ಎಂದು ಕಳೆದ ಒಂದು ತಿಂಗಳಿನಿಂದ ಪ್ರಜ್ವಲ್ ಓಡಾಡುತ್ತಿದ್ದಾರೆ.

ಪುಟ 2

## ಲೇಔಟ್‌ಗೆ ಪರವಾನಗಿ ನೀಡಲು ಲಂಚ ಕೇಳಿದ್ದ ಅಧಿಕಾರಿ ಬಲೆಗೆ

# ಕೊಪ್ಪಳದಲ್ಲಿ ಲೋಕಾಯುಕ್ತ ದಾಳಿ

**ಕೊಪ್ಪಳ:** ಕೊಪ್ಪಳದಲ್ಲಿ ಲೋಕಾಯುಕ್ತ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಲೇಔಟ್ ಗೆ ಪರವಾನಗಿ ನೀಡಲು ಲಂಚ ಕೇಳಿದ್ದ ಅಧಿಕಾರಿಯೊಬ್ಬರನ್ನು ಬಂಧಿಸಿದ್ದಾರೆ. ಕೊಪ್ಪಳ ಜಿಲ್ಲಾಧಿಕಾರಿ ಕಚೇರಿ ಸಂಕೀರ್ಣದಲ್ಲಿರುವ ಕಚೇರಿಯಲ್ಲಿ ಲಂಚ ಪಡೆಯುತ್ತಿದ್ದಾಗ ಅಧಿಕಾರಿ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ. ಬಂಧಿತ ಅಧಿಕಾರಿಯನ್ನು ಕೊಪ್ಪಳ ನಗರ ಮತ್ತು ಗ್ರಾಮಾಂತರ ಯೋಜನೆ ಇಲಾಖೆಯ ರಮೇಶ್ ಬಸವಗೌಡ ಎಂದು ಗುರುತಿಸಲಾಗಿದೆ.

ರಮೇಶ್ ಇಲಾಖೆಯಲ್ಲಿ ಟೌನ್ ಪ್ಲ್ಯಾನರ್ ಆಗಿ ಕಾರ್ಯನಿರ್ವಹಣೆ ಮಾಡುತ್ತಿದ್ದರು. ಲೇಔಟ್





ಪರವಾನಗಿ ನೀಡಲು ಎಂಟು ವ್ಯಕ್ತಿಯೊಬ್ಬರ ಬಳಿ ಲಕ್ಷ ರೂಪಾಯಿಗೆ ಡಿಮ್ಯಾಂಡ್ ಮಾಡಿದ್ದರು. ಖಾಸಗಿ ಸಹಾಯಕನ ಮೂಲಕ ಹಣಕ್ಕೆ ಡಿಮ್ಯಾಂಡ್ ಇಟ್ಟಿದ್ದರು. ಕೊಪ್ಪಳ ಜಿಲ್ಲೆಯ ಕುಕನೂರ ಮೂಲದ ರವಿಚಂದ್ರ ಅನ್ನೋರ ಬಳಿ ಹಣಕ್ಕೆ ಬೇಡಿಕೆ ಇಟ್ಟಿದ್ದರು.

ರವಿಚಂದ್ರ ಎಂಬವರಿಂದ ಮೂರು ಲಕ್ಷ ರೂಪಾಯಿ ಹಣ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ರಮೇಶ್ ಬಲೆಗೆ ಬಿದ್ದಿದ್ದಾರೆ. ಕೊಪ್ಪಳ ಲೋಕಾಯುಕ್ತ ಪಿಐ ಸುನೀಲ್ ಮೇಗಲಮನಿ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದೆ. ರಾಯಚೂರು ಲೋಕಯುಕ್ತ ಎಸ್ಪಿ ಮಾರ್ಗದರ್ಶನದಲ್ಲಿ ಈ ದಾಳಿ ನಡೆದಿದೆ.

ಎರಡು ದಿನ ಹಿಂದಷ್ಟೇ ಬೆಳಗಾವಿ ಸೇರಿದಂತೆ ರಾಜ್ಯದ ಕೆಲವು ಕಡೆಗಳಲ್ಲಿ ಲೋಕಾಯುಕ್ತ ಪೊಲೀಸ್,

ಪುಟ 2

# ಪಟಾಕಿ ಸ್ಫೋಟ

## 20ಕ್ಕೂ ಹೆಚ್ಚು ಮಂದಿಗೆ ಗಂಭೀರ ಗಾಯ

**ಒಡಿಶಾ:** ಒಡಿಶಾದ ಪುರಿಯಲ್ಲಿ ಜಗನ್ನಾಥ ಉತ್ಸವದ ಸಂದರ್ಭದಲ್ಲಿ ಪಟಾಕಿ ಸ್ಫೋಟಗೊಂಡು 20ಕ್ಕೂ ಅಧಿಕ ಮಂದಿ ಗಾಯಗೊಂಡಿರುವ ಘಟನೆ ನಡೆದಿದೆ. ಗಾಯಗೊಂಡಿರುವ ಹಲವರ ಸ್ಥಿತಿ ಚಿಂತಾಜನಕವಾಗಿದೆ ಎಂದು ವರದಿಯಾಗಿದೆ. ಚಂದನ್ ಯಾತ್ರೆ ಆಚರಣೆಯ ಅಂಗವಾಗಿ ನರೇಂದ್ರ ಕೊಳದಲ್ಲಿ ನಡೆದ ಟ್ರಿನಿಟಿಯ ಚಾಪಾ ಖೇಲಾ ಕಾರ್ಯಕ್ರಮದಲ್ಲಿ ಈ ಘಟನೆ ನಡೆದಿದೆ.

ಪುಟ 2



## ಪ್ರಧಾನಿ ಮೋದಿ ಧ್ಯಾನ ಸುದ್ದಿ ಟಿವಿಯಲ್ಲಿ ಪ್ರಸಾರವಾದ್ರೆ ಚುನಾವಣಾ ಆಯೋಗಕ್ಕೆ

# ದೂರು ಕೊಡ್ತೀನಿ

**ಪಶ್ಚಿಮ ಬಂಗಾಳ:** ಕನ್ಯಾಕುಮಾರಿಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಧ್ಯಾನವನ್ನು ದೂರದರ್ಶನದಲ್ಲಿ ಪ್ರಸಾರ ಮಾಡಿದರೆ ಚುನಾವಣಾ ಆಯೋಗಕ್ಕೆ ದೂರು ನೀಡಲಾಗುವುದು ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಎಚ್ಚರಿಕೆ ನೀಡಿದ್ದಾರೆ.



ಸ್ಪಷ್ಟವಾಗಿ ಮಾದರಿ ನೀತಿ ಸಂಹಿತೆಯ ಉಲ್ಲಂಘನೆಯಾಗುತ್ತದೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ. ಮೇ 30 ರಂದು ಲೋಕಸಭಾ ಚುನಾವಣಾ ಪ್ರಚಾರ ಮುಗಿದ ನಂತರ ಪ್ರಧಾನಿ ನರೇಂದ್ರ ಮೋದಿ ಕನ್ಯಾಕುಮಾರಿಗೆ ಭೇಟಿ ನೀಡಲಿದ್ದಾರೆ.

ಸ್ವಾಮಿ ವಿವೇಕಾನಂದರಿಗೆ ಗೌರವ ಸಲ್ಲಿಸಲು ನಿರ್ಮಿಸಲಾದ ರಾಕ್ ಸ್ಮಾರಕದಲ್ಲಿ ಪ್ರಧಾನಿ ಧ್ಯಾನ ಮಾಡಲಿದ್ದಾರೆ. ಪ್ರಧಾನಿ ಮೋದಿ ಧ್ಯಾನ ಮಾಡಬಹುದು ಆದರೆ ದೂರದರ್ಶನದಲ್ಲಿ ಪ್ರಸಾರ ಮಾಡಲು ಸಾಧ್ಯವಿಲ್ಲ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ. ಇದು ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗಲಿದ್ದು, ಚುನಾವಣಾ ಆಯೋಗಕ್ಕೆ ದೂರು ನೀಡಲಾಗುವುದು ಎಂದಿದ್ದಾರೆ.

ಧ್ಯಾನ ಮಾಡುವಾಗ ಕ್ಯಾಮರಾಗಳ ಅಗತ್ಯವಿದೆಯೇ ಎಂಬ ಪ್ರಶ್ನೆಯನ್ನು ಅವರು ಕೇಳಿದರು. 2019ರಲ್ಲೂ ಚುನಾವಣಾ ಪ್ರಚಾರದ ಬಳಿಕ ಪ್ರಧಾನಿ ಕೇದಾರನಾಥದ ಧ್ಯಾನ ಗುಹೆಗೆ ತೆರಳಿದ್ದರು ಎಂದು ಹೇಳಿದರು.

ಪುಟ 2

## ಹಾವೇರಿ ಜನರ ಜೀವ ಹಿಂಡುತ್ತಿದೆ ಡೆಂಗ್ಯೂ

# ಶೇ.80 ರಷ್ಟು ಮಕ್ಕಳಲ್ಲಿ ಜ್ವರ

**ಹಾವೇರಿ:** ಮುಂಗಾರು ಮಳೆ ಪ್ರಾರಂಭವಾಗಿ ಇನ್ನು ಒಂದು ವಾರ ಕಳೆದಿಲ್ಲ. ಮುಂಗಾರು ಈಗ ಚುರುಕು ಪಡೆಯುತ್ತಿದೆ. ಆದರೆ ಹಾವೇರಿ ಜಿಲ್ಲೆಯಲ್ಲಿ ಮಹಾಮಾರಿ ಡೆಂಗ್ಯೂ ಜನರ ಜೀವನನ್ನ ಹಿಂಡುತ್ತಿದೆ. ಜಿಲ್ಲೆಯಲ್ಲಿಯೇ ಶೇಕಡಾ 80 ರಷ್ಟು ಮಕ್ಕಳಲ್ಲಿ ಡೆಂಗ್ಯೂ ಜ್ವರದ ಲಕ್ಷಣ ಕಂಡು ಬಂದಿದ್ದು ಜಿಲ್ಲಾಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಜಿಲ್ಲೆಯಲ್ಲಿ 162 ಪ್ರಕರಣಗಳು ಪತ್ತೆಯಾಗಿದ್ದು ಈ ಪೈಕಿ 108 ಮಕ್ಕಳಲ್ಲಿ ಡೆಂಗ್ಯೂ ಲಕ್ಷಣಗಳು ಕಾಣಿಸಿಕೊಂಡಿವೆ.

ಜಿಲ್ಲಾಸ್ಪತ್ರೆಯಲ್ಲಿಯೇ 50 ಕ್ಕೂ ಹೆಚ್ಚು ಡೆಂಗ್ಯೂ ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಪ್ರಸಕ್ತ ವರ್ಷದಲ್ಲಿ ಹಾವೇರಿ-10, ಬ್ಯಾಡಗಿ-30, ರಾಣೇಬೆನ್ನೂರು-18, ಹಿರೇಕೆರೂರು-20, ರಟ್ಟಿಹಳ್ಳಿ-08, ಶಿಗ್ಗಾಂವಿ-06, ಸವಣೂರು-01, ಹಾನಗಲ್-69 ಸೇರಿ ಒಟ್ಟು 162 ಕೇಸ್‌ಗಳು ಪತ್ತೆಯಾಗಿವೆ. ಇದರಿಂದ ಚಿಕ್ಕಮಕ್ಕಳು ಆಸ್ಪತ್ರೆಯಲ್ಲಿ ನರಳಾಡುತ್ತಿದ್ದಾರೆ. ಹೀಗಾಗಿ ಆರೋಗ್ಯ ಇಲಾಖೆ ಡೆಂಗ್ಯೂ ತಡೆಗಟ್ಟಲು ಎಲ್ಲ ಮುನ್ನೆಚ್ಚರಿಕೆ ಕ್ರಮವನ್ನು ಅನುಸರಿಸಲು ಮುಂದಾಗಿದೆ. ಜೊತೆಗೆ ಜನರು ಸಹ ಕರಿಸುವಂತೆ ಮನವಿ ಮಾಡಿದೆ.

ಕಳೆದ ವರ್ಷ ಅಂದರೆ 2023ರಲ್ಲಿ ಜಿಲ್ಲೆಯಲ್ಲಿ



ಕೇವಲ 24 ಡೆಂಗ್ಯೂ ಕೇಸ್ ಪತ್ತೆಯಾಗಿದ್ದವು. ಆದರೆ ಈ ವರ್ಷ ಡೆಂಗ್ಯೂ ಪ್ರಕರಣ ಬಹಳ ಹೆಚ್ಚಾಗಿದೆ ಕಾರಣ ಕಳೆದ ಬಾರಿಯ ಬರಗಾಲ ಮತ್ತು ನೀರಿನ ಕೊರತೆ. ನೀರಿನ ಸಮಸ್ಯೆ ಇದ್ದ ಕಾರಣ ಜನರು ನೀರನ್ನ ಶೇಖರಣೆ ಮಾಡಿ ಬಳಕೆ ಮಾಡಿದ್ದಾರೆ. ಶೇಕರಣೆ ಮಾಡಿದ ನೀರಿನಲ್ಲಿ ಎಡಿಎಸ್ ಅನ್ನೋ ಸೊಳ್ಳೆ ಉತ್ಪತ್ತಿಯಾಗಿ ರೋಗ ಉಲ್ಬಣಗೊಂಡಿದೆ. ಹೀಗಾಗಿ ಸುತ್ತಮುತ್ತಲಿನ ಪರಿಸರವನ್ನ ಸ್ವಚ್ಚವಾಗಿ ಇಟ್ಟಕೊಳ್ಳಬೇಕು. ಸೊಳ್ಳೆಬತ್ತಿ, ಸೊಳ್ಳೆ ಪರದೆ ಹಾಗೂ ಮನೆಯ ಮುಂದೆ ನೀರು ನಿಲ್ಲದಂತೆ ಎಚ್ಚರವಹಿಸಬೇಕು. ಇದರಿಂದ ಈ ಡೆಂಗ್ಯೂವನ್ನು ತಡೆಗಟ್ಟಬಹದು.

ಪುಟ 2

## ಫೈರಿಂಗ್ ವೇಳೆ ಗಾಯಗೊಂಡ ರೌಡಿಶೀಟರ್

# ಸಿಪಿಐ ಮೇಲೆ ಚಾಕು ಇರಿದು ಪರಾರಿಗೆ ಯತ್ನ

**ಬೀದರ್:** ಬೀದರ್ ನಗರದಲ್ಲಿ ರಾತ್ರಿ ಪೊಲೀಸರ ಬಂದೂಕು ಗುಂಡಿನ ಸದ್ದು ಮಾಡಿದೆ. ಬೀದರ್‌ನ ನ್ಯೂಟೌನ್ ಪೊಲೀಸ್ ಠಾಣೆಯ ಸಿಪಿಐ ಸಂತೋಷ್ ಅವರು ಆತ್ಮರಕ್ಷಣೆಗಾಗಿ ರೌಡಿಶೀಟರ್ ರಸೂಲ್ ಮೇಲೆ ಗುಂಡು ಹಾರಿಸಿದ್ದರು. ಆದರೆ ರೌಡಿಶೀಟರ್ ನನ್ನು ಚಿಕಿತ್ಸೆಗೆ ಎಂದು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾಗ ಸಿಪಿಐ ಸಂತೋಷ್ ಮೇಲೆ ರೌಡಿಶೀಟರ್ ಚಾಕುವಿನಿಂದ ದಾಳಿ ನಡೆಸಿದ್ದಾನೆ. ತಪ್ಪಿಸಿಕೊಳ್ಳಲು ಯತ್ನಿಸಿ ಸಿಪಿಐ ಕೈಗೆ ಚಾಕುವಿನಿಂದ ಇರಿದಿದ್ದಾನೆ.

ರೌಡಿಶೀಟರ್ ರಸೂಲ್‌ಗೆ ಚಿಕಿತ್ಸೆಗೆಂದು ನ್ಯೂಟೌನ್ ಪೊಲೀಸ್ ಠಾಣೆಯಿಂದ ಆಸ್ಪತ್ರೆಗೆ ಕರೆದೊಯ್ಯುವಾಗ ಕಿರಿಕ್ ಆಗಿದ್ದು ತಪ್ಪಿಸಿಕೊಳ್ಳಲು ಯತ್ನಿಸಿ ಸಿಪಿಐ ಕೈಗೆ ಚಾಕುವಿನಿಂದ ಇರಿದಿದ್ದಾನೆ. ಸದ್ಯ ಗಾಯಗೊಂಡ ಸಿಪಿಐ ಸಂತೋಷ್ ಅವರಿಗೆ ಬ್ರಿಮ್ಸ್ ಜಿಲ್ಲಾಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ



ಕೊಡಿಸಲಾಗಿದ್ದು ರೌಡಿಶೀಟರ್‌ಗೂ ಚಿಕಿತ್ಸೆ ಮುಂದುವರೆದಿದೆ. ರೌಡಿಶೀಟರ್ ರಸೂಲ್ ಮಾರಕ ಖಾಯಿಲೆಗೆ ತುತ್ತಾಗಿದ್ದು ಚಿಕಿತ್ಸೆ ನೀಡಲಾಗುತ್ತಿದೆ.

ಬೀದರ್‌ನ ಹೃದಯ ಭಾಗದಲ್ಲಿರುವ ಸಾಯಿ ಸ್ಕೂಲ್ ಆವರಣದ ಬಳಿ ರಾತ್ರಿ ಫೈಯರಿಂಗ್ ನಡೆದಿತ್ತು. ರಸೂಲ್ ತಪ್ಪಿಸಿಕೊಳ್ಳಲು ಯತ್ನಿಸಿದಾಗ ಸಿಪಿಐ ಸಂತೋಷ್ ಗಾಳಿಯಲ್ಲಿ ಒಂದು ಸುತ್ತು ಗುಂಡು ಹಾರಿಸಿದ್ದರು.

ಪುಟ 2

# ಪೆನ್‌ಡ್ರೈವ್ ಹಂಚಿಕೆ ಪ್ರಕರಣ: ನವೀನ್ ಗೌಡ, ಚೇತನ್ ಗೌಡ 3 ದಿನ ಎಸ್‌ಐಟಿ ವಶಕ್ಕೆ

**ಹಾಸನ:** ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾದ ಅಶ್ಲೀಲ ವೀಡಿಯೋ ಇರುವ ಪೆನ್‌ಡ್ರೈವ್ ಹಂಚಿಕೆ ಆರೋಪದಡಿ ಮಂಗಳವಾರ ಬೆಂಗಳೂರಿನಲ್ಲಿ ಬಂಧನಕ್ಕೊಳಗಾಗಿರುವ ಇಬ್ಬರು ಆರೋಪಿಗಳಾದ ನವೀನ್ ಗೌಡ ಹಾಗೂ ಚೇತನ್ ಗೌಡರನ್ನು ನ್ಯಾಯಾಲಯ ಮೂರು ದಿನಗಳ ಕಾಲ ಎಸ್‌ಐಟಿ ವಶಕ್ಕೆ ನೀಡಿದೆ. ಬುಧವಾರ ಇಬ್ಬರನ್ನೂ ಹಿಮ್ಸ್ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ ನಂತರ ಹಾಸನದ ಎರಡನೇ ಅಧಿಕ ಹಿರಿಯ ಸಿವಿಲ್ ಮತ್ತು ಜೆಎಂಎಫ್‌ಸಿ ಕೋರ್ಟ್ ಮುಂದೆ ಹಾಜರು ಪಡಿಸಲಾಯಿತು. ವಿಚಾರಣೆ ನಡೆಸಿದ ನ್ಯಾಯಾಧೀಶರು ಬುಧವಾರದಿಂದ ಜೂ.1ರವರೆಗೆ ಎಸ್‌ಐಟಿ ಕಸ್ಟಡಿಗೆ ನೀಡಿ ಆದೇಶಿಸಿದರು. ಜೂನ್ 1ರ ಶನಿವಾರ ಸಂಜೆ 4:30 ಕ್ಕೆ ಮತ್ತೆ ಕೋರ್ಟ್‌ಗೆ ಹಾಜರುಪಡಿಸಲು ತಿಳಿಸಲಾಗಿದೆ.



ಇಂದು ಇಬ್ಬರು ಆರೋಪಿಗಳನ್ನು ಸ್ಥಳ ಮಹಜರಿಗೆ ಕರೆದೊಯ್ಯಲಿದ್ದು, ಪೆನ್‌ಡ್ರೈವ್ ಹಂಚಿಕೆ ಹಿಂದೆ ಇರುವ ಕಾಣದ ಕೈಗಳ ಬಗ್ಗೆ ಆರೋಪಿಗಳಿಂದ ಸಾಕ್ಷ್ಯ ಸಂಗ್ರಹಕ್ಕೆ ಎಸ್‌ಐಟಿ ಮುಂದಾಗಿದೆ.

# ಕಾಲೇಜಿನಲ್ಲಿ ಜೈ ಶ್ರೀರಾಮ್ ಹಾಡು ಹಾಕಿದ್ದಕ್ಕೆ ಮಾರಾಮಾರಿ

**ಬೀದರ್:** ಕಾಲೇಜಿನಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದ ವೇಳೆ ಜೈ ಶ್ರೀರಾಮ್ ಹಾಡು ಹಾಕಿದ್ದಕ್ಕೆ 2 ಸ್ಟೂಡೆಂಟ್ಸ್ ಗುಂಪುಗಳ ನಡುವೆ ಮಾರಾಮಾರಿ ನಡೆದಿದೆ. ನಗರದ ಜಿಎನ್‌ಡಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಈ ಘಟನೆ ನಡೆದಿದೆ. ಹಲ್ಲೆ ಮಾಡಿ ಪರಾರಿಯಾಗಿದ್ದ ಬಶೀರ್ ಖಾನ್, ಗಫರಾನ್, ಶೇಕ್ ಪಾಷಾ, ಬಿಲಾಲ್ ಸೇರಿದಂತೆ 17 ಕ್ಕೂ ಹೆಚ್ಚು ಅನ್ಯ ಗುಂಪಿನ ಸ್ಟೂಡೆಂಟ್ಸ್ ಮೇಲೆ ಎಫ್‌ಐಆರ್ ದಾಖಲಾಗಿದೆ. ಹಲ್ಲೆಗೊಳಗಾದ ಇಂಜಿನಿಯರಿಂಗ್ ವಿದ್ಯಾರ್ಥಿ ನಟರಾಜ್ ನೀಡಿದ ದೂರಿನ ಮೇಲೆ ಈ ಎಫ್‌ಐಆರ್ ದಾಖಲಾಗಿದೆ.

**ಘಟನೆ ವಿವರ:** ಕಾಲೇಜು ಫೆಸ್ಟ್‌ನಲ್ಲಿ ಜೈ ಶ್ರೀರಾಮ್ ಹಾಡು ಹಾಕಲಾಗಿತ್ತು. ಈ ವೇಳೆ ಉದ್ದೇಶ ಪೂರ್ವಕವಾಗಿ ಅನ್ಯ ಕೋಮಿನ ಸ್ಟೂಡೆಂಟ್ಸ್ ನಮ್ಮ ಮೇಲೆ ಹಲ್ಲೆ ಮಾಡಿದ್ದಾರೆ. ಕೈಯಲ್ಲಿದ್ದ ಖಡ್ಗ ಹಾಗೂ ಕೈಯಿಂದ ತಲೆ, ಮೂಗು, ಹಣೆ ಮೇಲೆ ಮನಬಂದಂತೆ ಥಳಿಸಿದ್ದಾರೆ ಎಂದು ಗಾಂಧಿಗಂಜ್ ಪೊಲೀಸ್ ಠಾಣೆಯಲ್ಲಿ ದಾಖಲಿಸಿದ ಎಫ್‌ಐಆರ್‌ನಲ್ಲಿ ವಿದ್ಯಾರ್ಥಿ ನಟರಾಜ್ ಉಲ್ಲೇಖ ಮಾಡಿದ್ದಾರೆ.



# ಆಸ್ಪತ್ರೆಯಲ್ಲೇ ಯುವತಿಯ ರೇಪ್!

**ಮಂಗಳೂರು:** ಚಿಕಿತ್ಸೆಗೆಂದು ಯುವತಿಯನ್ನು ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದ ಪರಿಚಯಸ್ಥನೇ ಆಸ್ಪತ್ರೆಯಲ್ಲಿ ನಿರಂತರ ಅತ್ಯಾಚಾರ ಎಸಗಿದ ಘಟನೆ ಮಂಗಳೂರಿನಲ್ಲಿ ನಡೆದಿದೆ.




ಕೇರಳ ಮೂಲದ ಸಜಿತ್ ಎಂಬಾತನನ್ನು ಕದ್ರಿ ಪೊಲೀಸರು ಬಂಧಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಫೈಲ್ಸ್ ಗೆ ಚಿಕಿತ್ಸೆಗೆ ಯುವತಿಯನ್ನು ಮಂಗಳೂರಿನ ಎ.ಜೆ ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದ ಸಜಿತ್, ಚಿಕಿತ್ಸೆಯ ಬಳಿಕ ಆಸ್ಪತ್ರೆಯ ಕೊಠಡಿಯಲ್ಲಿದ್ದ ವೇಳೆ ಯುವತಿಯ ಮೇಲೆ ಆರೋಪಿ ಅತ್ಯಾಚಾರ ಮಾಡಿದ್ದಾನೆ. ಬಳಿಕ ಆಕೆಯ ನಗ್ನ ಫೋಟೋಗಳನ್ನ ತೆಗೆದಿದ್ದು, ಬೆದರಿಕೆ ಹಾಕುತ್ತಿದ್ದ.

ಆ ಬಳಿಕ ನಗ್ನ ಫೋಟೋ ಇದೆ ಎಂದು ಬೆದರಿಸಿ, ಆಕೆಯನ್ನು ಮಂಗಳೂರಿನ ಮಹಾರಾಜ ಹೋಟೇಲ್‌ಗೆ ಕರೆಸಿಕೊಂಡು ಅಲ್ಲಿನ ಕೊಠಡಿಯಲ್ಲಿ ಅತ್ಯಾಚಾರ ನಡೆಸಿದ್ದಾನೆ. ಅದಾದ ಬಳಿಕ ಯುವತಿ ಫುಡ್ ಫಾಯಿಸನ್ ಆಗಿ ನಗರದ ಫಾದರ್ ಮುಲ್ಲರ್ಸ್ ಆಸ್ಪತ್ರೆಗೆ ದಾಖಲಾದಾಗ ಅಲ್ಲೂ ಕೊಠಡಿಯಲ್ಲಿ ಅತ್ಯಾಚಾರ ಮಾಡಿದ್ದಾನೆಂದು ಯುವತಿ ಕದ್ರಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾಳೆ. ಪ್ರಕರಣ ದಾಖಲಿಸಿಕೊಂಡ ಕದ್ರಿ ಪೊಲೀಸರು ಆರೋಪಿಯನ್ನ ಬಂಧಿಸಿದ್ದಾರೆ.

# ಕಾಸರಗೋಡಿನಲ್ಲಿ ಲವ್ ಜಿಹಾದ್ ಆರೋಪ ಹಿಂದೂ ಶಿಕ್ಷಕಿಯ ಮದ್ವೆಯಾದ ಮುಸ್ಲಿಂ ಯುವಕ!

**ಮಂಗಳೂರು:** ಕರ್ನಾಟಕದ ಗಡಿನಾಡು ಕಾಸರಗೋಡಿನಲ್ಲಿ ಮತ್ತೆ ಲವ್ ಜಿಹಾದ್ ಸದ್ದು ಕೇಳಿ ಬಂದಿದೆ. ಕಾಸರಗೋಡಿನ ಬದಿಯಡ್ಕ ನಿವಾಸಿ ಹಿಂದೂ ಯುವತಿ ನಾಪತ್ತೆಯಾಗಿದ್ದು, ಇದೀಗ ಅನ್ಯಕೋಮಿನ ಯುವಕನ ಜೊತೆ ಮದುವೆಯಾಗಿ ಪೊಲೀಸ್ ಠಾಣೆಗೆ ಹಾಜರಾಗಿದ್ದಾಳೆ. ಕಾಸರಗೋಡಿನ ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಕಿಯಾಗಿದ್ದ ನೇಹಾ ಮೇ 23 ರಂದು ಮನೆಯಿಂದ ತೆರಳಿದ್ದು ಬಳಿಕ ದಿಢೀರ್ ನಾಪತ್ತೆಯಾಗಿದ್ದಳು. ಈ ಬಗ್ಗೆ ಆಕೆಯ ತಂದೆ ಬದಿಯಡ್ಕ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಕೇಸ್ ದಾಖಲಿಸಿದ್ದರು. ಅಲ್ಲದೇ ಅಪಹರಣದ ಅನುಮಾನ ವ್ಯಕ್ತಪಡಿಸಿದ್ದರು. ಇದಾದ ಬಳಿಕ ಬದಿಯಡ್ಕದ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಮದುವೆಯಾಗಿದ್ದ ಯುವತಿ ನೇಹಾ ಹಾಗೂ ಯುವಕ ಮಿರ್ಶಾದ್ ಭಾವಚಿತ್ರ ಸಹಿತ ನೋಟೀಸ್ ಅಲ್ಲಿನ ಬೋರ್ಡ್ ನಲ್ಲಿ ಪತ್ತೆಯಾಗಿತ್ತು. ಇದೀಗ ಇಬ್ಬರೂ ಬದಿಯಡ್ಕ ಪೊಲೀಸ್ ಠಾಣೆಗೆ ಹಾಜರಾಗಿದ್ದು, ಪೊಲೀಸರು ಕಾಸರಗೋಡು ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದಾರೆ. ಈ ವೇಳೆ ಯುವತಿ ಸ್ವ-ಇಚ್ಛೆಯಿಂದ ಯುವಕನ ಜೊತೆ ತೆರಳಿದ್ದಾಗಿ ಹೇಳಿಕೆ ನೀಡಿದ್ದಾಳೆ.



**ವಿಎಚ್‌ಪಿ ಕಿಡಿ:** ಈಕೆಯನ್ನ ಲವ್ ಜಿಹಾದ್ ಗೆ ಬಲಿಯಾಗಿಸಲಾಗಿದೆ ಎಂದು ಮನೆಯವರು ಹಾಗೂ ವಿಎಚ್ ಪಿ ಆರೋಪಿಸಿದೆ. ಸ್ಥಳೀಯ ಮುಸ್ಲಿಂ ಲೀಗ್ ನಾಯಕ ಷಡ್ಯಂತ್ರ ರೂಪಿಸಿ ಪ್ರೇಮಾಂಕುರವಾಗುವಂತೆ ಮಾಡಿದ್ದಾನೆ, ಹಿಂದೂ ಯುವತಿಯನ್ನ ಮುಸ್ಲಿಂ ಧರ್ಮಕ್ಕೆ ಮತಾಂತರಿಸಲು ಭಾರೀ ಸಂಚು ನಡೆಸಿದ್ದಾರೆಂದು ವಿಎಚ್ ಪಿ ಮುಖಂಡರು ಆರೋಪಿಸಿದ್ದಾರೆ.

# ಪಂಜುರ್ಲಿ ಅಭಯ ನಿಜವಾಯ್ತು ಕೊಲೆ ಆರೋಪಿ ನ್ಯಾಯಾಲಯಕ್ಕೆ ಶರಣು!

**ಉಡುಪಿ:** ಕೊಲೆ ಪಾತಕಿ ಎಲ್ಲೇ ಅವಿತ್ತಿದ್ದರೂ ಕಣ್ಣ ಮುಂದೆ ತಂದು ನಿಲ್ಲಿಸುತ್ತೇನೆ ಎಂಬ ದೈವದ ಅಭಯ ನಿಜವಾಗಿದೆ. ಮಗನನ್ನು ಕಳೆದುಕೊಂಡು ಒಂದು ವರ್ಷದಿಂದ ಕಣ್ಣೀರು ಸುರಿಸುತ್ತಿದ್ದ ತಾಯಿಗೆ ವರ್ತೆ ಪಂಜುರ್ಲಿ ದೈವ ನ್ಯಾಯ ಕೊಡಿಸಿದೆ. ಗೆಳೆಯನ ಕೊಂದ ಆರೋಪಿ ಕೋರ್ಟ್ ಮುಂದೆ ಶರಣಾಗಿದ್ದಾನೆ. ಒಂದು ವರ್ಷ ಎರಡು ತಿಂಗಳ ಹಿಂದಿನ ಆ ಸಂಜೆ ಕರಾಳವಾಗಿತ್ತು. ಫೆಬ್ರವರಿ 5, 2023 ರಂದು ಉಡುಪಿ ಜಿಲ್ಲೆಯ ಕಾಪು ತಾಲೂಕು ಅಂದು ಬೆಚ್ಚಿಬಿದ್ದಿತ್ತು. ಚೂರಿ ಇರಿತಕ್ಕೆ ಒಳಪಟ್ಟು ಶರತ್ ಶೆಟ್ಟಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಬಿದ್ದಿದ್ದರು. ಗೆಳೆಯರೇ ಅವರನ್ನು ಊರಿನ ದೈವ ನೇಮೋತ್ಸವದ ಸ್ಥಳದಿಂದ ಹೊರಗೆ ಕರೆದು ರಸ್ತೆ ಬದಿಯಲ್ಲಿ ಡ್ರ್ಯಾಗರ್ ನಿಂದ ಚುಚ್ಚಿ ಕೊಂದು ಹಾಕಿದ್ದರು. ಸ್ಥಳದಿಂದ ಆರು ಆರೋಪಿಗಳು ಪರಾರಿಯಾಗುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿತ್ತು.





**ಹತ್ಯೆಯಾದ ಶರತ್ ಶೆಟ್ಟಿ:** ದೈವ ಭಕ್ತನಾಗಿ 30 ವರ್ಷಗಳಿಂದ ಮನೆಯಲ್ಲಿ ವರ್ತೆ ಪಂಜುರ್ಲಿ ದೈವದ ಸೇವೆ ಮಾಡಿಕೊಂಡಿದ್ದ ಶರತ್ ಸಾವು ಇಡೀ ಕುಟುಂಬವನ್ನು ದಿಗ್ಭ್ರಮೆ ಮಾಡಿತ್ತು. ಮಾರ್ಚ್ 2023ರಲ್ಲಿ ಮನೆಯಲ್ಲಿ ನೇಮೋತ್ಸವ ಸೇವೆ ಕೊಟ್ಟು ಕುಟುಂಬ ನೋವು ಹೇಳಿಕೊಂಡು ಕಣ್ಣೀರಿಟ್ಟಿತ್ತು. ಕೊಂದ ಆರೋಪಿ ಎಲ್ಲೂ ಹೋಗುವುದಿಲ್ಲ. ಆತನೇ ಬಂದು ಶರಣಾಗುತ್ತಾನೆ ನೋಡಿ ಎಂದು ವರ್ತೆ ಪಂಜುರ್ಲಿ ಅಭಯ ನೀಡಿತ್ತು.

ದೈವದ ಮಾತು ಈಗ ನಿಜವಾಗಿದೆ. ತಲೆಮರೆಸಿಕೊಂಡಿದ್ದ ಪ್ರಕರಣದ ಪ್ರಮುಖ ಆರೋಪಿ ಯೋಗೀಶ್ ಆಚಾರ್ಯ ತಾನೇ ತಾನಾಗಿ ಬಂದು ನ್ಯಾಯಾಲಯದ ಮುಂದೆ ಶರಣಾಗಿದ್ದಾನೆ. ಅಂಡರ್ ವರ್ಲ್ಡ್ ಲಿಂಕ್ ಹೊಂದಿದ್ದ ಈ ಕೊಲೆಯಲ್ಲಿ ಎಲ್ಲಾ ಪ್ರಮುಖ ಐದು ಮಂದಿ ಆರೋಪಿಗಳು ಶರಣಾಗಿದ್ದರೂ ಪ್ರಮುಖ ಆರೋಪಿ ಯೋಗೀಶ್ ಆಚಾರ್ಯ ತಲೆಮರೆಸಿಕೊಂಡಿದ್ದ.

ಶರತ್ ಶೆಟ್ಟಿ ಭೂ ವ್ಯವಹಾರ ನಡೆಸುತ್ತಿದ್ದರು. ಭೂ ವ್ಯವಹಾರದಲ್ಲಿ ಉಂಟಾದ ಸಂಘರ್ಷವೇ ಕೊಲೆಗೆ ಕಾರಣವಾಗಿತ್ತು. ಮಗನನ್ನು ಕಳೆದುಕೊಂಡ ನಂತರ ಶರತ್ ತಾಯಿ ಸುಲೋಚನಾ ಮೌನಕ್ಕೆ ಶರಣಾಗಿದ್ದಾರೆ. ಆರೋಪಿಗೆ ಕಠೋರ ಶಿಕ್ಷೆಯಾಗಬೇಕು ಎಂದಷ್ಟೇ ಹೇಳಿ ಕಣ್ಣೀರು ಹಾಕಿದ್ದಾರೆ. ಮೃತ ಶರತ್ ಸಹೋದರಿ ರೇಷ್ಮಾ ಮತ್ತು ಶರ್ಮಿಳಾ ಮಾತನಾಡಿ ನಮ್ಮ ತಂದೆ ತಾಯಿಗೆ ಇಬ್ಬರು ಹೆಣ್ಣು ಮಕ್ಕಳು ಓರ್ವ ಗಂಡು ಮಗ. ಆತನೇ ಇಡೀ ಕುಟುಂಬಕ್ಕೆ ಆಧಾರ ಎಂದು ಅಂದುಕೊಂಡಿದ್ದೆವು. ನಮ್ಮ ತಾಯಿಯನ್ನು ನಮ್ಮ ಸಹೋದರ ಶರತ್ ನೋಡಿಕೊಳ್ಳುತ್ತಿದ್ದ. ಆತನಿಗೆ ಏಳೆಂಟು ವರ್ಷ ವಯಸ್ಸು ಇದ್ದಾಗಲೇ ಅವನು ದೈವದೇವರ ಚಾಕರಿಯನ್ನು ಮಾಡಿಕೊಂಡು ಬರುತ್ತಿದ್ದ. ಅವನನ್ನು ಕೊಂದ ಆರೋಪಿಗಳಿಗೆ ಸೂಕ್ತ ಕಠಿಣ ಶಿಕ್ಷೆ ಆಗಬೇಕು. ನಮ್ಮ ತಾಯಿಯ ಕಣ್ಣೀರು ಆರೋಪಿಗಳನ್ನು ಹಾಗೆ ಸುಮ್ಮನೆ ಬಿಡುವುದಿಲ್ಲ ಎಂದಿದ್ದಾರೆ. ದೈವ ತಾನು ಕೊಟ್ಟ ಮಾತು ಉಳಿಸಿಕೊಂಡಿದೆ. ಕುಟುಂಬಕ್ಕೆ ಪ್ರಮುಖ ಆರೋಪಿ ಯಾರೆಂದು ಪಕ್ಕಾ ಆಗಿದೆ. ಆರೋಪಿಯ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಕುಟುಂಬ ಒತ್ತಾಯಿಸಿದೆ. ಆರೋಪಿ ನ್ಯಾಯಾಂಗ ಬಂಧನದಲ್ಲಿದ್ದು ಪೊಲೀಸರು ಕಸ್ಟಡಿಗೆ ಪಡೆದು ವಿಚಾರಣೆ ನಡೆಸಿದಾಗ ಹಲವಾರು ಮಾಹಿತಿಗಳು ಬಹಿರಂಗವಾಗುವ ಸಾಧ್ಯತೆಯಿದೆ.

# ಅಧಿಕಾರಿ ಆತ್ಮಹತ್ಯೆ ಪ್ರಕರಣ: ನಾಗೇಂದ್ರ ರಾಜೀನಾಮೆಗೆ ಆಗ್ರಹ

**ಬೆಂಗಳೂರು:** ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿ ಇಲಾಖಾ ಸಚಿವ ನಾಗೇಂದ್ರ ಅವರು ಕೂಡಲೇ ರಾಜೀನಾಮೆ ಕೊಟ್ಟು ನಿಷ್ಪಕ್ಷಪಾತ ತನಿಖೆಗೆ ಅವಕಾಶ ಮಾಡಿಕೊಡಬೇಕು ಎಂದು ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಆಗ್ರಹಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ತನಿಖಾ ಸಂಸ್ಥೆಗಳಿಂದ ಇದರ ಸಮಗ್ರ ನಿಷ್ಪಕ್ಷಪಾತ ತನಿಖೆ ಮಾಡಲು ಅಸಾಧ್ಯ. ಆದ್ದರಿಂದ ಕೇಂದ್ರ ಸರ್ಕಾರದ ಏಜೆನ್ಸಿಗಳ ಮೂಲಕ ತನಿಖೆ ನಡೆಸಿ ಎಂದು ಒತ್ತಾಯಿಸಿದರು.

ಆತ್ಮಹತ್ಯೆ ಮಾಡಿಕೊಂಡ ಚಂದ್ರಶೇಖರ್ ಅವರು ಮಂತ್ರಿಗಳ ಮೌಖಿಕ ಆದೇಶದನ್ವಯ ಹಣ ವರ್ಗಾವಣೆ ಮಾಡಿದ್ದಾಗಿ ಬರೆದಿದ್ದಾರೆ. ಹಾಗಾದರೆ ಎಫ್‌ಐಆರ್‌ನಲ್ಲಿ ಸಚಿವರ ಹೆಸರು ಯಾಕೆ ಬಂದಿಲ್ಲ ಎಂದು ಪ್ರಶ್ನಿಸಿದರು. ಇದು ಸಂಶಯಕ್ಕೆ ಎಡೆ ಮಾಡಿಕೊಟ್ಟಿದೆ ಎಂದರು.

ಸರ್ಕಾರದ ಅಧೀನ ಸಂಸ್ಥೆಯಾದ ಸಿಐಡಿಯವರು ಮುಖ್ಯಮಂತ್ರಿಗಳು, ಸಚಿವರ ಬಗ್ಗೆ ತನಿಖೆ ಮಾಡಲು ಎಷ್ಟರಮಟ್ಟಿಗೆ ಸಾಧ್ಯ ಎಂದ ಅವರು, ನೈತಿಕತೆ ಇದ್ದರೆ ಸಚಿವರು ರಾಜೀನಾಮೆ ಕೊಡಬೇಕಿತ್ತು. ಬ್ಯಾಂಕ್ ಖಾತೆಯು ಎಂಡಿ ಮತ್ತು ಅಕೌಂಟ್ಸ್ ಅಧಿಕಾರಿಯ ಜಂಟಿ ಖಾತೆಯಾಗಿರುತ್ತದೆ. ಮಾರ್ಚ್‌ನಲ್ಲಿ ಹಣ ವರ್ಗಾವಣೆ ಆಗಿದೆ. ಮಾರ್ಚ್ 4ರಂದು 25 ಕೋಟಿ, 6ರಂದು 25 ಕೋಟಿ, ಮಾರ್ಚ್ 21ರಂದು 44 ಕೋಟಿ ವರ್ಗಾವಣೆ ಆಗಿದೆ. ರಾಜ್ಯ ಹುಜೂರ್ ಖಜಾನೆಯಿಂದ 43.33 ಕೋಟಿ ವರ್ಗಾವಣೆ ಆಗಿದೆ. ಬಳಿಕ ಮೇ 21ರಂದು 50 ಕೋಟಿ ವರ್ಗಾವಣೆ ಆಗಿದೆ ಎಂದು ವಿವರಿಸಿದರು.

**ಜಂಟಿ ಖಾತೆ ಇದ್ದಾಗ ಹೇಗೆ ವರ್ಗಾವಣೆ ಆಗಿದೆ:** ಬ್ಯಾಂಕಿನ ಪ್ರತಿ ತಿಂಗಳ ವಿವರ-ಹುಜೂರ್ ಖಜಾನೆಯ ವಿವರವನ್ನು ಪುನರ್ ಪರಿಶೀಲಿಸಲಿಲ್ಲವೇ ಎಂದ ಅವರು, ಮಾರ್ಚ್ 31ರಂದು ಹಣಕಾಸು ವರ್ಷ ಮುಕ್ತಾಯ ಆದ ಬಳಿಕ ಎಂಡಿ ಮತ್ತು ಇಲಾಖೆಯ ಸರ್ಕಾರದ ಮಟ್ಟದ ಅಧಿಕಾರಿಗಳು ಅದನ್ನು ಪರಿಶೀಲಿಸಬೇಕಿತ್ತು. ಹಣ ಖರ್ಚಾದ ಕುರಿತು ಪರಿಶೀಲನಾ ಸಭೆ ಮಾಡಿಲ್ಲವೇ ಸಭೆ ಮಾಡಿಲ್ಲವೆಂದಾದರೆ ಸರ್ಕಾರವೇ ಇದರಲ್ಲಿ ಶಾಮೀಲಾಗಿರುವುದೇ ಕಾರಣ. ಸರ್ಕಾರವು ಜವಾಬ್ದಾರಿಯಿಂದ ನುಣುಚಿಕೊಳ್ಳಲು ಇದನ್ನು ಮುಚ್ಚಿಟ್ಟಿದ್ದಾರೆ ಎಂದು ಆರೋಪಿಸಿದರು.

# ಶುಲ್ಕ ಪಾವತಿಗೆ ದಿನಾಂಕ ವಿಸ್ತರಣೆ: ಕೆಇಎ

**ಬೆಂಗಳೂರು:** 2024ನೇ ಸಾಲಿನ ಎರಡನೇ ವರ್ಷದ/ಮೂರನೇ ಸೆಮಿಸ್ಟರ್‌ನ ಎಂಜಿನಿಯರಿಂಗ್ ಕೋರ್ಸುಗಳ ಪ್ರವೇಶಕ್ಕಾಗಿ ಡಿಸಿಇಟಿ-24ಕ್ಕೆ ನೋಂದಣಿ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸದೇ ಇರುವ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸಲು ಮೇ 31ರವರೆಗೆ ಕೊನೆ ಅವಕಾಶ ನೀಡಲಾಗಿದೆ. ಶುಲ್ಕ ಪಾವತಿಸಿದ್ದು, ಆದರೆ ಪಾವತಿ ವಿಫಲವಾದ ಕಾರಣ ಬ್ಯಾಂಕಿನಿಂದ ಹಿಂತಿರುಗಿಸಲಾಗಿರುವ ಅಭ್ಯರ್ಥಿಗಳೂ ಸಹ ಮತ್ತೊಮ್ಮೆ ಶುಲ್ಕ ಪಾವತಿಸಬಹುದಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ ಅನ್ನು ನೋಡಲು ಕೋರಲಾಗಿದೆ.

## ಬಾಕ್ಸ್ ಆಕಾರದಲ್ಲಿ ಕಾಮಗಾರಿ

ನಾಗವಾರದ ORR ರೋಡ್ ನ ಮೇಲ್ಸೇತುವೆ ಕೆಳಗೆ ಸುರಂಗ ಮಾರ್ಗದ ಕಾಮಗಾರಿ ನಡೆಯುತ್ತಿದೆ. ಸದ್ಯ ಬಾಕ್ಸ್ ಪುಶಿಂಗ್ ಟೆಕ್ನಾಲಜಿ ಕಾಮಗಾರಿ ಯಶಸ್ವಿ ಬಗ್ಗೆ ಬಿಎಂಆರ್‌ಸಿಎಲ್ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಇನ್ನು ಕಾಳೇನ ಅಗ್ರಹಾರದಿಂದ ನಾಗವಾರದವರೆಗೆ 21.26 ಕಿ.ಮೀ. ಉದ್ದದ ಹೊಸ ಮಾರ್ಗವನ್ನು ಮಾರ್ಚ್ 2025ರ ಒಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. ಈ ಮಾರ್ಗ ಪೂರ್ಣಗೊಂಡರೆ ಕಾರ್ಯಾಚರಣೆ ಜಾಲವು 117 ಕಿ.ಮೀಗೆ ವಿಸ್ತರಣೆಗೊಳ್ಳಲಿದೆ.

ಸೆಂಟ್ರಲ್ ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಹೆಬ್ಬಾಳ ಜಂಕ್ಷನ್ ಮೂಲಕ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ (58 ಕಿ.ಮೀ) ಹಂತ 2ಎ ಮತ್ತು 2ಬಿ ಯೋಜನೆಗೆ 14788 ಕೋಟಿ ವೆಚ್ಚವಾಗುತ್ತಿದೆ. ಈ ಕಾಮಗಾರಿಯನ್ನು 2026ರ ವೇಳೆಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. ಈ ಯೋಜನೆಗೆ ರಾಜ್ಯ ಸರ್ಕಾರವೇ ಇದುವರೆಗೆ 4775 ಕೋಟಿ ಬಿಡುಗಡೆ ಮಾಡಿದೆ. ಈ ಯೋಜನೆ ಪೂರ್ಣಗೊಂಡ ನಂತರ ಮೆಟ್ರೊ ಜಾಲವು 176 ಕಿ.ಮೀಗೆ ವಿಸ್ತರಣೆ ಆಗಲಿದೆ.

## ಟೆಸ್ಟ್ ಜೂನ್ 7ರಿಂದ ಶುರು

ರೈಲು ಬೆಂಗಳೂರಿಗೆ ಬಂದ ತಕ್ಷಣವೇ ನಡೆಸಲಾಗಿದೆ. ಬೊಮ್ಮನಹಳ್ಳಿ ಮತ್ತು ಆರ್‌ವಿ ರಸ್ತೆ ನಡುವಣ ಎನರ್ಜೈಸೇಷನ್ ಪ್ರಕ್ರಿಯೆ ಮೇ 20 ರಂದು ಪೂರ್ಣಗೊಂಡಿತು. ಈಗ ಪೂರ್ಣ ಸ್ಟ್ರೆಚ್‌ನಲ್ಲಿ ಮುಖ್ಯ ಪರೀಕ್ಷೆಯನ್ನು ಮಾಡಬಹುದು ಎಂದು ಮೂಲಗಳು ತಿಳಿಸಿವೆ.

ಸಿಗ್ನಲ್ ಏಕೀಕರಣದ ಹೊರತಾಗಿ, ಮೂರನೇ ರೈಲು (ರೈಲು ಓಡಿಸಲು ವಿದ್ಯುತ್ ಪೂರೈಸುವ 750 ವೋಲ್ಟ್ ಟ್ರ್ಯಾಕ್) ಮತ್ತು ರೈಲು ಕಾರ್ಯಕ್ಷಮತೆ ಪರೀಕ್ಷೆಗಳನ್ನು ಕೂಡ ಮುಂದಿನ ದಿನಗಳಲ್ಲಿ ಮಾಡಲಾಗುತ್ತದೆ. ರೈಲನ್ನು ಆರಂಭದಲ್ಲಿ ನಿಧಾನಗತಿಯ ವೇಗದಲ್ಲಿ ಮತ್ತು ನಂತರ ಶಿಫಾರಸು ಮಾಡಿದ ವೇಗದಲ್ಲಿ ಓಡಿಸಲಾಗುತ್ತದೆ ಎಂದು ಮತ್ತೊಂದು ಮೂಲವು ತಿಳಿಸಿದೆ. ಬೆಂಗಳೂರು ಮೆಟ್ರೋಗೆ ರೈಲುಗಳನ್ನು ನಿಗದಿತ ರೀತಿಯಲ್ಲಿ ತಲುಪಿಸುವುದನ್ನು ಖಚಿತಪಡಿಸಿಕೊಳ್ಳಲು ರೋಬೋಟಿಕ್ ಆಟೊಮ್ಯಾಟಿಕ್ ಅಸೆಂಬ್ಲಿ ಲೈನ್ ಗಳನ್ನೂ ಸ್ಥಾಪಿಸಲಾಗಿದೆ ಎಂದು ಮೂಲಗಳನ್ನು ಉಲ್ಲೇಖಿಸಿ 'ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್' ವರದಿ ಮಾಡಿದೆ.

ಎರಡನೇ ಚಾಲಕ ರಹಿತ ರೈಲು ಆಗಸ್ಟ್ ನಲ್ಲಿ, ಮುಂದಿನ ರೈಲು ಸೆಪ್ಟೆಂಬರ್‌ನಲ್ಲಿ ಮತ್ತು ಡಿಸೆಂಬರ್‌ನೊಳಗೆ ಒಟ್ಟು ಮೂರು ರೈಲುಗಳ ಆಗಮನವಾಗಲಿದೆ. ಒಟ್ಟು ಆರು ರೈಲುಗಳಲ್ಲಿ, ಐದರ ಸಂಚಾರ ಡಿಸೆಂಬರ್ ವೇಳೆಗೆ ಆರಂಭವಾಗಲಿದೆ. ಒಂದು ರೈಲನ್ನು ಬ್ಯಾಕಪ್ ಆಗಿ ಬಿಎಂಆರ್‌ಸಿಎಲ್ ಇರಿಸಿಕೊಳ್ಳಲಿದೆ ಎಂದು ಮತ್ತೊಂದು ಮೂಲವು ತಿಳಿಸಿರುವುದಾಗಿ ವರದಿ ಉಲ್ಲೇಖಿಸಿದೆ.

## ಅಂತಿಮ ಕಸರತ್ತು

ಪ್ರಧಾನಿ ಮೋದಿ ಮೂರನೇ ಬಾರಿಗೆ ಇಲ್ಲಿಂದ ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ. ಇದಲ್ಲದೇ ಬಿಜೆಪಿಯ ಕಂಗನಾ ರಣಾವತ್ ಮತ್ತು ಕಾಂಗ್ರೆಸ್‌ನ ವಿಕ್ರಮಾದಿತ್ಯ ಸಿಂಗ್ ಮಂಡಿಯವರು.

ಗೋರಖ್‌ಪುರದಿಂದ ಬಿಜೆಪಿಯ ರವಿಕಿಶನ್ ಮತ್ತು ಸಮಾಜವಾದಿಯ ಕಾಜಲ್ ನಿಶಾದ್ ನಡುವೆ ಸ್ಪರ್ಧೆ ಇದೆ. ಬಿಜೆಪಿಯ ಅನುರಾಗ್ ಠಾಕೂರ್ ಮತ್ತು ಕಾಂಗ್ರೆಸ್‌ನ ಸತ್ಯಪಾಲ್ ಸಿಂಗ್ ರೈಜಾದಾ ಹಮೀರ್‌ಪುರದಿಂದ ಕಣದಲ್ಲಿದ್ದಾರೆ. ಡೈಮಂಡ್ ಹಾರ್ಬರ್‌ನಿಂದ ಟಿಎಂಸಿಯ ಅಭಿಷೇಕ್ ಬ್ಯಾನರ್ಜಿ ಮತ್ತು ಬಿಜೆಪಿಯ ಅಭಿಜಿತ್ ದಾಸ್ ನಡುವೆ ಸ್ಪರ್ಧೆ ಇದೆ.

ಪ್ರಧಾನಿ ಮೋದಿ ಮೂರನೇ ಬಾರಿಗೆ ಪ್ರಧಾನಿಯಾಗಲಿದ್ದಾರೆ ಎಂದು ಬಿಜೆಪಿ ಹೇಳುತ್ತಿದೆ. ಅದೇ ಸಮಯದಲ್ಲಿ, ಈ ಬಾರಿ ಜನರು ಮನಸ್ಸು ಮಾಡಿದ್ದಾರೆ ಮತ್ತು ಇಂಡಿಯಾ ಅಲೈಯನ್ಸ್ ಸರ್ಕಾರ ರಚಿಸುತ್ತದೆ ಎಂದು ಪ್ರತಿಪಕ್ಷಗಳ ನಾಯಕರು ಹೇಳಿಕೊಂಡಿದ್ದಾರೆ.

ಇಂದು ಕೊನೆಯ ಹಂತದ ಪ್ರಚಾರವನ್ನು ಮುಗಿಸಿದ ನಂತರ, ಪ್ರಧಾನಿ ಮೋದಿ ತಮಿಳುನಾಡಿನ

**ಮೊದಲನೇ ಪುಟದಿಂದ...**

ಕನ್ಯಾಕುಮಾರಿಯಲ್ಲಿರುವ ವಿವೇಕಾನಂದ ರಾಕ್ ಸ್ಮಾರಕವನ್ನು ತಲುಪಲಿದ್ದಾರೆ. ಪ್ರಧಾನಮಂತ್ರಿಯವರು ಇಂದು ಇಲ್ಲಿನ ಭಗವತಿ ದೇವಸ್ಥಾನಕ್ಕೆ ಮೊದಲು ಭೇಟಿ ನೀಡಿ ಪೂಜೆ ಸಲ್ಲಿಸಲಿದ್ದಾರೆ. ಸಂಜೆ ಕನ್ಯಾಕುಮಾರಿಯಲ್ಲಿ ಸೂರ್ಯಾಸ್ತವನ್ನೂ ವೀಕ್ಷಿಸಲಿದ್ದಾರೆ.

ಇಲ್ಲಿನ ಧ್ಯಾನ ಮಂಟಪದಲ್ಲಿ ಪ್ರಧಾನಿ ಧ್ಯಾನ ಮಾಡಲಿದ್ದಾರೆ. ಪ್ರಧಾನಿ ಭೇಟಿ ಹಿನ್ನೆಲೆಯಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಈ ಸಮಯದಲ್ಲಿ ಪ್ರವಾಸಿಗರ ಪ್ರವೇಶಕ್ಕೆ ನಿರ್ಬಂಧವಿರುತ್ತದೆ. 2 ಸಾವಿರ ಪೊಲೀಸರನ್ನು ನಿಯೋಜಿಸಲಾಗುವುದು. ಜೂನ್ 1 ರಂದು ಮಧ್ಯಾಹ್ನ ಮಹಾಕವಿ ತಿರುವಳ್ಳುವರ್ ಪ್ರತಿಮೆಗೆ ಪ್ರಧಾನಿ ಭೇಟಿ ನೀಡಿ ಮಾಲಾರ್ಪಣೆ ಮಾಡಲಿದ್ದಾರೆ.

ಇಂದು ಸಂಜೆಯ ನಂತರ ಪ್ರಚಾರಕ್ಕೆ ಅವಕಾಶ ನೀಡುವುದಿಲ್ಲ, ಮೋದಿ ಧ್ಯಾನ ಮಾಡಬಹುದು, ಆದರೆ ಟಿವಿ ಚಾನೆಲ್‌ಗಳು ಅದನ್ನು ಪ್ರಸಾರ ಮಾಡುವುದಿಲ್ಲ ಎಂದು ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಹೇಳಿದ್ದಾರೆ. ಪ್ರಸಾರ ಮಾಡುವುದರಿಂದ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗುತ್ತದೆ, ಯಾವುದೇ ಉಲ್ಲಂಘನೆ ಕಂಡುಬಂದಲ್ಲಿ ತಕ್ಷಣ ವರದಿ ಮಾಡಲಾಗುವುದು, ನಾನೇ ದೂರು ದಾಖಲಿಸುತ್ತೇನೆ. ಇದು ನೀತಿ ಸಂಹಿತೆ ಉಲ್ಲಂಘನೆ ಎಂದು ಕಾಂಗ್ರೆಸ್ ಕೂಡ ಹೇಳಿದೆ.

## ಕೌಂಟ್‌ಡೌನ್

ಅವರು ಇಲ್ಲೆಲ್ಲಾ ತಮ್ಮ ಗೆಳೆಯರ ಆಶ್ರಯ ಪಡೆದಿದ್ದರೇ, ಎಲ್ಲಿ ತಂಗಿದ್ದರು ಎಂಬ ಮಾಹಿತಿ ದೊರೆಯಬೇಕಿದೆ.

ಇನ್ನೊಂದೆಡೆ, ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ರೊಚ್ಚಿಗೆದ್ದಿರುವ ಮಹಿಳಾ ಸಂಘಟನೆಗಳು, ಕೆಂಪೇಗೌಡ ವಿಮಾನ ನಿಲ್ದಾಣದ ಮುಂದೆ ಪ್ರತಿಭಟನೆಗೆ ಇಳಿಯಲು ಸಿದ್ಧತೆ ನಡೆಸಿವೆ. ಹಾಸನದಲ್ಲಿ ಇಂದು ಪ್ರಜ್ವಲ್ ರೇವಣ್ಣ ಬಂಧನಕ್ಕೆ ಆಗ್ರಹಿಸಿ ನೂರಕ್ಕೂ ಹೆಚ್ಚು ಸಂಘಟನೆಗಳಿಂದ ಬೃಹತ್ ಪ್ರತಿಭಟನೆ ನಡೆಯುತ್ತಿದೆ. ಜಿಲ್ಲೆಯ ವಿವಿಧ ಭಾಗಗಳಿಂದ 10 ಸಾವಿರಕ್ಕೂ ಹೆಚ್ಚು ಹೋರಾಟಗಾರರು ಆಗಮಿಸುವ ಸಾಧ್ಯತೆ ಇದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಹಾಸನದಲ್ಲಿ ಪೊಲೀಸ್ ಬಿಗಿ ಭದ್ರತೆ ಹಾಕಲಾಗಿದೆ.

**ನಿಜಕ್ಕೂ ವಾಪಸಾಗ್ತಾರಾ ಪ್ರಜ್ವಲ್?:** ಪ್ರಜ್ವಲ್ ರೇವಣ್ಣ ಕುಟುಂಬ ಸಲ್ಲಿಸಿದ ಜಾಮೀನು ಅರ್ಜಿಗಳೆಲ್ಲವೂ ಕೂಡ ನ್ಯಾಯಾಲಯದಲ್ಲಿ ಇತ್ಯರ್ಥವಾಗದೆ ಮುಂದೂಡಿಕೆ ಆಗುತ್ತಲೇ ಇವೆ. ಹೀಗಾಗಿ ಪ್ರತಿ ದಿನ ರೇವಣ್ಣ ಕುಟುಂಬ ಟೆನ್ಷನ್‌ನಲ್ಲಿರಬೇಕಾಗಿದೆ. ನಿನ್ನೆ ನಡೆದ ಭವಾನಿ ರೇವಣ್ಣ ಅವರ ಸುದೀರ್ಘ ವಿಚಾರಣೆ ಬಳಿಕವೂ ವಿಚಾರಣೆಯನ್ನು ಮುಂದೂಡಲಾಗಿದೆ. ಈ ಬೆಳವಣಿಗೆಯಿಂದ ಪ್ರಜ್ವಲ್ ವಾಪಸಾಗ್ತಾರಾ ಎಂಬುದೇ ಅನುಮಾನಕ್ಕೀಡು ಮಾಡಿದೆ.

ಪ್ರಜ್ವಲ್ ಬರುತ್ತಿದ್ದಂತೆ ಎಸ್‌ಐಟಿ ಅಧಿಕಾರಿಗಳು ಪ್ರಜ್ವಲ್‌ರನ್ನು ಬಂಧಿಸಲು ಸಿದ್ಧರಾಗಿದ್ದಾರೆ. ಅದಕ್ಕೂ ಮುನ್ನ ಹೈ ಅಲರ್ಟ್ ಆದ ಪ್ರಜ್ವಲ್ ರೇವಣ್ಣ, ಇದೇ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಿರೀಕ್ಷಣಾ ಜಾಮೀನು ಅರ್ಜಿ ಸಲ್ಲಿಸಿದ್ದಾರೆ. ಇದಕ್ಕೆ ಅವಕಾಶ ನೀಡದ ನ್ಯಾಯಾಲಯ, ಮೊದಲು ಅವರು ಬರಲಿ ಆಮೇಲೆ ನೋಡೋಣ, ಮೇ 31ಕ್ಕೆ ಅರ್ಜಿ ವಿಚಾರಣೆ ಮಾಡೋಣ ಅಂತ ಹೇಳಿ ಋಋಋ ಅಧಿಕಾರಿಗಳಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಿದ್ದಾರೆ. ಸದ್ಯ 3 ಪ್ರಕರಣಗಳಲ್ಲೂ ನಿರೀಕ್ಷಣಾ ಜಾಮೀನಿಗೆ ಪ್ರಜ್ವಲ್ ಅರ್ಜಿ ಸಲ್ಲಿಸಿದ್ದಾರೆ. ಸಿಐಡಿ ಪೊಲೀಸ್ ಠಾಣೆ, ಸೈಬರ್ ಕ್ರೈಂ ಠಾಣೆ, ಹೊಳೆನರಸೀಪುರ ಠಾಣೆಗಳಲ್ಲಿ ಕೇಸ್ ದಾಖಲಾಗಿವೆ.

ಮೈಸೂರಿ ಕೆ.ಆರ್. ನಗರ ಠಾಣೆಯ ಸಂತ್ರಸ್ತ ಮಹಿಳೆಯ ಕಿಡ್ನಾಪ್ ಕೇಸ್ ವಿಚಾರದಲ್ಲಿ ಭವಾನಿ ರೇವಣ್ಣಗೆ ಬಂಧನದ ಭೀತಿ ಶುರುವಾಗಿದೆ. ಇದೇ ವಿಚಾರಕ್ಕೆ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಿರೀಕ್ಷಣಾ ಜಾಮೀನು ಅರ್ಜಿ ಸಲ್ಲಿಸಿದ್ದು, ಎಸ್‌ಐಟಿ ಕೂಡಾ ಆಕ್ಷೇಪಣಾ ಅರ್ಜಿ ಸಲ್ಲಿಸಿ ಯಾವುದೇ ಕಾರಣಕ್ಕೂ ಭವಾನಿ ರೇವಣ್ಣಗೆ ಜಾಮೀನು ಮಂಜೂರು ಮಾಡಬಾರದು ಎಂದು ಆಕ್ಷೇಪ ವ್ಯಕ್ತಪಡಿಸಿದೆ. ವಾದ ಪ್ರತಿವಾದ ಆಲಿಸಿದ ನ್ಯಾಯಾಧೀಶರು ಭವಾನಿ ರೇವಣ್ಣಗೆ ನಿರೀಕ್ಷಣಾ ಜಾಮೀನು ವಿಚಾರದ ಆದೇಶವನ್ನು ಮೇ 31ಕ್ಕೆ ಮುಂದೂಡಿದ್ದಾರೆ.

ತನಿಖೆಗೆ ಸಹಕರಿಸುವುದಾಗಿ ಪ್ರಜ್ವಲ್ ಹೇಳಿದ್ದಾರೆ. ಆದರೆ ನಿರೀಕ್ಷಣಾ ಜಾಮೀನು ಸಿಗದ ಹಿನ್ನೆಲೆಯಲ್ಲಿ, ಬಂಧನ ತಪ್ಪಿಸಿಕೊಳ್ಳಲು ಅಲ್ಲೇ ಉಳಿಯುವ ಚಿಂತನೆ ಮಾಡುವ ಸಾಧ್ಯತೆಯೂ ಇದೆ. ಕಳೆದ ಬಾರಿಯೂ ಋಋಋ ವಿಚಾರಣೆಗೆ ಬರಲು ಪ್ರಜ್ವಲ್ ಒಂದು ವಾರ ಕಾಲಾವಕಾಶ ಕೇಳಿದ್ದರು. ಆದರೆ ಒಂದು ತಿಂಗಳ ನಂತರವೂ ಎಸ್‌ಐಟಿ ವಿಚಾರಣೆಗೆ ಬಂದಿಲ್ಲ.

## ದೂರು ಕೊಡ್ತೀನಿ

ಈ ಬಾರಿ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅತ್ಯುತ್ತಮ ಪ್ರದರ್ಶನ ನೀಡಲಿದೆ ಎಂಬ ಪ್ರಧಾನಿ ಹೇಳಿಕೆಯನ್ನು ಟಿಎಂಸಿ ಮುಖ್ಯಸ್ಥೆ ತಿರಸ್ಕರಿಸಿದ್ದಾರೆ . ಈ ಬಾರಿ ಬಿಜೆಪಿ ಅಧಿಕಾರಕ್ಕೆ ಮರಳಿದರೆ ದೇಶದಲ್ಲಿ ಯಾವುದೇ ರಾಜಕೀಯ ಪಕ್ಷ, ಚುನಾವಣೆಗಳು, ಸ್ವಾತಂತ್ರ್ಯ ಧರ್ಮ, ಮಾನವೀಯತೆ ಮತ್ತು ಸಂಸ್ಕೃತಿ ಅಸ್ತಿತ್ವದಲ್ಲಿ ಇರುವುದಿಲ್ಲ ಎಂದು ಹೇಳಿದರು.

## ಲೋಕಾಯಕ್ತ ದಾಳಿ

ಅಧಿಕಾರಿಗಳು ದಾಳಿ ನಡೆಸಿದ್ದರು. ಬೆಳಗಾವಿ ಮಹಾನಗರ ಪಾಲಿಕೆ ಕಚೇರಿ ಮೇಲೂ ಲೋಕಾಯುಕ್ತ ದಾಳಿ ನಡೆದಿತ್ತು. ಕೆಲಸ ಕಾರ್ಯಗಳು ವಿಳಂಬವಾಗುತ್ತಿರುವ ಕುರಿತು ಸಾಕಷ್ಟು ದೂರುಗಳು ಕೇಳಿ ಬಂದ ಕಾರಣ ಲೋಕಾಯುಕ್ತ ಅಧಿಕಾರಿಗಳು ಕ್ರಮ ಕೈಗೊಂಡಿದ್ದರು. ಇದೀಗ ಕೊಪ್ಪಳದಲ್ಲಿಯೂ ಅಧಿಕಾರಿಯನ್ನು ಬಂಧಿಸಿದ್ದಾರೆ.

## ಪಟಾಕಿ ಸ್ಫೋಟ

ಮೂಲಗಳ ಪ್ರಕಾರ ಕೆರೆಯ ದೇವಿ ಘಾಟ್ ಬದಿಯಲ್ಲಿ ಪಟಾಕಿ ಸಿಡಿಸಲು ಅವಕಾಶವಿತ್ತು. ದುರದೃಷ್ಟವಶಾತ್, ಸಿಡಿದ ಪಟಾಕಿಗಳ ಕಿಡಿಗಳು ಪವಿತ್ರ ಕೊಳದಲ್ಲಿ ಜಲಕ್ರೀಡೆಯನ್ನು ವೀಕ್ಷಿಸಲು ನೆರೆದಿದ್ದ ಭಕ್ತರ ಮೇಲೆ ಬಿದ್ದವು.

ಗಾಯಾಳುಗಳನ್ನು ತಕ್ಷಣ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಶಸ್ತ್ರಚಿಕಿತ್ಸೆಯ ವಾರ್ಡ್‌ಗೆ ಸ್ಥಳಾಂತರಿಸುವ ಮೊದಲು ರೋಗಿಗಳನ್ನು ಹೊರಾಂಗಣ ವಿಭಾಗದಲ್ಲಿ ಚಿಕಿತ್ಸೆ ನೀಡಲಾಯಿತು. 18ಕ್ಕೂ ಹೆಚ್ಚು ಗಂಭೀರ ರೋಗಿಗಳನ್ನು ಕಟಕ್‌ನ ಎಸ್‌ಸಿಬಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ವರದಿಯಾಗಿದೆ.

ಕೆಲವು ರೋಗಿಗಳನ್ನು ಹೆಚ್ಚಿನ ವಿಶೇಷ ಆರೈಕೆಗಾಗಿ ಕಟಕ್ ಮತ್ತು ಭುವನೇಶ್ವರದ ಆಸ್ಪತ್ರೆಗಳಿಗೆ ವರ್ಗಾಯಿಸಬೇಕಾಯಿತು. ರೋಗಿಗಳನ್ನು ಆಸ್ಪತ್ರೆಗೆ ಸ್ಥಳಾಂತರಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ. ರೋಗಿಗಳನ್ನು ಸ್ಥಳಾಂತರಿಸಲಾಗುತ್ತಿದೆ ಎಂದರು.

ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ಮತ್ತು ಅವರ ಚಿಕಿತ್ಸೆಯ ಮೇಲ್ವಿಚಾರಣೆಯನ್ನು ಖಚಿತಪಡಿಸಿಕೊಳ್ಳಲು ಮುಖ್ಯ ಕಾರ್ಯದರ್ಶಿ ಮತ್ತು ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ ಎಂದು ಸಿಎಂ ನವೀನ್ ಪಟ್ನಾಯಕ್ ಎಕ್ಸ್ ನಲ್ಲಿ ಬರೆದಿದ್ದಾರೆ.

ಗಾಯಾಳುಗಳ ಎಲ್ಲಾ ವೈದ್ಯಕೀಯ ವೆಚ್ಚಗಳನ್ನು ಭರಿಸಲಾಗುವುದು. ಎಲ್ಲರೂ ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸುತ್ತಾ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಭರಿಸಲಾಗುವುದು ಎಂದು ಬರೆದಿದ್ದಾರೆ.

## ಇರಿದು ಪರಾರಿಗೆ ಯತ್ನ

ಈ ವೇಳೆ ರಸೂಲ್ ಗೆ ಸಣ್ಣ ಪುಟ್ಟ ಗಾಯಗಳಾಗಿದ್ದು ಚಿಕಿತ್ಸೆಗೆಂದು ಆಸ್ಪತ್ರೆಗೆ ಕರೆದುಕೊಂಡು ಹೋಗುವಾಗ ರಸೂಲ್ ಮತ್ತೆ ತಪ್ಪಿಸಿಕೊಳ್ಳಲು ಯತ್ನಿಸಿ ಚಾಕು ಇರಿದಿದ್ದಾನೆ. ಚಾಕು ಇರಿತದ ಬಳಿಕ ಆತ್ಮರಕ್ಷಣೆಗಾಗಿ ರಸೂಲ್ ಬಲಗಾಲಿಗೆ ಸಿಪಿಐ ಸಂತೋಷ ಫೈರ್ ಮಾಡಿದ್ದಾರೆ. ಸದ್ಯ ಗಾಯಗೊಂಡ ಸಿಪಿಐ ಸಂತೋಷಗೆ ಬ್ರಿಮ್ಸ್ ಜಿಲ್ಲಾಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನಡೆದಿದ್ದು ಮಾರಕ ಖಾಯಿಲೆಗೆ (ಹೆಚ್‌ಐವಿ) ತುತ್ತಾಗಿರೋ ರೌಡಿಶೀಟರ್ ರಸೂಲ್ ಗೆ ಹೆಚ್ಚಿನ ಚಿಕಿತ್ಸೆಗಾಗಿ ಕಲಬುರಗಿಯ ಖಾಸಗಿ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ. ಬ್ರಿಮ್ಸ್ ಜಿಲ್ಲಾಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ ಆಂಬುಲೆನ್ಸ್ ನಲ್ಲಿ ಕಲಬುರಗಿಗೆ ರವಾನಿಸಲಾಗಿದೆ.

## ಶೇ.80 ರಷ್ಟು ಮಕ್ಕಳಲ್ಲಿ ಜ್ವರ

ಮಕ್ಕಳಲ್ಲಿ ಜ್ವರ ಹಾಗೂ ವಾಂತಿ ಸೇರಿದಂತೆ ವಿವಿಧ ಲಕ್ಷಣಗಳು ಕಂಡುಬಂದಲ್ಲಿ ವೈದ್ಯರ ಬಳಿ ತೆರಳಿ ಚಿಕಿತ್ಸೆಯನ್ನ ಪಡೆಯಬೇಕು. ಅದರಲ್ಲಿ ಮಕ್ಕಳ ಬಗ್ಗೆ ಹೆಚ್ಚು ಜಾಗೃತಿವಹಿಸಬೇಕು ಎಂದು ಡಾ.ಸರಿತಾ ಸಲಹೆ ನೀಡಿದ್ದಾರೆ.

ಒಟ್ನಲ್ಲಿ ಹಾವೇರಿ ಜಿಲ್ಲೆಯಲ್ಲಿ ಕಳೆದ ವರ್ಷಕ್ಕೆ ಹೋಲಿಸಿದರೆ ಶೇಕಡಾ 80 ರಷ್ಟು ಡೆಂಗ್ಯೂ ಪ್ರಕರಣಗಳು ಹೆಚ್ಚಾಗಿದೆ. ಜಿಲ್ಲಾಡಳಿತ ಮತ್ತು ವೈದ್ಯರ ತಡ ಜನರಲ್ಲಿ ಜಾಗೃತಿ ಮೂಡಿಸಿ, ಡೆಂಗ್ಯೂ ಮಹಾಮಾರಿಯನ್ನ ತಡೆಗಟ್ಟಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಡೆಂಗ್ಯೂ ಇನ್ನು ಹೆಚ್ಚಾಗಿ ಆಸ್ಪತ್ರೆಯ ಬೆಡ್ ಫುಲ್ ಆಗಲಿದೆ. ಯಾರು ಬಯ ಪಡುವ ಅವಶ್ಯಕತೆ ಇಲ್ಲ. ಲಕ್ಷಣಗಳು ಕಂಡ ತಕ್ಷಣ ಸಮೀಪದ ಆಸ್ಪತ್ರೆಗೆ ಭೇಟಿ ನೀಡಿ ಸರಿಯಾದ ಸಮಯಕ್ಕೆ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಿ ಎಂದು ಚಿಕ್ಕಮಕ್ಕಳ ತಜ್ಞ ಡಾ.ಅಂಜನಕುಮಾರ ಸಲಹೆ ನೀಡಿದ್ದಾರೆ.

## ಬೆಂಗಳೂರು!

ಅಲ್ಲದೆ, ಬೆಳಗ್ಗೆ ತಣ್ಣನೆಯ ವಾತಾವರಣ, ಮಧ್ಯಾಹ್ನ ಸುಡುಬಿಸಿಲು ಹಾಗೂ ಸಂಜೆಯಾಗುತ್ತಿದ್ದಂತೆ ತುಸು ಚಳಿಯ ಅನುಭವ ಆಗುತ್ತಿದೆ.

ಇಂತಹ ಸಂದರ್ಭದಲ್ಲಿ ಆರೋಗ್ಯದ ಮೇಲೂ ನಿಗಾ ಇಡಬೇಕಾಗಿದೆ. ಹವಾಮಾನ ವೈಪರೀತ್ಯದ ಪರಿಣಾಮ ಸರಿಯಾಗಿ ಜೀರ್ಣವಾಗದೇ ಇರುವುದು, ಶೀತ, ಕೆಮ್ಮು, ಜ್ವರ, ತಲೆ ಭಾರದಂಥ ಸಮಸ್ಯೆಗಳು ಜಾಸ್ತಿಯಾಗಿವೆ. ಜೊತೆಗೆ ವಯಸ್ಕರಲ್ಲಿ ಉಸಿರಾಟ ಸಮಸ್ಯೆಗಳು ಹೆಚ್ಚಾಗುವ ಸಾಧ್ಯತೆಗಳೂ ಇದೆ ಎಂದು ತಜ್ಞರು ಹೇಳಿದ್ದಾರೆ.

ಬಂಗಾಳಕೊಲ್ಲಿಯ ಚಂಡಮಾರುತ ಉಂಟಾಗಿರುವ ಕಾರಣ ಅದರ ಪರಿಣಾಮ ರಾಜ್ಯದ ಮೇಲೂ ಆಗುತ್ತಿದೆ. ಗರಿಷ್ಠ ಉಷ್ಣಾಂಶದ ಪ್ರಮಾಣ ಕೊಂಚ ಜಾಸ್ತಿಯಾಗಿದೆ. ಸದ್ಯ ಬೆಂಗಳೂರಿನಲ್ಲಿ ಗರಿಷ್ಠ ಉಷ್ಣಾಂಶದ ಪ್ರಮಾಣ 32 ಡಿಗ್ರಿ ಸೆಲ್ಸಿಯಸ್ ಇದ್ದು, ಕಳೆದ ವಾರಕ್ಕೆ ಹೋಲಿಕೆ ಮಾಡಿದರೆ ಒಂದರಿಂದ ಎರಡು ಶೇಕಡ ಜಾಸ್ತಿಯಾಗಿದೆ. ಇನ್ನು ಮೂರ್ನಾಲ್ಕು ದಿನಗಳ ಕಾಲ ಇದೇ ರೀತಿಯ ವಾತಾವರಣ ಮುಂದುವರಿಯಲಿದ್ದು ಬಿಸಿಲು ಸಹ ಜಾಸ್ತಿ ಇರಲಿದೆ. ಮೇ 31 ರಂದು ಮುಂಗಾರು ಕೇರಳ ಪ್ರವೇಶಿಸಲಿದ್ದು, ಜೂನ್ 5 ರಂದು ರಾಜ್ಯದಲ್ಲಿ ಮಳೆಯಾಗುವ ಸಾಧ್ಯಾತೆ ಇದೆ ಎಂದು ಹವಾಮಾನ ಇಲಾಖೆ ತಜ್ಞ ಸಿಎಸ್ ಪಾಟೀಲ್ ತಿಳಿಸಿದ್ದಾರೆ.

## ನೂಕುನುಗ್ಗಲು!

ಈ ಘೋಷಣೆಯ ಬೆನ್ನಲ್ಲೇ ಇಂಡಿಯನ್ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ಡಿಜಿಟಲ್ ಖಾತೆ ತೆರೆಯಲು ಮಹಿಳೆಯರು ಮುಗಿಬಿದ್ದಿದ್ದಾರೆ. ಪ್ರತಿ ತಿಂಗಳು 8500 ರೂ. ಹಣ ಬರಲಿದೆ ಎಂಬ ನಿರೀಕ್ಷೆಯಲ್ಲಿ ಪೋಸ್ಟ್ ಆಫೀಸ್ ಮುಂದೆ ಕ್ಯೂ ನಿಲ್ಲುತ್ತಿದ್ದಾರೆ.

ಕಳೆದ 15 ದಿನದಿಂದ ನಿತ್ಯ ಸಾವಿರಾರು ಸಂಖ್ಯೆಯಲ್ಲಿ ಖಾತೆ ತೆರೆಯಲು ಮಹಿಳೆಯರು ಮುಗಿಬೀಳುತ್ತಿರುವುದು ಕಂಡುಬಂದಿದೆ. ಮಹಿಳೆಯರ ನಿಯಂತ್ರಣ ಮಾಡಲಾರದೆ ಬೆಂಗಳೂರಿನ ಅಂಚೆ ಕೇಂದ್ರ, ಕಚೇರಿಯ ಸಿಬ್ಬಂದಿ ಹೈರಾಣಾಗುತ್ತಿದ್ದಾರೆ. ನಿತ್ಯ ಬೆಳಗ್ಗೆ 4 ಗಂಟೆಯಿಂದಲೇ ಕಚೇರಿ ಮುಂದೆ ಮುಗಿಬೀಳುತ್ತಿರುವ ಸುತ್ತಮುತ್ತಲಿನ ಶಿವಾಜಿನಗರ, ವಸಂತನಗರ ಮುಂತಾದೆಡೆಗಳ ಮಹಿಳೆಯರು, ಅವರ ಜೊತೆಗೆ ಬರುತ್ತಿರುವ ಪುರುಷರು ಅಂಚೆ ಕಚೇರಿ ಆವರಣವನ್ನು ಅಕ್ಷರಶಃ ಸಂತೆಯಾಗಿಸಿದ್ದಾರೆ.

ಮಹಿಳೆಯರ ನಿಯಂತ್ರಣ ಸಾಧ್ಯವಾಗದೆ ಅಂಚೆ ಸಿಬ್ಬಂದಿ ಟೋಕನ್ ವಿತರಿಸಲು ಆರಂಭಿಸಿದ್ದಾರೆ. ಬೆಳಗ್ಗೆ 4 ಗಂಟೆಗೆ ಟೋಕನ್ ವಿತರಣೆ ಆರಂಭವಾಗುತ್ತಿದೆ. ಸಾವಿರಾರು ಸಂಖ್ಯೆಯಲ್ಲಿ ಕ್ಯೂ ನಿಂತು ಮಹಿಳೆಯರು ಟೋಕನ್ ಪಡೆಯುತ್ತಿದ್ದಾರೆ.

ಖಾತೆ ತೆರೆಯುತ್ತಿರುವ ಮಹಿಳೆಯರಿಗೂ ಹಣ ಬರುವ ಬಗ್ಗೆ ಖಚಿತ ಮಾಹಿತಿ ಇಲ್ಲ! ''ಅಕೌಂಟ್‌ಗೆ ಹಣ ಬರುತ್ತೆ ಅಂತ ಅಕ್ಕಪಕ್ಕದವರು ಹೇಳಿದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಒಂದು ಲಕ್ಷ ಹಣ ನೀಡುತ್ತಾರಂತೆ. ಮೋದಿ ಬಂದ್ರೆ 2 ಸಾವಿರ ನೀಡುತ್ತಾರಂತೆ. ಯಾರು ಬಂದ್ರೇನು ನಮಗೆ ಹಣ ಬರುತ್ತೆ ಅಂತ ಹೇಳಿದ್ರು. ಅದಕ್ಕೆ ಬಂದಿದ್ದೇವೆ. ಬೆಳಗ್ಗೆ 5 ಗಂಟೆಗೆ ಬಂದಿದ್ದೇವೆ. ಯಾವ ಅಧಿಕಾರಿಗಳೂ ಹೇಳಿಲ್ಲ, ನೆರೆಮನೆಯವರು, ಸ್ಥಳೀಯರು ಹೇಳಿದರು'' ಎಂಬುದು ಖಾತೆಗಾಗಿ ಕ್ಯೂ ನಿಂತ ಮಹಿಳೆಯರ ಹೇಳಿಕೆ.

# ಗೃಹ ಸಚಿವರ ನಿವಾಸದ ಮುಂದೆ ಪ್ರತಿಭಟನೆ



**ತುಮಕೂರು:** ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ಯೋಜನೆ ವಿರುದ್ಧ ಗೃಹ ಸಚಿವ ಜಿ.ಪರಮೇಶ್ವರ್ ನಿವಾಸದ ಎದುರು ಪ್ರತಿಭಟನೆ ನಡೆಸಲು ಮುಂದಾದ ಮಾಜಿ ಸಚಿವ ಸೇರಿದಂತೆ ಇಬ್ಬರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

**» ಮಾಜಿ ಸಚಿವ ಸೇರಿ ಇಬ್ಬರು ಪೊಲೀಸರ ವಶಕ್ಕೆ**

ಜಿಲ್ಲೆಯ ಹೇಮಾವತಿ ನೀರನ್ನು ರಾಮನಗರಕ್ಕೆ ಕೊಂಡೊಯ್ಯುವ ನೀರಾವರಿ ಯೋಜನೆ 'ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್' ವಿರುದ್ಧ ಗೃಹ ಸಚಿವರ ನಿವಾಸದ ಮುಂದೆ ಪ್ರತಿಭಟನೆಗೆ ಹೇಮಾವತಿ ಎಕ್ಸ್‌ಪ್ರೆಸ್ ಕೆನಾಲ್ ವಿರೋಧಿ ಸಮಿತಿ ಧರಣಿಗೆ ಮುಂದಾಗಿತ್ತು.

ಗುರುವಾರ ಬೆಳಗ್ಗೆ 11 ಗಂಟೆಗೆ ತುಮಕೂರಿನ ಹೆಗ್ಗೆರೆಯಲ್ಲಿ ಇರುವ ಜಿ.ಪರಮೇಶ್ವರ್ ಮನೆ ಎದುರು ಪಕ್ಷಾತೀತವಾಗಿ ಹೋರಾಟ ನಡೆಸಲು ಸಮಿತಿ ಮುಂದಾಗಿತ್ತು. ಮಾಜಿ ಸಚಿವ ಸೊಗಡು ಶಿವಣ್ಣ, ಗ್ರಾಮಾಂತರ ಶಾಸಕ ಸುರೇಶ್ ಗೌಡ, ತುರುವೇಕೆರೆ ಶಾಸಕ ಎಂ.ಟಿ.ಕೃಷ್ಣಪ್ಪ, ಮಾಜಿ ಶಾಸಕ ಮಸಾಲಾ ಜಯರಾಮ್ ಸೇರಿದಂತೆ ಕನ್ನಡಪರ ಸಂಘಟನೆಗಳು ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದ್ದವು. ಆದರೆ ಪ್ರತಿಭಟನೆಗೂ ಮುನ್ನವೇ ಮಾಜಿ ಸಚಿವ ಸೊಗಡು ಶಿವಣ್ಣ ಹಾಗೂ ಬಿಜೆಪಿ ಮುಖಂಡ ಪ್ರಭಾಕರ್ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಗೃಹ ಸಚಿವ ಜಿ.ಪರಮೇಶ್ವರ್ ಮನೆ ಮುಂದೆ ಪ್ರತಿಭಟನೆಗೆ ತಯಾರಿ ನಡೆಸುತ್ತಿದ್ದಾಗ ಪೊಲೀಸರು ಇಬ್ಬರನ್ನೂ ವಶಕ್ಕೆ ತೆಗೆದುಕೊಂಡಿದ್ದಾರೆ.

ಸೊಗಡು ಶಿವಣ್ಣರನ್ನ ವಶಕ್ಕೆ ಪಡೆದು ಪ್ರತಿಭಟನೆ ಹತ್ತಿಕ್ಕಲು ಮುಂದಾದ ಪೊಲೀಸರ ನಡೆ ಖಂಡಿಸಿ ಡಿಆರ್ ಕಚೇರಿ ಬಳಿ ಪ್ರತಿಭಟಿಸಲಾಗಿದೆ. ಸರ್ಕಾರದ ವಿರುದ್ಧ ಘೋಷಣೆ ಕೂಗಿ ಪ್ರತಿಭಟನಾಕಾರರು ಆಕ್ರೋಶ ಹೊರಹಾಕಿದ್ದಾರೆ. ಖುದ್ದು ಸ್ಥಳಕ್ಕೆ ಬಂದ ತುಮಕೂರು ಎಸ್‌ಪಿ ಅಶೋಕ್ ಸ್ಥಳಕ್ಕೆ ಭೇಟಿ ನೀಡಿದರು. ಈ ವೇಳೆ ಪ್ರತಿಭಟನೆ ನಡೆಸುತ್ತಿದ್ದವರನ್ನು ಪೊಲೀಸರು ವಶಕ್ಕೆ ಪಡೆದರು.

ಎಕ್ಸ್‌ಪ್ರೆಸ್ ಕೆನಾಲ್ ತುಮಕೂರು ಜಿಲ್ಲೆಯ ಹೇಮಾವತಿ ನೀರನ್ನು ರಾಮನಗರಕ್ಕೆ ಕೊಂಡೊಯ್ಯುವ ನೀರಾವರಿ ಯೋಜನೆಯಾಗಿದೆ. ರಾಮನಗರಕ್ಕೆ ನೀರು ಹರಿದರೆ ತುಮಕೂರು ಜಿಲ್ಲೆಯ ಜನತೆಗೆ ನೀರಿನ ಸಂಕಷ್ಟ ಎದುರಾಗಲಿದೆ ಎಂದು ಪ್ರತಿಭಟನೆ ನಡೆಸಲಾಗುತ್ತಿದೆ.

# ಅಯೋಧ್ಯೆ ರಾಮಮಂದಿರ ಸ್ಫೋಟಿಸುವ ಬೆದರಿಕೆ

**ಲಕ್ನೋ:** ಅಯೋಧ್ಯೆಯ ರಾಮಮಂದಿರವನ್ನು ಸ್ಫೋಟಿಸುವುದಾಗಿ ಬೆದರಿಕೆ ಹಾಕಿದ ಆರೋಪದ ಮೇಲೆ ಉತ್ತರಪ್ರದೇಶದ ಕುಶಿನಗರ ಜಿಲ್ಲೆಯ ಬಲುವಾ ಟಾಕಿಯಾ ಗ್ರಾಮದ 14 ವರ್ಷದ ಬಾಲಕ ಹಾಗೂ ಆತನ ಅಜ್ಜಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.




ಬಾಲಕ ಮಂಗಳವಾರ ರಾತ್ರಿ ಪೊಲೀಸ್ ಕಂಟ್ರೋಲ್ ರೂಂನ ತುರ್ತು ಸಹಾಯವಾಣಿ 112ಕ್ಕೆ ಕರೆಮಾಡಿ, ಮಂದಿರವನ್ನು ಬಾಂಬ್‌ನಿಂದ ಸ್ಫೋಟಿಸುವುದಾಗಿ ಬೆದರಿಕೆ ಹಾಕಿದ್ದಾನೆ. ಬಳಿಕ ಪೊಲೀಸರು ಸೈಬರ್ ಸೆಲ್ ಸಹಾಯದಿಂದ ಆರೋಪಿಗಳಿದ್ದ ಸ್ಥಳವನ್ನು ಪತ್ತೆಹಚ್ಚಿದ್ದಾರೆ. ಇದೀಗ ಆರೋಪಿ ಬಾಲಕ ಹಾಗೂ ಆತನ ಅಜ್ಜಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಬಾಲಕ ಬುದ್ಧಿಮಾಂದ್ಯತೆಯಿಂದ ಬಳಲುತ್ತಿದ್ದು, ಚಿಕಿತ್ಸೆ ಪಡೆಯುತ್ತಿದ್ದಾನೆ ಎಂದು ಕುಶಿನಗರ ಪೊಲೀಸ್ ವರಿಷ್ಠಾಧಿಕಾರಿ ಧವಲ್ ಜೈಸ್ವಾಲ್ ತಿಳಿಸಿದ್ದಾರೆ.

# ಅಂತಾರಾಷ್ಟ್ರೀಯ ಕಾಂಪ್ರೋಸ್ಟಿಂಗ್, ಸಸ್ಯ ಆರೋಗ್ಯ ದಿನ

**ಬೆಂಗಳೂರು:** ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ.ಆವರಣದಲ್ಲಿ ''ಅಂತರಾಷ್ಟ್ರೀಯ ಕಾಂಪೋಸ್ಟಿಂಗ್ ಮತ್ತು ಸಸ್ಯಆರೋಗ್ಯ ದಿನ 2024'' ಕಾರ್ಯಕ್ರಮವನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಎಸ್. ವಿ.ಸುರೇಶ್ ಅವರು ಕಾರ್ಯಕ್ರಮನ್ನು ಉದ್ಘಾಟಿಸಿದರು.



ನಂತರ ಮಾತನಾಡಿದ ಅವರು, ನಾವು ಸ್ವಾತಂತ್ರ್ಯ ಪೂರ್ವದಲ್ಲಿ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬನೆಯನ್ನು ಸಾಧಿಸದೇ ಹೊರ ದೇಶಗಳ ಮೇಲೆ ಅವಲಂಬಿತರಾಗಿದ್ದೆವು. ಭಾರತರತ್ನ, ಕೃಷಿ ತಜ್ಞ ದಿವಂಗತ ಡಾ: ಎಂ.ಎಸ್. ಸ್ವಾಮಿನಾಥನ್‌ರವರ ಮುಂದಾಳತ್ವ ಮತ್ತು ಮುಂದಾಲೋಚನೆಯಿಂದ ಹಸಿರು ಕ್ರಾಂತಿಯಿಂದಾಗಿ ದೇಶವು ಆಹಾರದಲ್ಲಿ ಸ್ವಾವಲಂಬನೆ ಸಾಧಿಸುವಂತಾಯಿತು. ಹೆಚ್ಚು ಇಳುವರಿ ನೀಡುವ ಸುಧಾರಿತ ತಳಿಗಳ ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚು ರಸಗೊಬ್ಬರಗಳ ಹಾಗೂ ಕೀಟನಾಶಕಗಳ ಬಳಕೆಗೆ ಕಾರಣವಾಯಿತು, ಪರಿಣಾಮವಾಗಿ ಮಣ್ಣಿನ ಫಲವತ್ತತೆ ಕುಂಠಿತವಾಗುವುದರ ಜೊತೆಗೆ ಆಹಾರ ಉತ್ಪಾದನೆಯ ವೆಚ್ಚವೂ ಸಹ ಹೆಚ್ಚಾಯಿತು. ಪ್ರಸ್ತುತ ಮಣ್ಣು ತನ್ನ ನೈಸರ್ಗಿಕ ಶಕ್ತಿಯನ್ನು ಕಳೆದುಕೊಳ್ಳುತ್ತಿರುವುದರಿಂದ ನೀರನ್ನು ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯ ಕಡಿಮೆಯಾಗುತ್ತಿದೆ ಹಾಗೂ ಸೂಕ್ಷ್ಮ ಜೀವಿಗಳ ಸಂಖ್ಯೆಯೂ ಸಹ ಕಡಿಮೆಯಾಗುತ್ತಿದೆ ಎಂದರು.

ನಮ್ಮ ದೇಶದಲ್ಲಿ ಮಣ್ಣಿನಲ್ಲಿ ಸಾವಯವ ಇಂಗಾಲ ಪ್ರಮಾಣಶೇಕಡಾ0.70ರಷ್ಟು ಇರಬೇಕಾಗಿದ್ದು ಕೇವಲ 0.30 ರಷ್ಟಿರುವುದು ಕಳವಳಕಾರಿ ಅಂಶವಾಗಿದೆ. ಆದ್ದರಿಂದ ರೈತರು ಕೊಟ್ಟಿಗೆ ಗೊಬ್ಬರ, ಕಾಂಪೋಸ್ಟ್, ಹಸಿರೆಲೆ ಗೊಬ್ಬರ, ಎರೆಗೊಬ್ಬರ ಮುಂತಾದ ಜೈವಿಕ ಹಾಗೂ ಸಾವಯವ ಗೊಬ್ಬರಗಳನ್ನು ಸಕಾಲದಲ್ಲಿ ಮಣ್ಣಿಗೆ ಸೇರಿಸಲು ಒತ್ತು ನೀಡಬೇಕು. ಕೃಷಿಯಲ್ಲಿ ನೈಸರ್ಗಿಕ ಸಂಪನ್ಮೂಲವನ್ನು ಸಮರ್ಪಕವಾಗಿ ಬಳಸಿಕೊಂಡಾಗ ಶೇಕಡಾ 50 ರಷ್ಟು ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದು ಮತ್ತು ಶೇಕಡಾ 80 ರಷ್ಟು ಮಣ್ಣಿನ ಅವನತಿಯನ್ನು ಸಾವಯವ ವಸ್ತುಗಳ ಸಮರ್ಪಕ ಬಳಕೆಯಿಂದ ತಡೆಗಟ್ಟಬಹುದು ಎಂದು ತಿಳಿಸಿದರು.

ನಮ್ಮ ದೇಶದಲ್ಲಿ 62ಮಿಲಿಯನ್ ತ್ಯಾಜ್ಯ ಉತ್ಪಾದನೆಯಾಗುತ್ತಿದ್ದು, ಇದರಲ್ಲಿ ಸುಮಾರು 27 ಮಿಲಿಯನ್‌ರಷ್ಟು ತ್ಯಾಜ್ಯವು ಕಾಂಪೋಸ್ಟ್ ತಯಾರಿಸಲು ಯೋಗ್ಯವಾಗಿದೆ ಇದರಿಂದ ಒಂದು ಮಿಲಿಯನ್ ಸಾರಜನಕ, ರಂಜಕ ಮತ್ತು ಪೊಟ್ಯಾಶ್‌ಅನ್ನು ಉತ್ಪಾದಿಸಬಹುದು ಮತ್ತು ರಸಗೊಬ್ಬರಗಳ ಆಮದನ್ನು ಕಡಿಮೆಗೊಳಿಸಿ ದೇಶದ ಆರ್ಥಿಕ ಶಕ್ತಿಯನ್ನು ಸದೃಡಗೊಳಿಸಬಹುದು. ಈ ವರ್ಷದ ಘೋಷವಾಕ್ಯ ''ಕಾಂಪೋಸ್ಟ್??ಪ್ರಕೃತಿಯ ಹವಾಮಾನ ರಕ್ಷಕ'', ಹವಾಮಾನ ಬದಲಾವಣೆಯನ್ನು ಯಥಾಸ್ಥಿತಿ ಸ್ವೀಕರಿಸುವ ಬದಲು ನಾವು ಇನ್ನೂ ಹೋರಾಡಬಹುದು ಎಂಬ ನೈಜ ಸಂಗತಿಯನ್ನು ಎತ್ತಿತೋರಿಸುತ್ತದೆ. ಸಾವಯವ ತ್ಯಾಜ್ಯಗಳನ್ನು ಕಾಂಪೋಸ್ಟ್ ಮಾಡಿ ಮಣ್ಣಿಗೆ ಹಿಂತಿರುಗಿಸುವದರಿಂದ, ಮಣ್ಣಿನ ಆರೋಗ್ಯ ಮತ್ತು ಜೀವವೈವಿಧ್ಯತೆಯಲ್ಲಿ ಸುಧಾರಣೆ, ಕೃಷಿ ಉತ್ಪಾದಕತೆಯಲ್ಲಿ ಹೆಚ್ಚಳ, ಆಹಾರ ಭದ್ರತೆ, ಇಂಗಾಲ ಸ್ಥಿರೀಕರಣ ಮತ್ತು ನೀರಿನ ಗುಣಮಟ್ಟ ಸೇರಿದಂತೆ ಹೆಚ್ಚುವರಿ ಪ್ರಯೋಜನಗಳನ್ನು ಪಡೆಯುವುದರೊಂದಿಗೆ, ಹಸಿರುಮನೆ ಅನಿಲ ಹೊರಸೂಸುವಿಕೆಯನ್ನೂ ಸಹ ಕಡಿಮೆ ಮಾಡಬಹುದು. ಮಣ್ಣಿನ ಆರೋಗ್ಯದ ಸ್ಥಿತಿಯು ಆತಂಕಕಾರಿಯಾಗಿ ಕುಸಿಯುತ್ತಿರುವುದು ಕೃಷಿ ಪರಿಸರಕ್ಕೆ ಗಂಭೀರ ಅಪಾಯವನ್ನುಂಟುಮಾಡುತ್ತಿದೆ. ಸಮತೋಲನ ರಸಗೊಬ್ಬರ ಬಳಕೆ, ಸಮಗ್ರ ಪೋಷಕಾಂಶಗಳ ನಿರ್ವಹಣೆ ಮತ್ತು ಸಾವಯವ ಗೊಬ್ಬರಗಳಾದ ಕಾಂಪೋಸ್ಟ್‌ನ ಬಳಕೆ, ಬೆಳೆ ಪರಿವರ್ತನೆ ಮತ್ತು ಸಂರಕ್ಷಣಾ ಕೃಷಿ ಪದ್ಧತಿಗಳ ಅಗತ್ಯವಿದೆ. ಹವಾಮಾನ ಬದಲಾವಣೆಯಿಂದ ಭೂಮಿಯನ್ನು ರಕ್ಷಿಸಲು ನಮ್ಮ ಜೀವನ ಶೈಲಿಯಲ್ಲಿ ಬದಲಾವಣೆಯ ಅಗತ್ಯವಿದೆ ಎಂದು ಜನರಿಗೆ ಜಾಗೃತಿ ಮೂಡಿಸುವ ಮೂಲಕ ಪರಿಸರವನ್ನು ರಕ್ಷಿಸಬೇಕು ಎಂದು ತಿಳಿಸಿದರು.

## ನಿಯಮ ಉಲ್ಲಂಘನೆಗೆ ದಂಡ ಶುಲ್ಕ ನಿಗದಿ

**ಮೈಸೂರು:** ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಸಾರ್ವಜನಿಕರು ಪ್ರತಿನಿತ್ಯ ಹಸಿ ಮತ್ತು ಒಣ ತ್ಯಾಜ್ಯವನ್ನು ವಿಂಗಡಿಸಿ ಪೌರಕಾರ್ಮಿಕರಿಗೆ ನೀಡುವುದು . ಇಲ್ಲವಾದಲ್ಲಿ ಘನ ತ್ಯಾಜ್ಯ ವಸ್ತು ನಿರ್ವಹಣೆಯ ಅಧಿಸೂಚನೆಯಂತೆ ಈ ಕೆಳಕಂಡ ಕ್ರಮ ಸಂಖ್ಯೆಗಳನ್ನು ಉಲ್ಲಂಘಿಸಿದಕ್ಕಾಗಿ ದಂಡ ಶುಲ್ಕ ವಿಧಿಸಲಾಗುತ್ತದೆ.

ಸಾರ್ವಜನಿಕ ರಸ್ತೆ, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಆಟದ ಮೈದಾನ, ಉದ್ಯಾನವನ ಹಾಗೂ ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯುವುದು, ಸ್ವಚ್ಛತೆ ಕಾಪಾಡಲು ವಿಫಲವಾದಲ್ಲಿ ರೂ.500 (ಮೊದಲ ಬಾರಿ) 1000 ರೂ. (ಪುನರಾವರ್ತಿ) ದಂಡ, ತ್ಯಾಜ್ಯವನ್ನು ಮೂಲದಲ್ಲಿಯೇ ಹಸಿಕಸ ಹಾಗೂ ಒಣಕಸ, ಕೈತೋಟದ ತ್ಯಾಜ್ಯ, ವೈದ್ಯಕೀಯ ತ್ಯಾಜ್ಯ, ವಿಷಕಾರಿ ತ್ಯಾಜ್ಯ ಹಾಗೂ ಇತರೆ ತ್ಯಾಜ್ಯವನ್ನು ಬೇರ್ಪಡಿಸಿ ತ್ಯಾಜ್ಯ ಸಂಗ್ರಹಕಾರರಿಗೆ ನೀಡದಿದ್ದಲ್ಲಿ ನಿವಾಸಿಗಳಿಗೆ- ರೂ.200, ವಾಣಿಜ್ಯ ಉದ್ದಿಮೆದಾರರಿಗೆ-ರೂ.500(ಮೊದಲ ಬಾರಿ), ನಿವಾಸಿಗಳಿಗೆ-ರೂ.500, ವಾಣಿಜ್ಯ ಉದ್ದಿಮೆದಾರರಿಗೆ ರೂ.1000(ಪುನರಾವರ್ತಿ) ದಂಡ, ಎಲ್ಲಾ ರೀತಿಯ ಚರಂಡಿಗಳಲ್ಲಿ ತ್ಯಾಜ್ಯ ಬಿಸಾಡುವವರಿಗೆ ರೂ.500 (ಮೊದಲ ಬಾರಿ) ರೂ.1000(ಪುನರಾವರ್ತಿ) ದಂಡ, ತ್ಯಾಜ್ಯ ಸುಡುವವರಿಗೆ 1. ರಸ್ತೆಬದಿಯಲ್ಲಿ ಎಲೆ ತ್ಯಾಜ್ಯ ಸುಡುವವರಿಗೆ ರೂ.200, 2.ಪ್ಲಾಸ್ಟಿಕ್ ವಸ್ತುಗಳನ್ನು ಮತ್ತು ಒಣತ್ಯಾಜ್ಯ ಸುಡುವವರಿಗೆ-ರೂ.500, 3.ಇ- ತ್ಯಾಜ್ಯ ಸುಡುವವರಿಗೆ ರೂ.1000(ಮೊದಲ ಬಾರಿ), ಕ್ರಮವಾಗಿ ಪುನರಾವರ್ತಿಗೆ ರೂ 500, 1000, 5000 ದಂಡ, ಭಾರಿ ತ್ಯಾಜ್ಯ ಜನಕರು (Bulk Waste Generator)ಗಳಾದ ಹಾಸ್ಟೆಲ್, ಹೊಟೇಲ್ ಅಥವಾ ರೆಸ್ಟೋರೆಂಟ್, ವಿದ್ಯಾಸಂಸ್ಥೆಗಳು, ಕಲ್ಯಾಣ ಮಂಟಪಗಳು, ಮಾಲ್ಗಳು, ವಾಣಿಜ್ಯ ಕಟ್ಟಡಗಳು, ಕೋಚಿಂಗ್ ಸೆಂಟರ್, ಸರ್ಕಾರಿ ಕಚೇರಿಗಳು, ಕಾರ್ಯಕ್ರಮಗಳು ನಡೆಯುವ ಸ್ಥಳಗಳಲ್ಲಿ, ವಸ್ತು ಪ್ರದರ್ಶನ ಇತ್ಯಾದಿ ಸ್ಥಳಗಳಲ್ಲಿ ತ್ಯಾಜ್ಯವನ್ನು ಮೂಲದಲ್ಲೇ ಪ್ರತ್ಯೇಕಿಸಿ ಪ್ರತ್ಯೇಕ ಸ್ಥಳದಲ್ಲಿ ಜೈವಿಕ ಅಥವಾ ವೈಜ್ಞಾನಿಕವಾಗಿ ಸಂಸ್ಕರಿಸದಿದ್ದಲ್ಲಿ ರೂ.20,000(ಮೊದಲ ಬಾರಿ) ರೂ.50,000 (ಪುನರಾವರ್ತಿ) ದಂಡ ಹಾಗೂ ಸಾರ್ವಜನಿಕರು ಕಟ್ಟಡ ಭಗ್ನಾವಶೇಷ ತ್ಯಾಜ್ಯವನ್ನು ನಿಗಧಿತ ಜಾಗದಲ್ಲಿ ವಿಲೇವಾರಿ ಮಾಡದಿದ್ದಲ್ಲಿ ರೂ.5000 (ಮೊದಲ ಬಾರಿ) ರೂ.10000(ಪುನರಾವರ್ತಿ) ದಂಡವನ್ನು ವಿಧಿಸಲಾಗುವುದು ಎಂದು ಮಹಾನಗರ ಪಾಲಿಕೆಯ ಆಯುಕ್ತರಾದ ಮಧು ಎನ್. ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಂದು ಕೊರತೆಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ ಮಾಹಿತಿ

## ಎನ್‌ಡಿಆರ್‌ಎಫ್ ನಿಯಮದಂತೆ ಬರ ಪರಿಹಾರ

**ಮಂಡ್ಯ:** ಎನ್. ಡಿ.ಆರ್ ಎಫ್ ನಿಯಮದಂತೆ ಜಿಲ್ಲೆಗೆ ಬರ ಪರಿಹಾರ ನೀಡಲು ಭತ್ತ, ರಾಗಿ, ಜೋಳ ಮತ್ತು ನೆಲಗಡಲೆ 4 ಬೆಳೆಗಳು ನಿಗಧಿಯಾಗಿದ್ದು, ರೈತರ ಮನವಿಯಂತೆ ಕಬ್ಬು ಹಾಗೂ ತೆಂಗು ಬೆಳೆಯನ್ನು ಸೇರಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ: ಕುಮಾರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರೈತರ ಕುಂದು ಕೊರತೆಗಳು ಕುರಿತಂತೆ ಸಭೆ ನಡೆಸಿ ಮಾತನಾಡಿದರು.

ಕೆ.ಆರ್.ಎಸ್ ನಿಂದ ಬೆಳೆಗಳಿಗೆ ನೀರು ಬಿಡುಗಡೆ ಮಾಡಲು ನೀರಾವರಿ ಸಲಹಾ ಸಮಿತಿ ನಡೆಸಿ ರೈತರಿಗೆ ಮಾಹಿತಿ ನೀಡಿ ಬಿಡುಗಡೆ ಮಾಡಲಾಗುವುದು. ನೀರು ಬಿಡುಗಡೆಯ ಸಂದರ್ಭದಲ್ಲಿ ವಿ.ಸಿ.ನಾಲೆ ಆಧುನೀಕರಣ ಅಥವಾ ಯಾವುದೇ ಕಾಮಗಾರಿಗಳಿದ್ದಲ್ಲಿ ನಿಲುಗಡೆ ಮಾಡಿ ನೀರು ಬಿಡುಗಡೆ ಮಾಡಲಾಗುವುದು. ಈ ಬಗ್ಗೆ ರೈತರಿಗೆ ಆತಂಕ ಬೇಡ ಎಂದರು.

55000 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಜಿಲ್ಲೆಗೆ 90000 ಮೆಟ್ರಿಕ್ ಟನ್ ರಸಗೊಬ್ಬರ ಬೇಕಿದ್ದು, 55000 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಇರುತ್ತದೆ. ಬೇಡಿಕೆ ಅನುಸಾರ ಉಳಿದ ರಸಗೊಬ್ಬರ ತರಿಸಿಕೊಳ್ಳಲಾಗುವುದು ಎಂದರು.




ಜಿಲ್ಲೆಯಲ್ಲಿ 540 ಪರವಾನಗಿ ಹೊಂದಿರುವ ರಸಗೊಬ್ಬರ ಮಾರಾಟಗಾರರಿದ್ದು, ಅವರಿಗೆ ರಸಗೊಬ್ಬರಗಳ ದರ ಹಾಗೂ ದಾಸ್ತಾನು ವಿವರವನ್ನು ಅನಾವರಣಗೊಳಿಸುವಂತೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದರು.

17800 ಪೌತಿ ಖಾತೆ ಕಳೆದ ಸಾಲಿನಲ್ಲಿ ಸರ್ವೆ ನಡೆಸಿದ ಸಂದರ್ಭದಲ್ಲಿ ಮೃತ ರೈತರ ಹೆಸರಿನಲ್ಲೇ ಭೂಮಿ ಇದ್ದದ್ದು, ಕಂಡು ಬಂದ ಹಿನ್ನಲೆ 22,000 ಪ್ರಕರಣಗಳನ್ನು ಪತ್ತೆ ಮಾಡಿ ಪೌತಿ ಖಾತೆ ಆಂದೋಲನ ನಡೆಸಿ ಸುಮಾರು 17800 ಪೌತಿ ಖಾತೆ ಮಾಡಲಾಗಿದೆ. ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ ಹಾಗೂ ತಹಶೀಲ್ದಾರ್ ಕಚೇರಿಯಲ್ಲಿ ಇದ್ದ 11800 ಪ್ರಕರಣಗಳಲ್ಲಿ 9700 ಪ್ರಕರಣ ವಿಲೇವಾರಿ ಮಾಡಲಾಗಿದೆ. ಕಂದಾಯ ಇಲಾಖೆ ಹಂತ ಹಂತವಾಗಿ ರೈತರ ಸಮಸ್ಯೆಗಳನ್ನು ಪರಿಹರಿಸಲಾಗುತ್ತಿದೆ ಎಂದರು.

ಜೂನ್ 8 ರಂದು ಕುಂದು ಕೊರತೆ ಸಭೆ ಚೆಸ್ಕಾಂಗೆ ಸಂಬಂಧಿಸಿದಂತೆ ಹಲವಾರು ರೈತರಿಂದ ದೂರು ಬಂದ ಹಿನ್ನಲೆಯಲ್ಲಿ ಜೂನ್ 8 ರಂದು ರೈತರ ಕುಂದು ಕೊರತೆ ಸಭೆ ನಡೆಸುವಂತೆ ಚೆಸ್ಕಾಂ ಇಲಾಖೆಯ ಅಧೀಕ್ಷಕ ಇಂಜಿನಿಯರ್ ಅವರಿಗೆ ತಿಳಿಸಿದರು.

ರೈತರ ಕಾರ್ಯಾಗಾರ ನಡೆಸಿ ಕೃಷಿ, ತೋಟಗಾರಿಕೆ ಇಲಾಖೆಯಿಂದ ದೊರಕುವ ಸೌಲಭ್ಯ, ಸವಲತ್ತು, ಕೃಷಿ ಪದ್ಧತಿಗಳ ಬಗ್ಗೆ ರೈತರಿಗೆ ಮಾಹಿತಿ ನೀಡಲು ಕಾರ್ಯಾಗಾರ ನಡೆಸುವಂತೆ ಜಂಟಿ ಕೃಷಿ ನಿರ್ದೇಶಕರಿಗೆ ತಿಳಿಸಿದರು.

ತಾಲ್ಲೂಕು ಮಟ್ಟದಲ್ಲಿ ಸಭೆ ಜಿಲ್ಲೆಯ ತಾಲ್ಲೂಕು ಮಟ್ಟದಲ್ಲಿ ರೈತರ ಕುಂದು ಕೊರತೆ ಸಭೆ ನಡೆಸುವಂತೆ ಈಗಾಗಲೇ ಸೂಚನೆ ನೀಡಲಾಗಿದೆ. ಎರಡು ತಾಲ್ಲೂಕಿನಲ್ಲಿ ಮಾತ್ರ ಸಭೆ ನಡೆಸಿದ್ದು, ಉಳಿದ ತಾಲ್ಲೂಕಿನಲ್ಲೂ ಸಭೆ ನಡೆಸಲು ತಿಳಿಸಲಾಗುವುದು.

ಕಲ್ಯಾಣಿಗಳ ಅಭಿವೃದ್ಧಿ ಗಳಿಗೆ ಕ್ರಮ ಜಿಲ್ಲಾ ಪಂಚಾಯತ್ ವತಿಯಿಂದ ಈಗಾಗಲೇ 80 ಕಲ್ಯಾಣಿಗಳನ್ನು ಅಭಿವೃದ್ಧಿ ಪಡಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಕಲ್ಯಾಣಿಗಳ ಅಭಿವೃದ್ಧಿಗಳಿಸಲು ಯೋಜನೆ ರೂಪಿಸಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಅವರು ತಿಳಿಸಿದರು.

ಹೂಳು ತಗೆಯುವ ಕೆಲಸದ ಮೇಲುಸ್ತುವಾರಿ ವಹಿಸಿ ರೈತರು ಕೆರೆಗಳಿಂದ ಹೂಳು ತೆಗೆಯಲು ಅನುಮತಿ ನೀಡಿದ ಸಂದರ್ಭದಲ್ಲಿ ಸಂಬಂಧಿಸಿದ ಅಧಿಕಾರಿಗಳು ರೈತರು ವೈಜ್ಞಾನಿಕವಾಗಿ ಹೂಳು ತೆಗೆಯುವಂತೆ ಮೇಲುಸ್ತುವಾರಿ ವಹಿಸಬೇಕು ಎಂದರು.

ಪೌತಿ ಖಾತೆಗೆ ನಾಡ ಕಚೇರಿಗೆ ಹೋಗಿ ಆನ್ ಲೈನ್ ಮೂಲಕ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ ತಮ್ಮ ಕೆಲಸ ಆಗುತ್ತದೆ. ಯಾವುದೇ ಗ್ರಾಮ ಲೆಕ್ಕ ಅಧಿಕಾರಿಗಳನ್ನು ಹುಡುಕಿಕೊಂಡು ಹೋಗಬೇಡಿ ಎಂದು ಅಪರ ಜಿಲ್ಲಾಧಿಕಾರಿ ಡಾ: ಹೆಚ್. ಎಲ್ ನಾಗರಾಜು ಅವರು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕ ಅಶೋಕ ಅವರು ಮಾತನಾಡಿ ಜಿಲ್ಲೆಯಲ್ಲಿ ಬಿತ್ತನೆ ಬೀಜದ ಕೊರತೆ ಇಲ್ಲ. ರೈತರ ಬೇಡಿಕೆ ಅನುಗುಣವಾಗಿ ರೈತ ಸಂಪರ್ಕ ಕೇಂದ್ರದಲ್ಲಿ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ. ಹಸಿರೆಲೆ ಗೊಬ್ಬರದ ಬೀಜಗಳ ಬೇಡಿಕೆ ಹೆಚ್ಚಿದ್ದು, ಎರಡು ದಿನಗಳಲ್ಲಿ 1800 ಕ್ವಿಂಟಾಲ್ ಜಿಲ್ಲೆಗೆ ದಾಸ್ತಾನು ಆಗಲಿದೆ ಎಂದು ಸಭೆಗೆ ಮಾಹಿತಿ ನೀಡಿದರು. ಉಪವಿಭಾಗಾಧಿಕಾರಿ ಮಹೇಶ್, ಕಾವೇರಿ ನೀರಾವರಿ ನಿಗಮ ನಿಯಮಿತದ ಅಧೀಕ್ಷಕ ಇಂಜಿನಿಯರ್ ರಘುರಾಂ, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ರೂಪಶ್ರೀ ಉಪಸ್ಥಿತರಿದ್ದರು.



ಆರೋಗ್ಯ ಜಾಗೃತಿ

**ಉದ್ಬೂರು ಗ್ರಾಮದಲ್ಲಿ ವಾಂತಿ ಭೇದಿ ಪ್ರಕರಣ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಮನೆ ಮನೆ ಭೇಟಿಯಲ್ಲಿ ನೀರಿನಿಂದ ಬರುವ ಕಾಯಿಲೆಗಳ ಬಗ್ಗೆ , ಪರಿಸರ ಸ್ವಚ್ಛತೆ ಬಗ್ಗೆ ಆರೋಗ್ಯ ಅರಿವು ಮೂಡಿಸಲಾಯಿತು. ಶುದ್ಧ ಕುಡಿಯುವ ನೀರು ಕುಡಿಯುವಂತೆ ಕೈ ಗಳನ್ನು ಸೋ ಪಿನಿಂದ ತೊಳೆಯುವಂತೆ ಅರಿವು ಮೂಡಿಸಲಾಯಿತು.ಗ್ರಾಮ ಪಂಚಾಯತ್ ಭೇಟಿ ನೀಡಿ ಪಿಡಿಒ ರವರಿಗೆ ಆಟೋ ಮೈಕಿಂಗ್ ಶುದ್ಧ ಕುಡಿಯುವ ನೀರು ಕುಡಿಯುವಂತೆ ಪರಿಸರ ಸ್ವಚ್ಛತೆ ಬಗ್ಗೆ ಟಾಮ್ ಟಾಮ್ ಸಾರುವಂತೆ ತಿಳಿಸಿ ಕರಪತ್ರಗಳನ್ನು ವಿತರಿಸಲಾಯಿತು.**

## ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಅವಧಿಯಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ

**ಬೆಂಗಳೂರು:** ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಜೂನ್ 7 ರಿಂದ 14 ರವರೆಗೆ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಪರೀಕ್ಷೆ-2 ನಡೆಯಲಿದ್ದು, ಪರೀಕ್ಷೆಯು ಬೇರೆ ಬೇರೆ ಪರೀಕ್ಷಾ ಕೇಂದ್ರಗಳಲ್ಲಿ ಇರುವುದರಿಂದ ಸಂಸ್ಥೆಯು ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ದಿನಾಂಕ ಜೂನ್ 7 ರಿಂದ 14 ರವರೆಗೆ ಪರೀಕ್ಷೆಗಳು ನಡೆಯುವ ದಿನಾಂಕಗಳಂದು ಪರೀಕ್ಷೆಗೆ ಹಾಜರಾಗಲು ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರದವರೆಗೆ ಹೋಗುವಾಗ ಮತ್ತು ಹಿಂದಿರುಗುವಾಗ ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ಎಸ್.ಎಸ್. ಎಲ್.ಸಿ ಪರೀಕ್ಷಾ ಪ್ರವೇಶ ಪತ್ರವನ್ನು ತೋರಿಸಿ, ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

ಎಸ್.ಎಸ್.ಎಲ್.ಸಿ ಪರೀಕ್ಷೆ-02 ರ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ ಮಾರ್ಗಗಳಲ್ಲಿ ಕಡ್ಡಾಯವಾಗಿ ಎಲ್ಲಾ ಮಾರ್ಗಗಳನ್ನು, ಸುತ್ತುವಳಿಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಹೆಚ್ಚುವರಿ ಸುತ್ತುವಳಿಗಳ ಕಾರ್ಯಾಚರಣೆಯ ಅಗತ್ಯತೆ ಕಂಡುಬಂದಲ್ಲಿ ಕಾರ್ಯಾಚರಣೆ ಮಾಡಲಾಗುವುದು.

ಪರೀಕ್ಷಾ ಕೇಂದ್ರಗಳ ಬಳಿ ವಿದ್ಯಾರ್ಥಿಗಳು/ಪೊ?ಷಕರು ಕೋರಿಕೆ ನಿಲುಗಡೆ ಕೋರಿದಲ್ಲಿ, ಕೋರಿಕೆ ನಿಲುಗಡೆ ನೀಡಲು ಕ್ರಮ ಕೈಗೊಳ್ಳಲಾಗಿದೆ.




ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ವಿದ್ಯಾರ್ಥಿ ಸಮುದಾಯದ ಹಿತವನ್ನು ಗಮನದಲ್ಲಿಟ್ಟುಕೊಂಡು ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ಪಾಸುಗಳನ್ನು ವಾಸಸ್ಥಳದಿಂದ ಶಾಲಾ/ಕಾಲೇಜಿಗೆ ಪ್ರಯಾಣಿಸಲು ಅವಕಾಶ ಕಲ್ಪಿಸಿ ವಿತರಣೆ ಮಾಡುತ್ತಿದೆ ಎಂದು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ವಸತಿ ಶಾಲೆಗಳ ಉಳಿಕೆ ಸೀಟು ಭರ್ತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ/ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ಅಟಲ್ ಬಿಹಾರಿ ವಾಜಪೇಯಿ/ ಡಾ??ಬಿ.ಆರ್. ಅಂಬೇಡ್ಕರ್/ ಇಂದಿರಾಗಾಂಧಿ ವಸತಿ ಶಾಲೆಗಳಿಗೆ 2024-25ನೇ ಸಾಲಿನ 7, 8 ಮತ್ತು 9ನೇ ತರಗತಿಗಳ ಉಳಿಕೆ ಸೀಟುಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, 29 ಮೇ 2024 ರಿಂದ 05 ಜೂನ್ 2024 ರವರೆಗೆ ಸಮೀಪದ ವಸತಿ ಶಾಲೆಗಳಲ್ಲಿ ಅರ್ಜಿ ಪಡೆದು ಭರ್ತಿಮಾಡಿ ಸಲ್ಲಿಸಬಹುದಾಗಿದೆ.

**ವಿಶೇಷ ಸೂಚನೆ:** ಪರೀಕ್ಷೆಯನ್ನು 07 ಜೂನ್ 2024 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 01.00 ಗಂಟೆಯವರೆಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಬಚ್ಚಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು ಇಲ್ಲಿ ನಿಗದಿಪಡಿಸಲಾಗಿರುತ್ತದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ ಶಾಲೆಗಳ 6ನೇ ತರಗತಿ ಪ್ರವೇಶ

**ಮಂಡ್ಯ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 826 ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ಡಾ//ಬಿ.ಆರ್.ಅಂಬೇಡ್ಕರ್/ ಅಟಲ್ ಬಿಹಾರಿ ವಾಜಪೇಯಿ/ ಶ್ರೀಮತಿ ಇಂದಿರಾಗಾಂಧಿ/ ಏಕಲವ್ಯ ಮಾದರಿ ವಸತಿ ಶಾಲೆ/ಕಾಲೇಜುಗಳ ಪೈಕಿ 807 ವಸತಿ ಶಾಲೆಗಳಲ್ಲಿ ಶೇ.25%ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು/ಎಚ್‌ಐವಿಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾತ ಮಕ್ಕಳಿಗೆ ಶೇ.10% ಮೀಸಲಾತಿಯನ್ನು ನಿಗಧಿಪಡಿಸಿ 6ನೇ ತರಗತಿ ಪ್ರವೇಶ ಕಲ್ಪಿಸುವಂತೆ ಎಡಿಸಿ ಡಾ. ಹೆಚ್. ಎಲ್. ನಾಗರಾಜು ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

**ಮಂಡ್ಯ:** ಮದ್ದೂರು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಸೋಮನಹಳ್ಳಿ ಮದ್ದೂರು ಇಲ್ಲಿ 2024-2025 ನೇ ಶೈಕ್ಷಣಿಕ ಸಾಲಿಗೆ 100% ಉದ್ಯೋಗಾವಕಾಶವುಳ್ಳ ಡಿಪ್ಲೋಮಾ ಇನ್ ಟೂಲ್ ಮತ್ತು ಡೈ ಮೇಕಿಂಗ್, ಡಿಪ್ಲೋಮಾ ಇನ್ ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ಮತ್ತು ಡಿಪ್ಲೋಮಾ ಇನ್ ಆಟೋಮೇಷನ್ ಅಂಡ್ ರೋಬೋಟಿಕ್ಸ್ ಕೋರ್ಸ್ ಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು. ಅವಧಿಯನ್ನು ಜೂನ್ 03 ರವರೆಗೆ ವಿಸ್ತರಿಸಲಾಗಿದೆ. 10ನೇ ತರಗತಿ ಉತ್ತೀರ್ಣರಾದವರು ಪ್ರಥಮ ವರ್ಷಕ್ಕೆ (3+1 ವರ್ಷ) ಮತ್ತು ಐಟಿಐ ಮತ್ತು ಪಿ.ಯು.ಸಿ ಉತ್ತೀರ್ಣರಾದವರು ಲ್ಯಾಟರಲ್ ಎಂಟ್ರಿ ಮೂಲಕ ದ್ವಿತೀಯ ವರ್ಷಕ್ಕೆ (2+1 ವರ್ಷ) ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ. ಸಂಖ್ಯೆ 6362883923 ಸಂಪರ್ಕಿಸಬಹುದು ಎಂದು ಮದ್ದೂರು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಡಿಪ್ಲೋಮಾ ಪ್ರವೇಶಾತಿಗೆ ಅರ್ಜಿ

**ಮಂಡ್ಯ:** ನಾಗಮಂಗಲ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ 2024-25ನೇ ಸಾಲಿನ ವಿವಿಧ ಕೋರ್ಸ್ಗಳಿಗೆ ಎಸ್ ಎಸ್ ಎಲ್ ಸಿ ಯಲ್ಲಿ ಕನಿಷ್ಠ ಶೇ.35 ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಸಿವಿಲ್ ಇಂಜಿನಿಯರಿಂಗ್, ಮೆಕ್ಯಾನಿಕಲ್ ಇಂಜಿನಿಯರಿಂಗ್, ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್, ಕಂಪ್ಯೂಟರ್ ಇಂಜಿನಿಯರಿಂಗ್, ಆಲ್ಟರ್ ನೇಟ್ ಎನರ್ಜಿ ಟೆಕ್ನಾಲಜೀಸ್, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಅಂಡ್ ಎಲೆಕ್ಟ್ರಿಕಲ್ ವೆಹಿಕಲ್ ಟೆಕ್ನಾಲಜಿ ಕೋರ್ಸ್ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಾತಿಗಾಗಿ ಆಫ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ:9886562509, 9902106500 ನ್ನು ಸಂಪರ್ಕಿಸಬಹುದು ಎಂದು ನಾಗಮಂಗಲ ಸರ್ಕಾರಿ ಪಾಲಿಟೆಕ್ನಿಕ್ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಶೇ.10% ಮೀಸಲಾತಿ

**ಮೈಸೂರು:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 826 ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ.ಬಿ.ಆರ್ ಅಂಬೇಡ್ಕರ್ , ಅಟಲ್ ಬಿಹಾರಿ ವಾಜಪೇಯಿ, ಶ್ರೀಮತಿ ಇಂದಿರಾಗಾಂಧಿ ಹಾಗೂ ಏಕಲವ್ಯ ಮಾದರಿ ವಸತಿ ಶಾಲಾ- ಕಾಲೇಜುಗಳ ಪೈಕಿ 807 ವಸತಿ ಶಾಲೆಗಳಲ್ಲಿ ಶೇ.25 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು, ಎಚ್‌ಐವಿಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳಿಗೆ ಶೇ.10 ರಷ್ಟು ಮೀಸಲಾತಿಯನ್ನು ನಿಗಧಿಪಡಿಸಿ, 6 ನೇ ತರಗತಿಗೆ ಪ್ರವೇಶ ಕಲ್ಪಿಸಲು ಅನುಮೋದನೆ ನೀಡಲಾಗಿದ್ದು, ಜಿಲ್ಲೆಯ ವಿಕಲಚೇತನರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಬೆಂಗಳೂರಿನ ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರ ಕಚೇರಿಯ ಆಯುಕ್ತರು ತಿಳಿಸಿದ್ದಾರೆ.

## ಬಹಿರಂಗ ಹರಾಜು

**ಮಂಡ್ಯ:** ಮಂಡ್ಯ ವಿ.ಸಿ.ಫಾರಂನಲ್ಲಿರುವ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವ್ಯಾಪ್ತಿಯಲ್ಲಿ ಬರುವ 23 ಸಪೋಟಾ ಮರಗಳ ಫಸಲನ್ನು ಒಂದು ವರ್ಷದ ಅವಧಿಗೆ ಮಾತ್ರ ಸೀಮಿತಗೊಳಿಸಿ ಹರಾಜನ್ನು ಜೂನ್ 10 ಮಧ್ಯಾಹ್ನ 12 ಗಂಟೆಗೆ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಆವರಣದಲ್ಲಿ ಬಹಿರಂಗ ಹರಾಜು ಮಾಡಲಾಗುವುದು. ಆಸಕ್ತಿ ಉಳ್ಳವರು ಹರಾಜಿನಲ್ಲಿ ಭಾಗವಹಿಸಿ ಬಿಡ್ ಮಾಡಬಹುದು ಎಂದು ಮಂಡ್ಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು

**ಮಂಡ್ಯ:** ಮಂಡ್ಯ ವಿ.ಸಿ.ಫಾರಂನಲ್ಲಿರುವ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವ್ಯಾಪ್ತಿಯಲ್ಲಿ ಬರುವ 150 ತೆಂಗಿನ ಮರಗಳ ಫಸಲನ್ನು ಒಂದು ವರ್ಷದ ಅವಧಿಗೆ ಮಾತ್ರ ಸೀಮಿತಗೊಳಿಸಿ ಹರಾಜನ್ನು ಜೂನ್ 10 ಮಧ್ಯಾಹ್ನ 11.30 ಗಂಟೆಗೆ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಆವರಣದಲ್ಲಿ ಬಹಿರಂಗ ಹರಾಜು ಮಾಡಲಾಗುವುದು. ಆಸಕ್ತಿ ಉಳ್ಳವರು ಹರಾಜಿನಲ್ಲಿ ಭಾಗವಹಿಸಿ ಬಿಡ್ ಮಾಡಬಹುದು.

## ಪ್ಯಾಲೆಸ್ಟೈನ್ ಯುದ್ಧ ನಿಲ್ಲಿಸಲು ಪ್ರಧಾನಿ ಮೋದಿ ಮಧ್ಯೆ ಪ್ರವೇಶಿಸಲು ಸಿಪಿಐಎಂ ಒತ್ತಾಯ

**ಕೋಲಾರ:** ಪ್ಯಾಲೆಸ್ಟೀನ್ ದೇಶದ ಜನರ ಮೇಲೆ ನಿರಂತರವಾಗಿ ನಡೆಯುತ್ತಲೇ ಇರುವ ಯುದ್ಧವನ್ನು ನಿಯಂತ್ರಿಸಲು ದೇಶದ ಪ್ರಧಾನಿ ನರೇಂದ್ರ ಮೋದಿಯವರು ಪ್ರಯತ್ನಿಸಬೇಕು ಎಂದು ಒತ್ತಾಯಿಸಿ ನಗರದ ತಹಶಿಲ್ದಾರ್ ಕಛೇರಿ ಮುಂದೆ ಸೋಮವಾರ ಸಿಪಿಐಎಂ ಜಿಲ್ಲಾ ಸಮಿತಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು.

ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಗಾಂಧಿನಗರ ನಾರಾಯಣಸ್ವಾಮಿ ಮಾತನಾಡಿ ಕಳೆದ 2023ರ ಅಕ್ಟೋಬರ್ನಿಂದ ಗಾಜಾ ಪಟ್ಟಿ ಮೇಲೆ ಇಸ್ರೇಲ್ ದೇಶವು ನಡೆಸುತ್ತಿರುವ ಅಮಾನವೀಯ ಯುದ್ಧ ಎಂಟು ತಿಂಗಳು ಕಳೆದರು ಮುಂದುವರಿಯುತ್ತಲೇ ಇದ್ದು ಜಗತ್ತಿನಾದ್ಯಂತ ಸ್ವಾತಂತ್ರ್ಯ ಹಾಗೂ ಶಾಂತಿಪ್ರಿಯ ಜನರಲ್ಲಿ ಕಳವಳ ಮೂಡಿಸಿದೆ. ತನ್ನದೇ ಸ್ವಂತ ದೇಶವನ್ನು ಹೊಂದುವ ಪ್ಯಾಲೆಸ್ಟೀನ್ ಜನರ ಮಹತ್ತರವಾದ ಆಕಾಂಕ್ಷೆಗೆ ದನಿಯಾಗಿ ಹೋರಾಡುತ್ತಿರುವ ಹಮಾಸ್ ಸಂಘಟನೆಯು ಇಸ್ರೇಲ್ ಮೇಲೆ ನಡೆಸಿದ ದಾಳಿಯನ್ನು ನೆಪವಾಗಿಟ್ಟುಕೊಂಡು ಈ ಬಾರಿ ಗಾಜಾ ಪಟ್ಟಿ ಮೇಲೆ ಇಸ್ರೇಲ್ ಪೂರ್ಣ ಪ್ರಮಾಣದ ಯುದ್ಧವನ್ನೇ ಸಾರಿದೆ ಎಂದು ಆರೋಪಿಸಿದರು. ಪ್ಯಾಲೆಸ್ತೀನಿ ಜನರು ಏಳು ದಶಕಗಳಿಂದ ನೆಲ ಮತ್ತು ನೆಲೆ ಕಳೆದುಕೊಳ್ಳುವಿಕೆ ಹಾಗೂ ವಸಾಹತುಶಾಹಿ ಅತಿಕ್ರಮಣದ ಕಷ್ಟ ನಷ್ಟಕ್ಕೆ ಗುರಿಯಾಗಿದ್ದಾರೆ. ಇಸ್ರೇಲ್ 1948ರಲ್ಲಿ ಅವರನ್ನು ತಾಯ್ನೆಲದಿಂದ ಹೊರಗಟ್ಟಿದೆ. ಭಾರತ ತನ್ನ ಸ್ವಾತಂತ್ರ್ಯ ಸಂಗ್ರಾಮದ ಕಾಲದಿಂದಲೂ ಪ್ಯಾಲೆಸ್ಟೀನಿ ಜನರಿಗೆ ಪೂರ್ಣ ಸಹಾನುಭೂತಿ ಮತ್ತು ಸೌಹಾರ್ದತೆ ವ್ಯಕ್ತಪಡಿಸುತ್ತಾ ಬಂದಿದೆ. ಆದರೆ ಆ ದೇಶದಲ್ಲಿ ಅಸಹಾಯಕವಾದರೂ ಕೆಚ್ಚೆದೆಯಿಂದ ಬದುಕುತ್ತಿರುವ ಧೀರ ಜನರ ಮೇಲೆ ದಬ್ಬಾಳಿಕೆ ನಡೆಸುವವರ ಪರವಾಗಿ ಹೋಗುತ್ತಿರುವಂತೆ ಕಾಣುತ್ತಿದ್ದು ಭಾರತ ಅನುಸರಿಸಿಕೊಂಡು ಬಂದ ಅಲಿಪ್ತ ನೀತಿಗೇ ವಿರುದ್ಧವಾಗಿದೆ ಎಂದು ಆರೋಪಿಸಿದರು. ಸಿಪಿಐಎಂ ತಾಲೂಕು ಕಾರ್ಯದರ್ಶಿ ಟಿ.ಎಂ ವೆಂಕಟೇಶ್ ಮಾತನಾಡಿ ಗಾಜಾ ಪಟ್ಟಿಯಲ್ಲಿ ನಡೆಯುತ್ತಿರುವ ಪ್ರಸಕ್ತ ಯುದ್ಧದಲ್ಲಿ ಈವರೆಗೆ 36 ಸಾವಿರಕ್ಕೂ ಹೆಚ್ಚು ಜನರು ಬಲಿಯಾಗಿದ್ದು ಅವರಲ್ಲಿ ಗಣನೀಯ ಸಂಖ್ಯೆಯ ಮುಗ್ಧ ಮಕ್ಕಳು ಮತ್ತು ಮಹಿಳೆಯರು ಇರುವುದು ಹೃದಯ ಕಲಕುವ ಸಂಗತಿಯಾಗಿದೆ. ಈ ಸಮರವನ್ನು ಮುಂದುವರಿಸಿದರೆ ಮಾನವ ದುರಂತವೇ ಸಂಭವಿಸಲಿದೆ ಎಂಬ ವಿಶ್ವ ಸಂಸ್ಥೆಯ ಅಭಿಪ್ರಾಯವನ್ನು ಧಿಕ್ಕರಿಸಿರುವ ಇಸ್ರೇಲ್ ಧೋರಣೆಗೆ ಅಮೆರಿಕದಂತೆ ಭಾರತ ಸರಕಾರ ಕೂಡ ಬೆಂಬಲ ನೀಡುತ್ತಿರುವುದು ಖಂಡನೀಯವಾಗಿದೆ ಎಂದರು. ತನ್ನ ಸ್ವಂತ ದೇಶದ ಕನಸನ್ನು ಸಾಕಾರಗೊಳಿಸಲು ಹೋರಾಡುತ್ತಿರುವ ಪ್ಯಾಲೆಸ್ಟೀನಿ ಜನರ ಪರವಾಗಿ ನಿಲ್ಲುವುದು ಮಹಾನ್ ಸಾಮ್ರಾಜ್ಯಶಾಹಿ ವಿರೋಧಿ ಹಾಗೂ ವಸಾಹತುಶಾಹಿ ವಿರೋಧಿ ಪರಂಪರೆಯನ್ನು ಹೊಂದಿರುವ ಭಾರತದ ಆದ್ಯ ರಾಜಕೀಯ ಹಾಗೂ ಮಾನವೀಯ ಕರ್ತವ್ಯವಾಗಿದೆ. ಆದ್ದರಿಂದ, ಗಾಜಾ ಪಟ್ಟಿಯಲ್ಲಿ ಯುದ್ಧ ಮುಂದುವರಿಸಲು ಅನುಕೂಲವಾಗುವಂತೆ ಇಸ್ರೇಲ್ಗೆ ಯಾವುದೇ ರೀತಿಯ ಸಹಾಯ-ಸಹಕಾರ ನೀಡಬಾರದೆಂದು ಹಾಗೂ ಜಾಗತಿಕ ರಂಗದಲ್ಲಿ ಭಾರತ ಹೊಂದಿರುವ ಪ್ರತಿಷ್ಠೆ-ಪ್ರಭಾವವನ್ನು ಬಳಸಿಕೊಂಡು ಮಧ್ಯಪ್ರವೇಶಿಸಿ ಯುದ್ಧವನ್ನು ಕೊನೆಗೊಳಿಸಲು ಗರಿಷ್ಠ ಪ್ರಯತ್ನವನ್ನು ಮೋದಿ ಮಾಡಬೇಕು ಎಂದು ಒತ್ತಾಯಿಸಿದರು. ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯರಾದ ಪಿ.ಶ್ರೀನಿವಾಸ್, ಪಿ.ಆರ್.ಸೂರ್ಯನಾರಾಯಣ, ಮುಖಂಡರಾದ ಪಿ.ತಂಗರಾಜ್, ಪಿ.ಆರ್.ಶಂಕರ್, ಎಂ.ವಿಜಯಕೃಷ್ಣ ಇದ್ದರು.

# ಛಾಯಾ ಚಿತ್ರಸ್ಪರ್ಧೆ ವಿಜೇತರು

» ಸಾರ್ವತ್ರಿಕ ಲೋಕಸಭಾ ಚುನಾವಣೆ

**ರಾಮನಗರ:** ಸಾರ್ವತ್ರಿಕ ಲೋಕಸಭಾ ಚುನಾವಣೆ - 2024ರ ಅಂಗವಾಗಿ ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ಕಚೇರಿವತಿಯಿಂದ ಮಾಧ್ಯಮ ಹಾಗೂ ಹವ್ಯಾಸಿ ಛಾಯಾಗ್ರಾಹಕರಿಗಾಗಿ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆಯ ವಿಜೇತರನ್ನು ಘೋಷಿಸಲಾಗಿದೆ.

ಪ್ರಜಾವಾಣಿ/ಡೆಕ್ಕನ್ ಹೆರಾಲ್ಡ್ ದಿನಪತ್ರಿಕೆಯ ಮಂಗಳೂರು ಛಾಯಾಗ್ರಾಹಕ ಹೆಚ್ ಫಕ್ರುದ್ದೀನ್ ಪ್ರಥಮ, ಬಾಗಲಕೋಟೆಯ ಹಳ್ಳಿ ಸಂದೇಶ ಪತ್ರಿಕೆಯ ಇಂದ್ರಕುಮಾರ್ ಬಿ ದಸ್ತೇನವರ ದ್ವಿತಿಯ, ಮೂಡಬಿದಿರೆಯ ಹವ್ಯಾಸಿ ಛಾಯಾಗ್ರಾಹಕ ಜಿನೇಶ್ ಪ್ರಸಾದ್ ತೃತೀಯ, ಸಮಾದಾನಕರ ಬಹುಮಾನಕ್ಕೆ ಇಬ್ಬರು ಆಯ್ಕೆಯಾಗಿದ್ದು ಉಡುಪಿಯ ಉದಯವಾಣಿ ಪತ್ರಿಕೆಯ ಅಸ್ಟ್ರೋ ಮೋಹನ್ ಹಾಗೂ ಬೆಂಗಳೂರಿನ ಸಂಜೆ ಸಮಯ ಪತ್ರಿಕೆಯ ಶ್ರೀಮತಿ ಪೂರ್ಣಿಮ ರವಿ ಮತ್ತು ವಿಶೇಷ ಬಹುಮಾನಕ್ಕೆ ಸಹ ಇಬ್ಬರು ಆಯ್ಕೆಯಾಗಿದ್ದು ಮೈಸೂರಿನ ವಿಜಯವಾಣಿ ಪತ್ರಿಕೆಯ ಕೆ.ಹೆಚ್ ಚಂದ್ರು, ಹಾಗೂ ಕಲಬುರಗಿಯ ವಿಜಯ ಕರ್ನಾಟಕ ಪತ್ರಿಕೆಯ ಶಿವಶರಣಪ್ಪ ಬೆನ್ನೂರ್ ಅವರು ವಿಜೇತರಾಗಿದ್ದಾರೆ. ರಾಜ್ಯಮಟ್ಟದ ಈ ಛಾಯಾಚಿತ್ರ ಸ್ಪರ್ಧೆಯ ಆಯ್ಕೆ ಸಮಿತಿಯಲ್ಲಿ ಅಧ್ಯಕ್ಷರಾಗಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಮಾಧ್ಯಮ ವಿಭಾಗದ ವಿಶೇಷ ಅಧಿಕಾರಿ ಎ.ವಿ.ಸೂರ್ಯಸೇನ್, ಐ.ಎಫ್.ಎಸ್, ಸದಸ್ಯರಾಗಿ ರಾಜ್ಯಮಟ್ಟದ ಸ್ವೀಪ್ ಹಿರಿಯ ಸಮಾಲೋಚಕರಾದ ನಿವೃತ್ತ ಐ.ಎ.ಎಸ್ ಅಧಿಕಾರಿ ಪಿ.ಎಸ್.ವಸ್ತ್ರದ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಛಾಯಾಚಿತ್ರ ವಿಭಾಗದ ಅಧಿಕಾರಿ ಚಂದ್ರಶೇಖರ್, ನಿವೃತ್ತ ಹಾಗೂ ಹಿರಿಯ ಛಾಯಾಗ್ರಾಹಕರಾದ ವಿಶ್ವನಾಥ್ ಸುವರ್ಣ ಹಾಗೂ ಸದಸ್ಯ ಕಾರ್ಯದರ್ಶಿಯಾಗಿ ಹಿರಿಯ ಸಹಾಯಕ ನಿರ್ದೇಶಕರಾದ ಜಡಿಯಪ್ಪ ಗೆದ್ಲಗಟ್ಟಿ ಅವರನ್ನು ಮುಖ್ಯ ಚುನಾವಣಾಧಿಕಾರಿಗಳ ಕಚೇರಿವತಿಯಿಂದ ನೇಮಿಸಲಾಗಿತ್ತು. ಸಾರ್ವತ್ರಿಕ ಲೋಕಸಭಾ ಚುನಾವಣೆ 2024 ರ ಮತದಾನ ಕರ್ನಾಟಕ ರಾಜ್ಯದಲ್ಲಿ ಏಪ್ರಿಲ್ 26 ಮತ್ತು ಮೇ 7 ರಂದು ಎರಡು ಹಂತದಲ್ಲಿ ಜರುಗಿತ್ತು. ಜಗತ್ತಿನ ಅತಿದೊಡ್ಡ ಪ್ರಜಾಪಭುತ್ವ ದೇಶವಾಗಿರುವ ನಮ್ಮ ಭಾರತದಲ್ಲಿ ಚುನಾವಣೆಯನ್ನು 'ಪ್ರಜಾಪ್ರಭುತ್ವದ ಹಬ್ಬ'ದಂತೆ ಆಚರಿಸಲಾಗುತ್ತಿದೆ. ಕಳೆದ ಲೋಕಸಭಾ ಚುನಾವಣೆ 2019 ಹಾಗೂ ಸಾರ್ವತ್ರಿಕ ಕರ್ನಾಟಕ ವಿಧಾನಸಭೆ ಚುನಾವಣೆ-2023 ರ ಸಂದರ್ಭದಲ್ಲಿ ಸಹ ಮಾಧ್ಯಮಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮತ್ತು ಹವ್ಯಾಸಿ ಪತ್ರಿಕಾ ಛಾಯಾಗ್ರಹಕರಿಗಾಗಿ ಮತದಾನದ ವಿಷಯದ ಬಗ್ಗೆ ರಾಜ್ಯ ಮಟ್ಟದ ಛಾಯಾ ಚಿತ್ರಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು. 2 ಸಾರ್ವತ್ರಿಕ ಚುನಾವಣೆಗಳ ಸಂದರ್ಭದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಛಾಯಾ ಚಿತ್ರ ಸ್ಪರ್ಧೆಯ ಮೂಲಕ ಚುನಾವಣಾ ಸಂಬಂಧಿತ ಅತ್ಯುತ್ತಮ ಹಾಗೂ ಸಂಗ್ರಹಯೋಗ್ಯ ಛಾಯಾಚಿತ್ರಗಳನ್ನು ಭಾರತ ಚುನಾವಣಾ ಆಯೋಗ ಪ್ರಶಂಸಿವುದರ ಜೊತೆಗೆ, ತನ್ನ ವರದಿ ಹಾಗೂ ಪುಸ್ತಕಗಳ ಮುಖಪುಟಗಳಲ್ಲಿ ನಮ್ಮ ರಾಜ್ಯದ ಈ ಛಾಯಾಚಿತ್ರಗಳನ್ನು ಬಳಸಿಕೊಂಡಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ. ಈ ಹಿನ್ನೆಲೆಯಲ್ಲಿ ಪ್ರಸ್ತುತ ಸಾರ್ವತ್ರಿಕ ಲೋಕಸಭಾ ಚುನಾವಣೆ 2024 ರ ನಿಮಿತ್ತ ರಾಜ್ಯ ಮಟ್ಟದ ಛಾಯಾಚಿತ್ರ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಅತ್ಯುತ್ತಮ ಛಾಯಾಚಿತ್ರ ತೆಗೆದ ಛಾಯಾಗ್ರಾಹಕರಿಗೆ ಪ್ರಮಾಣ ಪತ್ರ ಹಾಗೂ ನಗದು ಬಹುಮಾನವನ್ನು ನೀಡಲಾಗುತ್ತದೆ. ರಾಜ್ಯಮಟ್ಟದ ಈ ಸ್ಪರ್ಧೆಯಲ್ಲಿ ಮಾಧ್ಯಮಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮತ್ತು ಹವ್ಯಾಸಿ ಪತ್ರಿಕಾ ಛಾಯಾಗ್ರಹಕರು ಸೇರಿ ಒಟ್ಟು 219 ಜನರು ಭಾಗವಹಿಸಿದ್ದರು. ಛಾಯಾಗ್ರಹಕರು ತಾವು ತೆಗೆದ ಗರಿಷ್ಠ 5 ಅತ್ಯುತ್ತಮ ಛಾಯಾಚಿತ್ರಗಳನ್ನು ಕಳುಹಿಸಿದ್ದರು. ಪ್ರಶಸ್ತಿಗೆ ಆಯ್ಕೆಯಾದ ಎಲ್ಲರಿಗೂ ಮುಖ್ಯ ಚುನಾವಣಾಧಿಕಾರಿಗಳು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ವಿವಿಧ ಸ್ಪರ್ಧೆಗಳ ಆಯೋಜನೆ

**ಮೈಸೂರು:** ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಜಿಲ್ಲಾಡಳಿತ ಹಾಗೂ ಮಡಿಲು ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ(ರಿ), ಇವರುಗಳ ಸಹಯೋಗದೊಂದಿಗೆ ಜೂ.1 ರಂದು ಕಲಾಮಂದಿರ ಆವರಣದಲ್ಲಿ ಮೈಸೂರು ಜಿಲ್ಲೆ ಹಾಗೂ ಎಲ್ಲಾ ತಾಲ್ಲೂಕು ಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಜೂ.1 ರಂದು ಬೆಳಿಗ್ಗೆ 10 ಗಂಟೆಗೆ 1 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ ''ಭೂಮರುಸ್ಥಾಪನೆ, ಮರುಭೂಮಿಕರಣ ಹಾಗೂ ಬರ ತಡೆಯುವಿಕೆ'' ಎಂಬ ವಿಷಯದ ಕುರಿತು ಚಿತ್ರಕಲಾ ಸ್ಪರ್ಧೆ, 8 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಹಾಗೂ ಪರಿಸರ ಸ್ನೇಹಿ ಗೀತೆಗಳು ಕುರಿತ ಸಮೂಹ ಪರಿಸರ ಗೀತ ಗಾಯನ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸುವವರಿಗೆ ಮಂಡಳಿಯಿಂದ ಡ್ರಾಯಿಂಗ್ ಶೀಟ್ ಮತ್ತು ಪ್ರಬಂಧ ಸ್ಪರ್ಧೆಗೆ ಕಾಗದವನ್ನು ಒದಗಿಸಲಾಗುತ್ತದೆ. ಚಿತ್ರಕಲಾ ಸ್ಪರ್ಧೆಗೆ ಒಂದು ಶಾಲೆಯಿಂದ ಕನಿಷ್ಠ 10 ವಿದ್ಯಾರ್ಥಿಗಳು ಒಂದೊಂದು ವಿಭಾಗದಲ್ಲಿ, ಪ್ರಬಂಧ ಸ್ಪರ್ಧೆಗೆ ನಾಲ್ಕು ವಿದ್ಯಾರ್ಥಿಗಳು, ಸಮೂಹ ಪರಿಸರ ಗೀತಾ ಗಾಯನ ಸ್ಪರ್ಧೆಗೆ ಎರಡು ತಂಡಗಳು ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮಡಿಲು ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಶ್ರೀನಿವಾಸ್ ಅವರ ದೂ.ಸಂ:7019033602, ಕ.ರಾ.ಮಾ.ನಿ.ಮಂ.ನ ಪವನ್.ಬಿ ಅವರ ದೂ.ಸಂ: 9108149365 ಅನ್ನು ಸಂಪರ್ಕಿಸಬಹುದು ಎಂದು ನಗರದ ಪ್ರಾ.ಕ -1, ಪರಿಸರ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಕೋರ್ಸ್‌ಗಳಿಗೆ ಅರ್ಜಿ

**ಮೈಸೂರು:** 2024-25 ನೇ ಸಾಲಿಗೆ ಪಿರಿಯಾಪಟ್ಟಣ ಮತ್ತು ಬೆಟ್ಟದಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ವಿವಿಧ ವೃತ್ತಿಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆನ್ಲೈನ್ ಮುಖಾಂತರ ಅರ್ಜಿಗಳನ್ನು ಯಾವುದೇ ಸರ್ಕಾರಿ ಕೈಗಾರಿಕಾ ತರಬೇತಿ ಅಥವಾ ಸೈಬರ್ ಸೆಂಟರ್‌ಗಳಲ್ಲಿ www.cite.karnataka.gov.in ವೆಬ್ಸೈಟ್ ಮೂಲಕ ಜೂ.3 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಪಿರಿಯಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಒಂದು ವರ್ಷದ ಸಿ.ಓ.ಪಿ.ಎ. ಓಅಗಿಖಿ, ಎರಡು ವರ್ಷದ ಎಲೆಕ್ಟ್ರಿಷಿಯನ್, ಫಿಟ್ಟರ್ ಹಾಗೂ ಎಂ.ಇ.ವಿ ಕೋರ್ಸ್‌ಗಳು ಹಾಗೂ ಬೆಟ್ಟದಪುರ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಎರಡು ವರ್ಷದ ಎಲೆಕ್ಟ್ರಿಷಿಯನ್, ಫಿಟ್ಟರ್, ಎಂ.ಇ.ವಿ ಹಾಗೂ ಸಿ.ಎನ್.ಸಿ. ಕೋರ್ಸ್‌ಗಳು ಲಭ್ಯವಿದ್ದು, ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂ.ಸಂ: 08223-297565 ಅನ್ನು ಸಂಪರ್ಕಿಸಬಹುದು ಎಂದು ಪಿರಿಯಾಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿಗಳಿಗೆ ಬಸ್‌ಗಳ ಪಾಸ್ ವಿತರಣೆ

**ಬೆಂಗಳೂರು:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಸರ್ಕಾರದ ನಿರ್ದೇಶನದಂತೆ ಉಚಿತ/ರಿಯಾಯಿತಿ ದರದಲ್ಲಿ ವಿದ್ಯಾರ್ಥಿ ಪಾಸುಗಳನ್ನು ವಿತರಣೆ ಮಾಡುತ್ತಿದೆ. 2024-25 ನೇ ಸಾಲಿನ ವಿದ್ಯಾರ್ಥಿ ಪಾಸಿಗಾಗಿ ಮೇ 29 ರಿಂದ ಆನ್ಲೈನ್ ಮೂಲಕ ಅರ್ಜಿ ಸ್ವೀಕರಿಸಿ, ಜೂನ್ 1 ರಿಂದ ವಿದ್ಯಾರ್ಥಿ ಪಾಸುಗಳನ್ನು ಬೆಂಗಳೂರು ಒನ್ ಕೇಂದ್ರಗಳ ಮೂಲಕ ವಿತರಣೆ ಮಾಡಲಾಗುವುದು. 2024-25ನೇ ಸಾಲಿನ ವಿದ್ಯಾರ್ಥಿ ರಿಯಾಯಿತಿ ಪಾಸಿನ ಆನ್ಲೈನ್ ಅರ್ಜಿಯು ಸೇವಾಸಿಂಧು ಪೋರ್ಟಲ್ https://sevasindhu.karnataka.gov.in ನಲ್ಲಿ ಲಭ್ಯವಿರುತ್ತದೆ. ವಿದ್ಯಾರ್ಥಿಗಳು ಬೆಂಗಳೂರು ಒನ್ ಕೇಂದ್ರಗಳ ಮೂಲಕ ವಿದ್ಯಾರ್ಥಿ ಪಾಸಿಗಾಗಿ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿ ಪಾಸುಗಳನ್ನು ಬೆಳಿಗ್ಗೆ 08 ಗಂಟೆಯಿಂದ ಸಂಜೆ 06.30 ಗಂಟೆಯವರೆಗೆ ವಾರದ ಎಲ್ಲಾ ದಿನಗಳಲ್ಲಿ ಬೆಂಗಳೂರು ಒನ್ ಕೇಂದ್ರಗಳಲ್ಲಿ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಕೆಂಪೇಗೌಡ ಬಸ್ನಿಲ್ದಾಣ, ಕೆಂಗೇರಿ ಟಿಟಿಎಂಸಿ, ಹೊಸಕೋಟೆ, ಎಲೆಕ್ಟ್ರಾನಿಕ್ ಸಿಟಿ ಘಟಕ -19, ಶಾಂತಿನಗರ ಟಿಟಿಎಂಸಿ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಆನೇಕಲ್ ಬಸ್ ನಿಲ್ದಾಣದಲ್ಲಿ ವಿತರಿಸಲಾಗುವುದು. ಶಕ್ತಿ ಯೋಜನೆಯಡಿ ಕರ್ನಾಟಕ ರಾಜ್ಯದ ವಿದ್ಯಾರ್ಥಿನಿಯರಿಗೆ ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಕಲ್ಪಿಸಿದ್ದು, ಅದರಂತೆ ಕರ್ನಾಟಕ ರಾಜ್ಯದ ವಿದ್ಯಾರ್ಥಿನಿಯರು ಉಚಿತ ಪ್ರಯಾಣ ಸೌಲಭ್ಯ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ದೂರವಾಣಿ ಸಂಖ್ಯೆ 08022483777 ಗೆ ಸಂಪರ್ಕಿಸಬಹುದಾಗಿದೆ ಹಾಗೂ ಸಂಸ್ಥೆಯ ಜಾಲತಾಣದ ಮೂಲಕ ಮಾಹಿತಿ ಪಡೆಯಬಹುದಾಗಿದೆ ಎಂದು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಹೆಚ್ಚು ಅಗ್ನಿ ಅನಾಹುತಗಳು ಸಂಭವಿಸೋದು ಬೆಳಗಿನ ಜಾವದಲ್ಲೇ

**ವಿಜಯಪುರ:** ಭಾರತ ದೇಶದಲ್ಲಿ ಗ್ಯಾಸ್ನಿಂದ ಸಂಭವಿಸುವ ಅತಿ ಹೆಚ್ಚು ಅಗ್ನಿ ಅನಾಹುತಗಳು ಸಾಮಾನ್ಯವಾಗಿ ಬೆಳಗಿನ ಜಾವದಲ್ಲಿಯೇ ಸಂಭವಿಸುತ್ತಿದ್ದು, ಕಾರಣ ರಾತ್ರಿ ಸಂದರ್ಭದಲ್ಲಿ ಗ್ಯಾಸ್ ಸಿಲಿಂಡರ್‌ಗಳ ಸಂಪರ್ಕಗಳನ್ನು ಆಫ್ ಮಾಡದಿರುವುದು ಎಂದು ಎಚ್.ಪಿ. ಸಂಗಮ ಗ್ಯಾಸ್ ಏಜೆನ್ಸಿಯ ಮಾಲೀಕರಾದ ಎಸ್ ನಟರಾಜ್ ರವರು ತಿಳಿಸಿದರು.

ಇಲ್ಲಿನ ಸರ್ಕಾರಿ ಮಾದರಿ ಹೆಣ್ಣು ಮಕ್ಕಳ ಪಾಠಶಾಲೆಯಲ್ಲಿ ಗ್ಯಾಸ್ ಸಿಲಿಂಡರ್‌ಗಳಿಂದಾಗುವ ಅವಘಡಗಳ ಬಗೆಗಿನ ಜಾಗೃತಿ ಹಾಗೂ ಎಚ್ಚರಿಕೆ ಕ್ರಮಗಳ ಬಗ್ಗೆ ಮಕ್ಕಳಿಗೆ ಹಾಗೂ ಶಿಕ್ಷಕರುಗಳಿಗೆ ಪ್ರಾತ್ಯಕ್ಷಿಕೆಗಳ ಮೂಲಕ ಉಪನ್ಯಾಸ ನೀಡಿ, ಮಾತನಾಡುತ್ತಿದ್ದರು.

ಪ್ರತಿಯೊಂದು ಮನೆಗಳಲ್ಲಿಯೂ ಬಳಕೆಯಲ್ಲಿರುವ ಗ್ಯಾಸ್ ಸಿಲಿಂಡರ್‌ಗಳ ಉಪಯೋಗ ಹಾಗೂ ತೊಂದರೆಗಳ ಬಗ್ಗೆ ಮಕ್ಕಳು ಬಾಲ್ಯದಿಂದಲೇ ತಿಳಿದುಕೊಳ್ಳಬೇಕಾಗಿದ್ದು, ಭಾರತ ದೇಶದಲ್ಲಿ ಸಾಮಾನ್ಯವಾಗಿ ಗ್ರಾಮೀಣ ಪ್ರದೇಶಗಳಲ್ಲಿನ ಅನಕ್ಷರಸ್ಥರು ಸಹ ಗ್ಯಾಸ್ ಸಿಲಿಂಡರ್‌ಗಳ ಸಂಪರ್ಕ ಪಡೆದುಕೊಂಡಿದ್ದು, ಅವುಗಳನ್ನು ಉಪಯೋಗಿಸುತ್ತಿರುವುದರಿಂದ ಸುಲಭವಾಗಿ ಗ್ಯಾಸ್ ಲೀಕೆಜ್ ಬಗ್ಗೆ ಅರ್ಥವಾಗಲಿ ಎಂದು, ಇನ್ನಿತರೆ ಯಾವುದೇ ದೇಶಗಳಲ್ಲಿ ಇಲ್ಲದಿರುವಂತಹ ಗ್ಯಾಸ್ ಅನಿಲಕ್ಕೆ ವಾಸನೆ ಬರುವಂತಹ ರಾಸಾಯನಿಕ ಭಾರತದಲ್ಲಿ ಮಾತ್ರ ಬೆರೆಸಿದ್ದು, ಎಂತಹ ಸಾಮಾನ್ಯ ಜ್ಞಾನ ಕಡಿಮೆ ಇರುವಂತಹವರಿಗೂ ಸಹ ಗ್ಯಾಸ್ ಲೀಕೇಜ್ ಬಗ್ಗೆ ಅರಿವು ಮೂಡಲಿ ಎಂದು ಮಾಡಿರುತ್ತಾರೆ ಎಂದು ತಿಳಿಸಿದರು.

ಅಡುಗೆ ಅನಿಲ ಭಾರವಾಗಿದ್ದು ಯಾವಾಗಲೂ ಗ್ಯಾಸ್ ಸ್ಟೌವನ್ನು ಅನಿಲ ಸಿಲಿಂಡರ್ ಗಳಿಗಿಂತ ಎತ್ತರದಲ್ಲಿ ಇಟ್ಟು ಅಡುಗೆ ಮಾಡಬೇಕೆಂದು, ಸಾಮಾನ್ಯವಾಗಿ ಗ್ಯಾಸ್ ಸಿಲಿಂಡರ ಬಳಸುವ ಜಾಗಗಳಲ್ಲಿ ಗಾಳಿ ಬೆಳಕು ಚೆನ್ನಾಗಿ ಆಡುವಂತಿದ್ದು ವಿಶಾಲವಾಗಿರಬೇಕು. ಮನೆಗಳಲ್ಲಿ ಗ್ಯಾಸ್ ಲೀಕೇಜ್ ನಿಂದ ವಾಸನೆ ಬಂದ ಕೂಡಲೇ ಯಾವುದೇ ವಿದ್ಯುತ್ ದೀಪಗಳನ್ನು ಹಾಗೂ ಬೆಂಕಿಕಡ್ಡಿ ಹಚ್ಚದೆ ಕಿಟಕಿ ಬಾಗಿಲುಗಳನ್ನು ತೆರೆದು, ಗ್ಯಾಸ್ ಅನಿಲ ಗಾಳಿಯಲ್ಲಿ ಬೆರೆತು ಹೋಗುವಂತೆ ಹಾಗೂ ಸಿಲಿಂಡರ್ ಸಂಪರ್ಕ ಕ್ಲೋಸ್ ಮಾಡುವಂತಹವರಾಗಬೇಕೆಂದು ತಿಳಿಸಿದರು.

ಯಾವುದೇ ಮನೆಗಳಲ್ಲಿ ಒಂದು ಸಿಲಿಂಡರ್‌ಗೆ ಎರಡು ಸಂಪರ್ಕಗಳನ್ನು ನೀಡಬಾರದೆಂದು, ಹಾಗೂ ಗ್ಯಾಸ್ ಸ್ಟವ್ ಹಾಗೂ ಗ್ಯಾಸ್ ಸಿಲಿಂಡರ್ ಗೆ ಸಂಪರ್ಕ ಕಲ್ಪಿಸುವ ಪೈಪ್ಗಳ ಮೇಲೆ ಯಾವುದೇ ಹೊದಿಕೆ ಇರಬಾರದೆಂದು ಮನೆಗಳಲ್ಲಿ ಯಾರು ಸಹ ಗ್ಯಾಸ್ ಸಂಪರ್ಕದಿಂದ ಬಿಸಿನೀರು ಕಾಯಿಸುವ ಸ್ಟವ್ಗಳನ್ನು ಬಳಸಬಾರದೆಂದು ಎಚ್ಚರಿಕೆ ನೀಡಿದರು.

ಶಾಲಾ ಮುಖ್ಯೋಪಾಧ್ಯಾಯರಾದ ಮನೋಹರ್ ರವರು ಮಾತನಾಡಿ, ಪ್ರತಿಯೊಬ್ಬರ ಮನೆಗಳಲ್ಲಿಯೂ ಬಳಕೆಯಲ್ಲಿರುವ ಗ್ಯಾಸ್ ಸಿಲಿಂಡರ್‌ಗಳ ಬಗ್ಗೆ ಸಂಗಮ್ ಗ್ಯಾಸ್ ಮಾಲೀಕರು ಅತ್ಯುತ್ತಮವಾದ ಸಂಗ್ರಹ ಪೂರ್ಣವಾದ ಮಾಹಿತಿ ನೀಡಿದ್ದು ಇವುಗಳನ್ನು ಆಲಿಸಿದ ಎಲ್ಲಾ ಶಾಲಾ ಮಕ್ಕಳು ಮನೆಗಳಲ್ಲಿ ತಮ್ಮ ಪೋಷಕರುಗಳಿಗೆ ಇಲ್ಲಿ ಅರಿತುಕೊಂಡ ವಿಷಯವನ್ನು ತಿಳಿಸಿ ಹೇಳುವ ಮೂಲಕ ಜಾಗೃತಿ ಮೂಡಿಸಬೇಕೆಂದು ತಿಳಿಸಿದರು.

ಸಂಗಮ್ ಗ್ಯಾಸ್ ಏಜೆನ್ಸಿಯ ಸಿಬ್ಬಂದಿ ವರ್ಗದವರುಗಳಾದ ರೇಣುಕಾರಾಧ್ಯ, ಹರೀಶ್, ಅಶೋಕ್, ಅಭಿಜಿತ್ ಹಾಗೂ ಶಿಕ್ಷಕ ವರ್ಗದ ವರ್ಗಗಳಾದ ನಿರ್ಮಲ, ದ್ರಾಕ್ಷಾಯಿಣಿ, ಸೀಮಾ, ಶೋಭಾ, ಆರ್ ರಾಜೇಶ್ವರಿ, ಸರಸ್ವತಿ, ರೋಹಿಣಿ, ಎಂ ರಾಜೇಶ್ವರಿ, ನಾಗರಾಜ್, ಮಮತಾ, ಮಾಧವಿ, ಅನ್ನಪೂರ್ಣೇಶ್ವರಿ ಹಾಗೂ ಬಿಸಿಯೂಟದ ಅಡುಗೆ ಸಿಬ್ಬಂದಿ ವರ್ಗದವರುಗಳು ಉಪಸ್ಥಿತರಿದ್ದರು.

### ಲೋಕಸಭಾ ಸಾರ್ವತ್ರಿಕ ಚುನಾವಣೆ | ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ್ ಆದೇಶ

# ಜೂ.3ರಿಂದ 5ರ ವರೆಗೆ ನಿಷೇಧಾಜ್ಞೆ



**ಬೆಂಗಳೂರು ಗ್ರಾಮಾಂತರ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಮತ ಏಣಿಕೆ ಕಾರ್ಯ ಜೂನ್ 4 ರಂದು ನಡೆಯಲಿರುವ ಹಿನ್ನಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನಲ್ಲಿರುವ ನಾಗಾರ್ಜುನ ಕಾಲೇಜಿನಲ್ಲಿ ನಡೆಯಲಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 ರನ್ವಯ ಜೂನ್. 03 ರ ಸಂಜೆ 6:00 ಗಂಟೆಯಿಂದ ಜೂನ್ 05 ರ ಮಧ್ಯರಾತ್ರಿ 12:00 ಗಂಟೆಯವರೆಗೆ ನಿಷೇಧಾಜ್ಞೆ ವಿಧಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ್ ಅವರು ಆದೇಶ ಹೊರಡಿಸಿದ್ದಾರೆ. ಜಿಲ್ಲೆಯ ಪ್ರಸಕ್ತ ವಿದ್ಯಾಮಾನಗಳನ್ನು ಗಣನೆಗೆ ತೆಗೆದುಕೊಂಡು ಸಾರ್ವಜನಿಕ ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವ ಮೂಲಕ ಮುಕ್ತ ಮತ್ತು ನ್ಯಾಯೋಚಿತ ಹಾಗೂ ನಿಷ್ಪಕ್ಷಪಾತವಾಗಿ ಚುನಾವಣೆಯ ಮತ ಎಣಿಕೆಯನ್ನು ನಡೆಸುವ ನಿಟ್ಟಿನಲ್ಲಿ ನಿಷೇಧಾಜ್ಞೆಯನ್ನು ವಿಧಿಸುವುದು ಅವಶ್ಯವಾಗಿದೆ.

### ಷರತ್ತುಗಳು

- ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಮೇಲೆ ತಿಳಿಸಿದ ಅವಧಿಯಲ್ಲಿ ಸಾರ್ವಜನಿಕರು ಸಕಾರಣವಿಲ್ಲದೇ ಐದು ಅಥವಾ ಅದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕ ರಸ್ತೆ, ಬೀದಿ, ಓಣಿ, ಕೇರಿಗಳಲ್ಲಿ ಸಾರ್ವಜನಿಕ ಸ್ಥಳ, ಸಾರ್ವಜನಿಕ ಕಟ್ಟಡ ಮುಂತಾದವುಗಳಲ್ಲಿ ಗುಂಪು ಸೇರುವುದನ್ನು ನಿಷೇಧಿಸಿದೆ.
- ಯಾವುದೇ ಆಯುಧ, ಕುಡುಗೋಲು, ಖಡ್ಗ, ಭರ್ಜಿ, ಚೂರಿ, ದೊಣ್ಣೆ, ಲಾಠಿ ಅಥವಾ ದೈಹಿಕ ದಂಡನೆಗೆ ಕಾರಣವಾಗುವ ಅಥವಾ ಮಾರಕವಾಗುವ ಇನ್ಯಾವುದೇ ವಸ್ತುಗಳನ್ನು ಹೊಯ್ಯುವುದನ್ನು ಮತ್ತು ಸಾಗಾಟ ಮಾಡುವುದನ್ನು ನಿಷೇಧಿಸಿದೆ.
- ಗೆದ್ದ ಅಭ್ಯರ್ಥಿಗಳ ಮೆರವಣಿಗೆ ಹಾಗೂ ಪಟಾಕಿ/ಬಾಣ/ಬಿರುಸುಗಳನ್ನು ಹಚ್ಚುವುದು ಸಾರ್ವಜನಿಕ ಸಭೆ ಸಮಾರಂಭಗಳು, ಗೆಲುವಿನ ಸಂಭ್ರಮಗಳನ್ನು ನಡೆಸಬಾರದು.
- ಸಾರ್ವಜನಿಕವಾಗಿ ಯಾವುದೇ ಕೂಗನ್ನು ಉಚ್ಚರಿಸುವುದು ಅಥವಾ ಪದ ಹಾಡುವುದು, ಚೇಷ್ಟೆ ಮಾಡುವುದು, ಸಂಜ್ಞೆಗಳನ್ನು ಉಪಯೋಗಿಸುವುದು ಮತ್ತು ಚಿತ್ರಗಳ ಮೂಲಕ ಪ್ರದರ್ಶನ ಅಥವಾ ಪ್ರಸಾರ ಮಾಡುವುದು. ಪ್ರಕಟಣಾ ಪತ್ರಿಕೆಗಳ ಅಥವಾ ಇತರ ಯಾವುದೇ ವಸ್ತುಗಳ ಪ್ರದರ್ಶನ, ಬಿತ್ತಿ ಪತ್ರಗಳನ್ನು ಅಂಟಿಸುವುದರಿಂದ, ಸಭ್ಯತನ ಸದಾಚಾರ, ಸಾರ್ವಜನಿಕ ಭದ್ರತೆ ಶಿಥಿಲಗೊಳ್ಳುವಂತಹ ಯಾವುದೇ ರೀತಿಯ ಅಪರಾಧ ಎಸಗುವಂತೆ ಪ್ರೇರೇಪಿಸುವ ಕ್ರಮವನ್ನು ನಿಷೇಧಿಸಿದೆ.
- ಯಾವುದೇ ರೀತಿಯ ಬಂದ್, ಪ್ರತಿಭಟನೆ, ಮುಷ್ಕರ, ಪ್ರತಿಕೃತಿ ದಹನ, ಪ್ರದರ್ಶನ, ಪೂರಕ ಚಟುವಟಿಕೆಗಳು, ಯಾವುದೇ ಖಾಸಗಿ/ ಸಾರ್ವಜನಿಕ ಆಸ್ತಿ ಪಾಸ್ತಿಗಳನ್ನು ಹಾನಿಗೊಳಿಸುವ ಹಾಗೂ ವಿರೂಪಗೊಳಿಸುವ ಎಲ್ಲಾ ರೀತಿಯ ಚಟುವಟಿಕೆಗಳನ್ನು ನಿಷೇಧಿಸಿದೆ.
- ಯಾವುದೇ ವ್ಯಕ್ತಿಯ ಜಾತಿ-ಧರ್ಮ, ಕೋಮು ಪಂಥಗಳಿಗೆ ಅಥವಾ ಸಾರ್ವಜನಿಕ ನೈತಿಕತೆಗೆ ಬಾಧಕ ಉಂಟುಮಾಡಬಹುದಾಂತಹ ಚಟುವಟಿಕೆಗಳನ್ನು ನಿಷೇಧಿಸಿದೆ.
- ಈ ಅವಧಿಯಲ್ಲಿ ಯಾವುದೇ ಸಂತೆ, ಜಾತ್ರೆ ಮತ್ತು ಇತರೆ ಜನಸಮೂಹಗಳನ್ನು ನಿಷೇಧಿಸಿದೆ.
- ಸರ್ಕಾರಿ ಸಂಸ್ಥೆಗಳು, ಸಂಘಟನೆಗಳು ಹಾಗೂ ಕಾರ್ಯನಿರತ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ನಿಂದಿಸುವಂತಹ/ ಅವಹೇಳನಾಕಾರಿಯಾದಂತಹ ಯಾವುದೇ ಘೋಷಣೆಗಳು, ಭಾಷಣಾ ಪ್ರಕಟಣೆಗಳು ಅವಾಚ್ಯ ಶಬ್ದಗಳ ಬಳಕೆ, ಆವೇಶಕಾರಿ/ ಪ್ರಚೋದನಾಕಾರಿ ಭಾಷಣಾ ಗಾಯನ ಇತ್ಯಾದಿ ಚಟುವಟಿಗಳನ್ನು ನಿಷೇಧಿಸಿದೆ.
- ಚುನಾವಣಾ ಆಯೋಗದ ನಿರ್ದೇಶನದಂತೆ ಎಣಿಕೆ ಕೇಂದ್ರದ ವ್ಯಾಪ್ತಿಯಲ್ಲಿ ಸಾರ್ವಜನಿಕರ ಪ್ರವೇಶವನ್ನು ನಿಷೇದಿಸಿರುವ ಪ್ರದೇಶದಲ್ಲಿ ಪ್ರವೇಶಿಸುವುದು ನಿಷೇಧಿಸಿದೆ.
- ಈ ನಿಷೇದಾಜ್ಞೆಯು ಮದುವೆ, ಶುಭ ಸಮಾರಂಭಗಳು, ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಶವ ಸಂಸ್ಕಾರಕ್ಕೆ ಹಾಗೂ ಚುನಾವಣಾ ಸಂಬಂಧ ಏರ್ಪಡಿಸಲಾಗಿರುವ ಮತ ಕೇಂದ್ರಕ್ಕೆ ಅನ್ವಯಿಸುವುದಿಲ್ಲ.

## Liquid Nitrogen ಬಳಕೆ ನಿಷಿದ್ಧ

**ಬೆಂಗಳೂರು:** ರಾಜ್ಯದ ಕೆಲವು ಪ್ರದೇಶಗಳಲ್ಲಿ Smoking Biscuit/ Desserts ಮತ್ತು ಇತರೆ ತಿನಿಸುಗಳನ್ನು ಸೇವನೆಗಾಗಿ ಒದಗಿಸುವ ಸಂದರ್ಭದಲ್ಲಿ Liquid Nitrogen ಅನ್ನು ಬಳಸುವುದರಿಂದ ಸಾರ್ವಜನಿಕರ/ ಗ್ರಾಹಕರ ಆರೋಗ್ಯದ ಮೇಲೆ ದುಷ್ಪರಿಣಾಮವಾಗುವ ಹಿನ್ನೆಲೆಯಲ್ಲಿ ಮತ್ತು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006, ನಿಯಮಗಳು 2011ರ ಅಪೆಂಡಿಕ್ಸ್-ಸಿ, II. Table-9 ರಡಿ Liquid Nitrogen ಅನ್ನು Contact Freezing and Cooling Agent ಆಗಿ Dairy-based desserts Ice Cream ಗಳ ತಯಾರಿಕೆಯ ಸಮಯದಲ್ಲಿ ಮಾತ್ರ ಬಳಸಲು ಅನುಮೋದನೆ ಇದ್ದು, ಸದರಿ Liquid Nitrogen ಅನ್ನು Smoking Biscuit/Desserts ಇತರೆ ತಿನಿಸುಗಳನ್ನು ಸೇವನೆಗಾಗಿ ಒದಗಿಸುವ ಸಂದರ್ಭದಲ್ಲಿ ಉಪಯೋಗಿಸಲು ಅನುಮೋದನೆ ಇರುವುದರಿಂದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ-2006ರ ನಿಯಮ 30(2)(ಎ)ರಡಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ Liquid Nitrogen ಅನ್ನು Smoking Biscuit/Desserts ಸೇರಿದಂತೆ ಇತರೆ ತಿನಿಸುಗಳನ್ನು ಸೇವನೆಗಾಗಿ ಒದಗಿಸುವ ಸಂದರ್ಭದಲ್ಲಿ ಉಪಯೋಗಿಸುವುದನ್ನು ನಿರ್ಬಂಧಿಸಿ ಮೇ 3 ರಂದು ಆದೇಶಿಸಲಾಗಿದೆ.

Smoking Biscuit/ Desserts ಮತ್ತು ಇತರೆ ತಿನಿಸುಗಳನ್ನು ಸೇವನೆಗಾಗಿ ಒದಗಿಸುವ ಸಂದರ್ಭದಲ್ಲಿ Liquid Nitrogen ಅನ್ನು ಬಳಸುವುದನ್ನು ನಿರ್ಬಂಧಿಸಿರುವ ಕುರಿತು ಪತ್ರಿಕಾ ಪ್ರಕಟಣೆಯನ್ನು ದಿನಾಂಕ:04.05.2024ರಂದು ವಾರ್ತಾ ಮತ್ತು ಪ್ರಚಾರ ಇಲಾಖೆಯ ಮುಖಾಂತರ ಹೊರಡಿಸಲಾಗಿರುತ್ತದೆ. ಆದರೂ ಸದರಿ ವಿಷಯದ ಕುರಿತು ಆಹಾರ ಉದ್ದಿಮೆದಾರರಿಗೆ ಹಾಗೂ ಸಾರ್ವಜನಿಕರ ಗಮನಕ್ಕೆ ಬಾರದ ಕಾರಣ Smoking Biscuit/ Desserts ಮತ್ತು ಇತರೆ ತಿನಿಸುಗಳನ್ನು ಸೇವನೆಗಾಗಿ ಒದಗಿಸುವ ಸಂದರ್ಭದಲ್ಲಿ Liquid Nitrogen ಅನ್ನು ಬಳಸುವುದನ್ನು ನಿಬರ್ಂಧಿಸುವಂತೆ ಎಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಸಲು ಸತೀಶ್‌ಗೆ ವಿಧಾನ ಪರಿಷತ್‌ನಲ್ಲಿ ಅವಕಾಶ ಕಲ್ಪಿಸಿ

**ಹುಳಿಯಾರು:** ಕಾಡುಗೊಲ್ಲ ಸಮುದಾಯದ ಮುಖಂಡ, ಪಿಹೆಚ್‌ಡಿ ಮಾಡಿರುವ ವಿದ್ಯಾವಂತ ಯುವಕ, ಸಂಘಟನಾ ಚತುರ, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತ ಡಾ. ಸಾಸಲು ಸತೀಶ್ ಅವರಿಗೆ ವಿಧಾನ ಪರಿಷತ್ ನಲ್ಲಿ ಅವಕಾಶ ಕಲ್ಪಿಸುವಂತೆ ಚಿಕ್ಕನಾಯಕನಹಳ್ಳಿ ಕಾಂಗ್ರೆಸ್ ಮುಖಂಡ ಕೆ ಎನ್ ಉಮೇಶ್ ಮನವಿ ಮಾಡಿದ್ದಾರೆ.



ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ಕಾಡುಗೊಲ್ಲ ಬುಡಕಟ್ಟು ಸಮುದಾಯವು ಸಾಮಾಜಿಕ, ಆರ್ಥಿಕ, ರಾಜಕೀಯ, ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದಿದೆ. ರಾಜ್ಯದ 12 ಜಿಲ್ಲೆ, 40 ತಾಲ್ಲೂಕುಗಳಲ್ಲಿ ಸುಮಾರು 1,500 ಕಾಡುಗೊಲ್ಲರ ಹಟ್ಟಿಗಳಲ್ಲಿ 12 ಲಕ್ಷಕ್ಕೂ ಹೆಚ್ಚು ಜನರು ವಾಸಿಸುತ್ತಿದ್ದಾರೆ. ಈ ಹಿಂದೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಸಮುದಾಯದ ಮಹಿಳೆ ಜಯಮ್ಮ ಬಾಲರಾಜ್ ಅವರನ್ನು ಒಂದು ಅವಧಿಗೆ ವಿಧಾನ ಪರಿಷತ್ ಸದಸ್ಯರನ್ನಾಗಿ ನೇಮಕ ಮಾಡಲಾಗಿತ್ತು. ಅದು ಬಿಟ್ಟರೆ ಈವರೆಗೂ ಅವಕಾಶ ಸಿಕ್ಕಿಲ್ಲ. ಹಾಗಾಗಿ ಈ ಬಾರಿ ಸತೀಶ್ ಅವರನ್ನ ಎಂಎಲ್ಸಿ ಮಾಡುವಂತೆ ಕೇಳಿಕೊಂಡಿದ್ದಾರೆ. ಸಾಸಲು ಸತೀಶ್ ಅವರು ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಕಾರ್ಯಕರ್ತರ ಕಷ್ಟಗಳಿಗೆ ಸ್ಪಂದಿಸುವ ಮೂಲಕ, ಜಿಲ್ಲಾ ಪಂಚಾಯಿತ ತಾಲೂಕು ಪಂಚಾಯಿತಿ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಕಾರ್ಯಕರ್ತರ ಗೆಲುವಿಗೆ ಶ್ರಮಿಸುವ ಮೂಲಕ ಪಕ್ಷವನ್ನು ಸದೃಢವಾಗಿ ಕಟ್ಟಿ ಬೆಳೆಸಿದ್ದಾರೆ. ಸತತ ಎರಡು ಬಾರಿ ವಿಧಾನಸಭಾ ಟಿಕೆಟ್ ವಂಚಿತರಾಗಿದ್ದರು ಕೂಡ ಪಕ್ಷದ ಶಿಸ್ತಿನ ಸಿಪಾಯಿಯತೆ ಕ್ಷೇತ್ರದಲ್ಲಿ ನೆಲೆಯೂರಿ ಪಕ್ಷ ಸಂಘಟನೆಯಲ್ಲಿ ತೊಡಗಿದ್ದಾರೆ. ಅಲ್ಲದೆ ಲೋಕಸಭಾ ಚುನಾವಣೆಯಲ್ಲಿ ಮುದ್ದ ಹನುಮೇಗೌಡ ಪರ ಹಗಲಿರುಳು ಎನ್ನದೆ ದುಡಿದಿದ್ದಾರೆ. ಇಂತಹ ಯುವಕನಿಗೆ ವಿಧಾನ ಪರಿಷತ್ ನಲ್ಲಿ ಅವಕಾಶ ಕೊಟ್ಟರೆ ರಾಜ್ಯಾದ್ಯಂತ ಕಾಂಗ್ರೆಸ್ ಸಂಘಟನೆಗೆ ಬಲಬರುವ ಜೊತೆಗೆ ಬುಡಕಟ್ಟು ಸಮುದಾಯಕ್ಕೆ ರಾಜಕೀಯ ಸ್ಥಾನಮಾನ ನೀಡಿದ ಕೀರ್ತಿ ಕಾಂಗ್ರೆಸ್ ಪಕ್ಷಕ್ಕೆ ಸಿಗಲಿದೆ ಎಂದು ಉಮೇಶ್ ಅಭಿಪ್ರಾಯ ಪಟ್ಟಿದ್ದಾರೆ.

# ರಾಗಿ, ತೊಗರಿ ಅಂತರಬೆಳೆ-ರೈತರಿಗೆ ಲಾಭ

### ರೈತರ ಹೊಲಗಳಿಗೆ ಸಹಾಯಕ ಕೃಷಿ ನಿರ್ದೇಶಕ ಶಿವರಾಜ್‌ಕುಮಾರ್ ಭೇಟಿ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರಾದ ಶಿವರಾಜ್‌ಕುಮಾರ್ ಹೆಚ್.ಎಸ್ ರವರು ರೈತರ ಹೊಲಗಳಿಗೆ ಭೇಟಿ ಮಾಡಿ ರೈತ ಸಂಪರ್ಕ ಕೇಂದ್ರಗಳಲ್ಲಿ ತೊಗರಿ, ಅಲಸಂದೆ, ರಾಗಿ, ತಳಿಗಳ ಸಮರ್ಪಕ ದಾಸ್ತಾನಿದ್ದು ರೈತರು ರೈತ ಸಂಪರ್ಕ ಕೇಂದ್ರಕ್ಕೆ ಬೇಟಿ ನೀಡಿ ಬಿತ್ತನೆ ಬೀಜ ಪಡೆಯಬೇಕೆಂದು ತಿಳಿಸಿದರು.



ರಾಗಿಯ ಉತ್ಪಾದನಾ ತಾಂತ್ರಿಕತೆಗಳನ್ನು ವಿವರಿಸಿದ ಅವರು ಬಿತ್ತನೆಗೆ 3-4 ವಾರಗಳ ಮುಂಚೆ ಎಕರೆಗೆ 3 ಟನ್ ಕೊಟ್ಟಿಗೆ ಗೊಬ್ಬರವನ್ನು ಮಣ್ಣಿನಲ್ಲಿ ಸೇರಿಸುವುದು. ಶಿಫಾರಸ್ಸು ಮಾಡಿದ ಬಿತ್ತನೆ ಬೀಜವನ್ನು 13 ಗ್ರಾಂ./ಎ. ಸತುವಿನ ಸಲ್ಫೇಟ್‌ನೊಂದಿಗೆ ಉಪಚಾರ ಮಾಡುವುದು. ಪ್ರತಿ ಕಿ.ಗ್ರಾಂ.ಬಿತ್ತನೆ ಬೀಜಕ್ಕೆ 2 ಗ್ರಾಂ ಕಾರ್ಬನ್ ಡೈಜಿಂ ಶಿಲೀಂಧ್ರನಾಶಕದಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡುವುದು. ಒಂದು ಎಕರೆ ಪ್ರದೇಶಕ್ಕೆ 5 ಕಿ.ಗ್ರಾಂ, ಶಿಫಾರಸ್ಸು ಮಾಡಿದ ಬಿತ್ತನೆ ಬೀಜನ್ನು ಸಾಲಿನಿಂದ ಸಾಲಿನ 12 ಅಂಗುಲ ಅಂತರದಲ್ಲಿ ಸಂಯುಕ್ತ ಕೂರಿಗೆಯನ್ನು ಉಪಯೋಗಿಸಿ ಬಿತ್ತುವುದು ಲಾಭದಾಯಕ ಎಂದು ವಿವರಿಸಿದರು.

ಕಳೆ ಹತೋಟಿಗೆ ಬಿತ್ತಿದ ಅಥವಾ ಮಾರನೇ ದಿವಸ ಎಕರೆಗೆ 300 ಗ್ರಾಂ, ಐಸೋಪ್ರೋಟುರಾನ್ ಶೇ.75 ರ ಪುಡಿಯನ್ನು 300 ಲೀ. ನೀರಿನಲ್ಲಿ ಬೆರೆಸಿ ಸಿಂಪರಣೆ ಮಾಡುವುದು. ಬಿತ್ತನೆಯಾದ 15 ದಿನಗಳ ನಂತರ ಪೈರಿನಿಂದ ಪೈರಿಗೆ 4 ಅಂಗುಲ ಕಾಪಾಡಿಕೊಂಡು ತೆಳುವು ಮಾಡುವುದು. ಹೆಚ್ಚು ಮಳೆ ಹಾಗೂ ಸಮಾನಾಂತರವಾಗಿ ಹಂಚಿಕೆಯಾಗುವ ಪ್ರದೇಶಗಳಲ್ಲಿ ನಾಟಿ ಮಾಡಿವುದಾದಲ್ಲಿ 1 ಅಡಿ ಅಂತರದ ಸಾಲುಗಳಲ್ಲಿ ಪೈರಿನಿಂದ ಪೈರಿಗೆ 4 ಅಂಗುಲ ಅಂತರದಲ್ಲಿ ಪ್ರತಿ ಗುಣಿಗೆ 2-3 ಪೈರುಗಳನ್ನು ನಾಟಿ ಮಾಡಬೇಕು ಎಂದು ತಿಳಿಸಿದರು.

ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ರಸಗೊಬ್ಬರಗಳಾದ ಸಾರಜನಕ 10 ಕಿ.ಗ್ರಾಂ. ರಂಜಕ 15 ಕಿ.ಗ್ರಾಂ ಹಾಗೂ ಪೊಟ್ಯಾಷ್ 16 ಕಿ.ಗ್ರಾಂ ಈ ಮೂರು ರಸಗೊಬ್ಬರಗಳನ್ನು ಬಿತ್ತನೆ ಸಮಯದಲ್ಲಿ ಕೊಡುವುದು. ಎಕರೆಗೆ ಲಘು ಪೋಷಕಾಂಶಗಳಾದ 5 ಕಿ.ಗ್ರಾಂ ಸತುವಿನ ಸಲ್ಫೇಟ್ ಮತ್ತು 4 ಕಿ.ಗ್ರಾಂ ಬೋರಾಕ್ಸನ್ನು ಬಿತ್ತನೆಗೆ ಮುಂಚೆ ಕೊಡುವುದು. ಬಿತ್ತನೆ ಮಾಡಿದ 15 ದಿನಕ್ಕೆ 2-3 ಬಾರಿ 10 ದಿನಗಳ ಅಂತರದಲ್ಲಿ ಅಂತರ ಬೇಸಾಯ ಮಾಡುವುದು. ಬಿತ್ತನೆ ಮಾಡಿದ 6-7 ವಾರಗಳ ನಂತರ 10 ಕಿ.ಗ್ರಾಂ. ಸಾರಜನಕ ಒದಗಿಸುವ ರಸಾಯನಿಕ ಗೊಬ್ಬರಗಳನ್ನು ಮೇಲುಗೊಬ್ಬರವಾಗಿ ಕೊಡುವುದು. ರಾಗಿ ಮತ್ತು ತೊಗರಿಯನ್ನು ಅಂತರ ಬೆಳೆಯಾಗಿ ಬೆಳೆಯುವುದು (8 ಸಾಲು ರಾಗಿ : 2 ಸಾಲು ತೊಗರಿ) ಇದರಿಂದ ಭೂಮಿಯ ಫಲವತ್ತತೆ ಹೆಚ್ಚುತ್ತದೆ ಮತ್ತು ಉತ್ತಮ ಇಳುವರಿಯು ದೊರೆಯುತ್ತದೆ ಎಂಬ ಮಾಹಿತಿ ನೀಡಿದರು.

ರೈತ ಸಂಪರ್ಕ ಕೇಂದ್ರಗಳಲ್ಲಿ ತೊಗರಿ-10.8 ಡಣ, ಅಲಸಂದೆ-12.15 ಡಣಟ, ರಾಗಿ-56.90 ಡಣಟ ದಾಸ್ತಾನಿದ್ದು, ತಾಲ್ಲೂಕಿನಲ್ಲಿ ರಸಗೂಬ್ಬರ ಮಳಿಗೆಯಲ್ಲಿ ಹಾಗೂ ಪ್ರಾಥಮಿಕ ಕೃಷಿ ಸಹಕಾರ ಸಂಘಗಳಲ್ಲಿ ಪ್ರಸ್ತಕ ಹಂಗಾಮಿಗೆ ರಸಗೊಬ್ಬರದ ದಾಸ್ತಾನಿದ್ದು ಯಾವುದೇ ಕೊರತೆಯಿರುವುದಿಲ್ಲ ಮತ್ತು ರೈತರು ಹತ್ತಿರದ ರೈತ ಸಂಪರ್ಕ ಕೇಂದ್ರಗಳನ್ನು ಭೇಟಿ ಮಾಡಿ ಇಲಾಖೆಯ ಸೌಲಭ್ಯ ಪಡೆಯಬೇಕೆಂದು ಎಂದು ತಿಳಿಸಿದರು.

### ತಳಿರು, ತೋರಣಗಳೊಂದಿಗೆ ಸಿಂಗಾರಗೊಂಡ ಸರ್ಕಾರಿ ಶಾಲೆಗಳು

# ಶಾಲೆಗಳಿಗೆ ಬಾರದ ಸಮವಸ್ತ್ರಗಳು, ಪಠ್ಯಪುಸ್ತಕಗಳು

**ವಿಜಯಪುರ:** ಸರಕಾರಿ ಶಾಲೆಗಳು ಬುಧವಾರದಿಂದ ಪ್ರಾರಂಭಗೊಂಡಿದ್ದರೂ, ಅಧಿಕೃತವಾಗಿ ಮಕ್ಕಳಿಗೆ ಶುಕ್ರವಾರದಿಂದ ಶಾಲೆಗಳು ಪ್ರಾರಂಭವಾಗಲಿದ್ದು, ಅಂದು ತಳಿರು, ತೋರಣಗಳೊಂದಿಗೆ ಹೂಗಳನ್ನು ನೀಡಿ, ಸಿಹಿ ಊಟ ಮಾಡಿಸುವ ಮೂಲಕ ಶಾಲೆ ಪ್ರಾರಂಭಗೊಳ್ಳಲಿದ್ದು, ಅಂದು ಎಲ್ಲಾ ಮಕ್ಕಳುಗಳಿಗೂ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ಪೂರೈಸಬೇಕಾಗಿದ್ದು, ಸರ್ಕಾರ ಈಗಾಗಲೇ ಎಲ್ಲಾ ಶಾಲೆಗಳಿಗೆ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ಪೂರೈಸಲಾಗಿದೆ ಎಂದು ತಿಳಿಸಿರುವುದು ಕೇವಲ ಪೊಳ್ಳು ಭರವಸೆಯಾಗಿದ್ದು, ಈ ಹಂತದವರೆಗೂ ಎಲ್ಲಾ ಶಾಲೆಗಳಿಗೂ ಅವಶ್ಯಕ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ಪೂರೈಸಲಾಗದಿರುವುದು ದುರ್ದೈವದ ಸಂಗತಿಯಾಗಿದೆ.



ಪಟ್ಟಣದ ಹಲವಾರು ಶಾಲೆಗಳಲ್ಲಿ ಎರಡು ಜೊತೆ ಸಮವಸ್ತ್ರಗಳ ಬದಲು ಒಂದು ಜೊತೆ ಸಮವಸ್ತ್ರಕ್ಕೆ ಆಗುವಷ್ಟು ಬಟ್ಟೆಗಳು ಬಂದಿದ್ದು, ಆರು ಹಾಗೂ ಏಳನೇ ತರಗತಿಗಳ ಮಕ್ಕಳಿಗೆ ಸಮವಸ್ತ್ರಗಳು ಬದಲಾವಣೆಯಾಗಿದ್ದು, ಅದಕ್ಕೆ ತಕ್ಕಂತೆ ಬಟ್ಟೆಗಳು ಬಂದಿಲ್ಲ. ಒಂದು ಹಾಗೂ ಎರಡನೇ ತರಗತಿ ಪಠ್ಯಪುಸ್ತಕಗಳು ಬಂದಿದ್ದರೆ ಆರು ಹಾಗು ಏಳನೇ ತರಗತಿ ಪಠ್ಯಪುಸ್ತಕಗಳು ಸರಿಯಾಗಿ ಲಭ್ಯವಿರುವುದಿಲ್ಲ ಹಾಗೂ ಆಂಗ್ಲ ಮಾಧ್ಯಮ ಶಾಲೆಯ ಬಹಳಷ್ಟು ಪಠ್ಯಪುಸ್ತಕಗಳು ಸಹ ಶಾಲೆಗಳಿಗೆ ಸರಬರಾಜು ಆಗಿರುವುದಿಲ್ಲ.

ಬಹಳಷ್ಟು ಶಾಲೆಗಳಲ್ಲಿ ಬಲಾಢ್ಯವಾಗಿರುವ ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರುಗಳು ಇದರ ಬಗ್ಗೆ ಮಾತುಕತೆ ನಡೆಸಿ, ಅವಶ್ಯಕ ಪಠ್ಯಪುಸ್ತಕಗಳು ಹಾಗೂ ಸಮವಸ್ತ್ರಗಳನ್ನು ಪಡೆದುಕೊಂಡಿದ್ದರೆ, ದುರ್ಬಲ ಮುಖ್ಯೋಪಾಧ್ಯಾಯರುಗಳು ಹಾಗೂ ಶಾಲಾ ಅಭಿವೃದ್ಧಿ ಸಮಿತಿ ಇರುವೆಡೆ ಅವಶ್ಯಕ ಪಠ್ಯಪುಸ್ತಕ ಹಾಗೂ ಸಮವಸ್ತ್ರಗಳ ಸರಬರಾಜು ಇರುವುದಿಲ್ಲ. ಬಿಸಿಯೂಟಕ್ಕೆ ತೊಂದರೆ ಇಲ್ಲ;- ಇಷ್ಟೆಲ್ಲಾ ಇಲ್ಲದಿದ್ದರ ನಡುವೆಯೂ ಎಲ್ಲಾ ಶಾಲೆಗಳಿಗೆ ಅವಶ್ಯಕವಾದ ಅಕ್ಕಿ, ಬೇಳೆ, ಗೋಧಿ ಮತ್ತಿತರೆ ಪಡಿತರ ವಸ್ತುಗಳು ಮತ್ತು ಹಾಲಿನ ಪುಡಿ ಸರಬರಾಜು ಆಗಿದ್ದು, ಮಕ್ಕಳ ಬಿಸಿಯೂಟಕ್ಕೆ ಯಾವುದೇ ತೊಂದರೆ ಇರುವುದಿಲ್ಲ.

ಎಲ್ಲಾ ಶಾಲೆಗಳಲ್ಲಿಯೂ ಈ ಸಂಬಂಧ ಕೊರತೆಗಳು ಕಾಡುತ್ತಿದ್ದರೂ ಸಹ ಯಾವುದೇ ಶಾಲಾ ಮುಖ್ಯೋಪಾಧ್ಯಾಯರುಗಳಾಗಲಿ, ಶಾಲಾ ಅಭಿವೃದ್ಧಿ ಸಮಿತಿ ಯವರುಗಳಾಗಲಿ ಈ ಕೊರತೆಗಳ ಬಗ್ಗೆ ಅಧಿಕೃತವಾಗಿ ಮಾತನಾಡಲು ಬಯಸುತ್ತಿಲ್ಲ. ಮಾತನಾಡಿದರೆ ತಮ್ಮ ಶಾಲೆಗಳಿಗೆ ಬರಬೇಕಾದ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳು ಮತ್ತೂ ತಡವಾಗುತ್ತದೆ ಎಂಬ ಕಾರಣದಿಂದ ಇರಬಹುದು.



**ವಿಜಯಪುರ ಪಟ್ಟಣದ ಐದನೇ ವಾರ್ಡ್ ನ ಮಹೇಶ್ವರಮ್ಮ ದೇವರನ್ನು ಅಲಂಕೃತ ಪಲ್ಲಕ್ಕಿ ಉತ್ಸವ ದೊಂದಿಗೆ ಭಕ್ತರ ಹಳ್ಳಿಯ ಗಂಗಾತಾಯಿ ದೇವರೊಂದಿಗೆ ಜಾತ್ರಾ ಮಹೋತ್ಸವದ ಪ್ರಯುಕ್ತ ಪಟ್ಟಣದ ಮುಖ್ಯಬೀದಿಗಳಲ್ಲಿ ಮೆರವಣಿಗೆಯಲ್ಲಿ ಕೊಂಡೊಯ್ಯಲಾಯಿತು. ಈ ಸಂದರ್ಭದಲ್ಲಿ ಮಹೇಶ್ವರಮ್ಮ ದೇವಾಲಯ ಭಕ್ತ ಮಂಡಳಿಯ ಪುನೀತ್, ಮಧು, ರವಿ, ಜಯಂತ್, ವಿನೋದ್, ವಿನಯ್, ಸುರೇಶ್, ಸತೀಶ್ ಮತ್ತಿತರರು ಭಾಗವಹಿಸಿದ್ದರು.**



ಸಂಜೆ ಟಿಪ್ಸ್

# ಫ್ರಾಂಕ್ಲಿನ್ ಇಂಡಸ್ಟ್ರೀಸ್ ಲಿಮಿಟೆಡ 38.83 ಕೋಟಿ ರೂ.ಗಳ ಹಕ್ಕುಗಳು ಪ್ರಾರಂಭ

Franklin Industries Limited

ಕೃಷಿ ಸರಕುಗಳ ವ್ಯಾಪಾರದಲ್ಲಿ ತೊಡಗಿರುವ ಗುಜರಾತ್ ಮೂಲದ ಫ್ರಾಂಕ್ಲಿನ್ ಇಂಡಸ್ಟ್ರೀಸ್ ಲಿಮಿಟೆಡ್ (ಬಿಎಸ್ಇ - 540190) ನ 38.83 ಕೋಟಿ ರೂ.ಗಳ ರೈಟ್ಸ್ ಇಶ್ಯೂ ಮೇ 24, 2024 ರಂದು ಚಂದಾದಾರಿಕೆಗಾಗಿ ತೆರೆಯಲಾಗಿದೆ. ಈ ವಿತರಣೆಯ ಮೂಲಕ ಸಂಗ್ರಹಿಸಿದ ಹಣವನ್ನು ಕಾರ್ಯ ಬಂಡವಾಳದ ಅವಶ್ಯಕತೆಗಳು ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳು ಸೇರಿದಂತೆ ಕಂಪನಿಯ ವಿಸ್ತರಣಾ ಯೋಜನೆಗಳಿಗೆ ಧನಸಹಾಯ ಮಾಡಲು ಬಳಸಲಾಗುತ್ತದೆ. ಕಂಪನಿಯ ರೈಟ್ ಇಶ್ಯೂ ಅನ್ನು ಪ್ರತಿ ಷೇರಿಗೆ 3.58 ರೂ.ಗಳ ದರದಲ್ಲಿ ನೀಡಲಾಗುತ್ತದೆ, ಇದು 24 ಮೇ 2024 ರಂದು ಪ್ರತಿ ಷೇರಿಗೆ 7.50 ರೂ.ಗಳ ಫ್ರಾಂಕ್ಲಿನ್ ಇಂಡಸ್ಟ್ರೀಸ್ ಲಿಮಿಟೆಡ್ ಇಶ್ಯೂ ಓಪನ್ ಇಶ್ಯೂ ಬೆಲೆ ಇಶ್ಯೂ ಮುಕ್ತಾಯ 24 ಮೇ, 2024 ಪ್ರತಿ ಈಕ್ವಿಟಿ ಷೇರಿಗೆ 3.58 ರೂ. 11 ಜೂನ್, 2024 ಕಂಪನಿಯು ತಲಾ 1 ರೂಪಾಯಿ ಮುಖಬೆಲೆಯ 10,84,50,000 ಪೂರ್ಣ ಪಾವತಿಸಿದ ಈಕ್ವಿಟಿ ಷೇರುಗಳನ್ನು ಪ್ರತಿ ಷೇರಿಗೆ ರೂ.3.58 ದರದಲ್ಲಿ (ಪ್ರತಿ ಷೇರಿಗೆ ರೂ. 2.58 ಪ್ರೀಮಿಯಂ ಸೇರಿದಂತೆ) ಒಟ್ಟು 38.83 ಕೋಟಿ ರೂ.ಗಳ ನಗದು ರೂಪದಲ್ಲಿ ವಿತರಿಸಲಿದೆ. ಪ್ರಸ್ತಾವಿತ ವಿತರಣೆಗೆ ಹಕ್ಕುಗಳ ಅರ್ಹತಾ ಅನುಪಾತವನ್ನು 3:1 ಕ್ಕೆ ನಿಗದಿಪಡಿಸಲಾಗಿದೆ (ದಾಖಲೆಯ ದಿನಾಂಕದಂದು - ಮೇ 13, 2024 ರಂದು ಈಕ್ವಿಟಿ ಷೇರುದಾರರು ಹೊಂದಿರುವ ಪ್ರತಿ 1 ಪೂರ್ಣ-ಪಾವತಿಸಿದ ಈಕ್ವಿಟಿ ಷೇರಿಗೆ ತಲಾ 1 ರೂ ಮುಖಬೆಲೆಯ 3 ರೈಟ್ಸ್ ಈಕ್ವಿಟಿ ಷೇರುಗಳು). ಆನ್-ಮಾರ್ಕೆಟ್ ಹಕ್ಕುಗಳ ಹಕ್ಕುಗಳನ್ನು ತ್ಯಜಿಸಲು ಕೊನೆಯ ದಿನಾಂಕ 5 ಜೂನ್, 2024 38.83 ಕೋಟಿ ರೂ.ಗಳ ವಿತರಣಾ ಆದಾಯದಲ್ಲಿ, ಕಂಪನಿಯು 29.26 ಕೋಟಿ ರೂ.ಗಳನ್ನು ದುಡಿಯುವ ಬಂಡವಾಳದ ಅಗತ್ಯಕ್ಕಾಗಿ ಮತ್ತು 9.31 ಕೋಟಿ ರೂ.ಗಳನ್ನು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಳಸಲು ಉದ್ದೇಶಿಸಿದೆ.

# ಮಾವಿನಕಾಯಿ ಬಜ್ಜಿ

ಪಾಕ ಶಾಲೆ



## ಮಾಡುವ ವಿಧಾನ

ಮೊದಲಿಗೆ ಮಾವಿನ ಕಾಯಿಯನ್ನು ಚೆನ್ನಾಗಿ ತೊಳೆದು ನಿಮಗೆ ಬೇಕಾಗುವ ರೀತಿಯಲ್ಲಿ ಕಟ್ ಮಾಡಿಕೊಳ್ಳಿ. ನಂತರ ಒಂದು ಬೌಲ್ಗೆ ಕಡ್ಲೆಹಿಟ್ಟು,ಅಡುಗೆ ಸೋಡಾ, ಮೆಣಸಿನ ಪುಡಿ,ಅರಶಿನ ಪುಡಿ, ಶುಂಠಿ-ಬೆಳ್ಳುಳ್ಳಿ ಪೇಸ್ಟ್ ಮತ್ತು ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಸ್ವಲ್ಪ ನೀರನ್ನು ಸೇರಿಸಿ ಹಿಟ್ಟನ್ನು ಚೆನ್ನಾಗಿ ಕಲಸಿಕೊಳ್ಳಿ. ಆಮೇಲೆ ಒಂದು ಬಾಣಲೆಯಲ್ಲಿ ಕರಿಯಲು ಬೇಕಾಗುವಷ್ಟು ಎಣ್ಣೆ ಹಾಕಿ ಬಿಸಿ ಮಾಡಿ ಅದು ಬಿಸಿಯಾದ ಮೇಲೆ ಹೆಚ್ಚಿಟ್ಟುಕೊಂಡ ಮಾವಿನಕಾಯಿಯನ್ನು ಮಾಡಿಟ್ಟ ಹಿಟ್ಟಿನ ಮಿಶ್ರಣಕ್ಕೆ ಮುಳುಗಿಸಿ ಎಣ್ಣೆಗೆ ಹಾಕಿ ಎರಡೂ ಬದಿಯನ್ನು ಚೆನ್ನಾಗಿ ಬೇಯಿಸಿರಿ. ಬಿಸಿ-ಬಿಸಿಯಾದ ಮಾವಿನ ಕಾಯಿ ಬಜ್ಜಿ/ಪೋಡಿ ಪುದೀನಾ ಚಟ್ನಿಯೊಂದಿಗೆ ಸವಿಯಿರಿ.

## ಬೇಕಾಗಿರುವ ಪದಾರ್ಥ

**ಮಾವಿನ ಕಾಯಿ-2, ಕಡ್ಲೆಹಿಟ್ಟು-1ಕಪ್, ಅರಶಿನ ಪುಡಿ-ಸ್ವಲ್ಪ, ಶುಂಠಿ-ಬೆಳ್ಳುಳ್ಳಿ ಪೇಸ್ಟ್-1ಚಮಚ, ಮೆಣಸಿನ ಪುಡಿ-2ಚಮಚ, ಅಡುಗೆ ಸೋಡಾ-1 ಚಿಟಿಕೆ, ರುಚಿಗೆ ತಕ್ಕಷ್ಟು ಉಪ್ಪು, ಕರಿಯಲು ಎಣ್ಣೆ.**

# ಸೂಪರ್ ಸ್ಟಾರ್ಸ್‌ಗಳನ್ನೇ ಹಿಂದಿಕ್ಕಿದ ನಟಿ ದೀಪಿಕಾ ಪಡುಕೋಣೆ ಈಗ ನಂ.1 ..!



ಕಳೆದ 10 ವರ್ಷಗಳಲ್ಲಿ ಅತೀ ಹೆಚ್ಚು ವೀಕ್ಷಣೆ ಮಾಡಲ್ಪಟ್ಟ ಟಾಪ್ 100 ಭಾರತೀಯ ಸೆಲೆಬ್ರಿಟಿಗಳ ಪಟ್ಟಿಯನ್ನು ಐಎಂಡಿಬಿ ಪ್ರಕಟಿಸಿದೆ. ಇದರಲ್ಲಿ ಬಾಲಿವುಡ್ನ ಖ್ಯಾತ ಹಾಗೂ ಕರ್ನಾಟಕ ಮೂಲದ ನಟಿ ದೀಪಿಕಾ ಪಡುಕೋಣೆ ಅವರು ನಂಬರ್ 1 ಸ್ಥಾನ ಪಡೆದುಕೊಂಡಿದ್ದಾರೆ. ಈ ಮೂಲಕ ಬಾಲಿವುಡ್ನ ನಟರಾದ ಸಲ್ಮಾನ್ ಖಾನ್, ಶಾರುಖ್, ಆಮೀರ್ ಖಾನ್ ಅವರಂತಹ ಸೂಪರ್ ಸ್ಟಾರ್ಗಳನ್ನೇ ದೀಪಿಕಾ ಹಿಂದಿಕ್ಕಿದ್ದಾರೆ. 2007ರಲ್ಲಿ ಶಾರುಖ್ ಖಾನ್ ನಟನೆಯ ಓಂ ಶಾಂತಿ ಓಂ ಸಿನಿಮಾ ಮೂಲಕ ದೀಪಿಕಾ ಬಾಲಿವುಡ್ಗೆ ಎಂಟ್ರಿಕೊಟ್ಟು ಇಂದಿಗೂ ಬಿಟೌನ್ನಲ್ಲಿ ಬಹುದೊಡ್ಡ ಸ್ಟಾರ್ ಆಗಿ ಗುರುತಿಸಿಕೊಂಡಿದ್ದಾರೆ. 2014 ಜನವರಿಯಿಂದ 2024ರ ಏಪ್ರಿಲ್ ವರೆಗಿನ ಪಟ್ಟಿಯನ್ನು ಐಎಂಡಿಬಿ ರಿಲೀಸ್ ಮಾಡಿದೆ. ಈ ಪಟ್ಟಿಯಲ್ಲಿ ನಟ ಶಾರುಖ್ ಖಾನ್ 2ನೇ ಸ್ಥಾನ, ನಟಿ ಐಶ್ವರ್ಯಾ ರೈ 3ನೇ ಸ್ಥಾನ, ಆಲಿಯಾ ಭಟ್ 4, ದಿ.ಇರ್ಫಾನ್ ಖಾನ್ 5, ಆಮೀರ್ ಖಾನ್ 6, ದಿ.ಸುಶಾಂತ್ ಸಿಂಗ್ ರಜಪೂತ್ 7, ಸಲ್ಮಾನ್ ಖಾನ್ 8, ಹೃತಿಕ್ ರೋಷನ್ 9, ಅಕ್ಷಯ್ ಕುಮಾರ್ 10ನೇ ಸ್ಥಾನದಲ್ಲಿದ್ದಾರೆ. ಇನ್ನು ಕನ್ನಡದ ರಾಕಿಂಗ್ ಸ್ಟಾರ್ ಯಶ್ ಅವರು ಈ ಲಿಸ್ಟ್ನಲ್ಲಿ 89ನೇ ಸ್ಥಾನದಲ್ಲಿದ್ದಾರೆ. ಈ ಪಟ್ಟಿಯಲ್ಲಿ ಕನ್ನಡದ ಏಕೈಕ ನಟ ಯಶ್ ಅವರ ಹೆಸರು ಮೊದಲ ಬಾರಿಗೆ ಸೇರ್ಪಡೆಯಾಗಿದೆ. ನಟಿ ದೀಪಿಕಾ ಪಡುಕೋಣೆ ಧರಿಸಿದ್ದ ಹಳದಿ ಬಣ್ಣದ ಗೌನ್ ಅನ್ನು ಇನ್ಸ್ಟಾಗ್ರಾಮ್ನಲ್ಲಿ ಮಾರಾಟಕ್ಕೆ ಇಟ್ಟಿದ್ದರು. ಈ ಬಟ್ಟೆ ಮಾರಾಟದಿಂದ ಹಣವನ್ನು ಚಾರಿಟಿಗೆ ನೀಡುವುದಾಗಿ ತಿಳಿಸಿದ್ದರು. ಅವರು ಹಾಗೆ ಘೋಷಿಸಿದ ಕೆಲವೆ ನಿಮಿಷಗಳಲ್ಲಿ ಈ ಬಟ್ಟೆ ಮಾರಾಟವಾಗಿದೆ. ಅದು ಕೂಡ ಹತ್ತು, ಇಪ್ಪತ್ತು ಸಾವಿರಕ್ಕಲ್ಲ ಬರೋಬ್ಬರಿ 34,000 ರೂಪಾಯಿಗೆ ಮಾರಾಟ ಮಾಡಿದ್ದಾರೆ. ದೀಪಿಕಾ ಪಡುಕೋಣೆ ತನ್ನ ಇನ್ಸ್ಟಾಗ್ರಾಮ್ ಸ್ಟೋರಿಯಲ್ಲಿ ಗೌನ್ ಮಾರಾಟವಾಗಿರುವ ಬಗ್ಗೆ ರೀಲ್ ಅನ್ನು ಹಂಚಿಕೊಂಡಿದ್ದಾರೆ. ಜೊತೆಗೆ ಬಟ್ಟೆ ತೆಗೆದುಕೊಳ್ಳಲು 'ಕ್ಲೋಸೆಟ್' ಗೆ ಲಿಂಕ್ ಅನ್ನು ಶೇರ್ ಮಾಡಿದ್ದಾರೆ. ಅಲ್ಲಿ ಉಡುಪಿನ ಬೆಲೆಯನ್ನು ಕಾಣಬಹುದು. 20 ನಿಮಿಷಗಳಲ್ಲಿ ಗೌನ್ ಮಾರಾಟವಾಗಿದೆ ಎಂದು ಆಕೆಯ ತಂಡ ಹೇಳಿಕೊಂಡಿದೆ. ರಣವೀರ್ ಸಿಂಗ್ ಕೂಡ ದೀಪಿಕಾ ಪಡುಕೋಣೆ ಅವರನ್ನು ಈ ಡ್ರೆಸ್ನಲ್ಲಿ ಮೆಚ್ಚಿಕೊಂಡಿದ್ದಾರೆ. ಜೊತೆಗೆ ಕಾಮೆಂಟ್ ಮಾಡುವ ಮೂಲಕ ದೀಪಿಕಾ ಪಡುಕೋಣೆ ಅವರ ಪ್ರೆಗ್ನೆನ್ಸಿ ಬಗ್ಗೆ ಟ್ರೋಲ್ ಮಾಡುತ್ತಿದ್ದವರ ಬಾಯಿ ಮುಚ್ಚಿಸಿದ್ದಾರೆ. ಬುರಿ ನಜರ್ ವಾಲೆ, ತೇರಾ ಮೂನ್ಹ್ ಕಾಲಾ ಎಂದು ಹಿಂದಿಯಲ್ಲಿ ಕಾಮೆಂಟ್ ಮಾಡಿದ್ದಾರೆ.

# ತಂಬಾಕು ಸೇವನೆ ತ್ಯಜಿಸುವುದರಿಂದ ಆಗುವ ಲಾಭಗಳು



ಹೆಲ್ತ್ ಟಿಪ್ಸ್

ಧೂಮಪಾನ ನಿಲ್ಲಿಸಿದ 20 ನಿಮಿಷಗಳಲ್ಲಿ ಹೃದಯ ಬಡಿತ ಸಾಮಾನ್ಯವಾಗುತ್ತದೆ. ಧೂಮಪಾನ ನಿಲ್ಲಿಸಿದ 12 ಗಂಟೆಗಳಲ್ಲಿ ದೇಹದ ಕಾರ್ಬನ್ ಡೈ ಆಕ್ಸೈಡ್ ನ ಪ್ರಮಾಣ ಸಾಮಾನ್ಯ ಹಂತಕ್ಕೆ ಬರುತ್ತದೆ. ಸುಮಾರು 2 ರಿಂದ 12 ವಾರಗಳಲ್ಲಿ ಶ್ವಾಸಕೋಶದ ಕಾರ್ಯ ಉತ್ತಮಗೊಳ್ಳುತ್ತದೆ. 1 ರಿಂದ 19 ತಿಂಗಳಲ್ಲಿ ಕೆಮ್ಮು, ಉಸಿರಾಟದ ಸಮಸ್ಯೆ ಕಡಿಮೆಯಾಗುತ್ತದೆ. ಹೀಗೆ ಹಲವಾರು ಪ್ರಯೋಜನಗಳು ತಂಬಾಕು ಸೇವನೆಯನ್ನು ತ್ಯಜಿಸುವುದರಿಂದ ಸಾಧ್ಯವಿದೆ.

ತಂಬಾಕು ಸೇವನೆಯಿಂದ ಮುಕ್ತರಾಗಲು ಇಚ್ಚಿಸುವವರು ಜಿಲ್ಲಾ ಆಸ್ಪತ್ರೆಯ ತಂಬಾಕು ವ್ಯಸನ ಮುಕ್ತ ಕೇಂದ್ರ, ಕೊಠಡಿ ಸಂಖ್ಯೆ:156 ರಲ್ಲಿ ಉಚಿತ ಸಮಾಲೋಚನೆ ಹಾಗೂ ಉಚಿತ ನಿಕೋಟಿನ್ ಗಮ್ಸ್ ಅನ್ನು ನೀಡಲಾಗುವುದು. 2023-24 ರಲ್ಲಿ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 1,593 ವ್ಯಸನಿಗಳಿಗೆ 19,310 ನಿಕೋಟಿನ್ ಗಮ್ಸ್ ಅನ್ನು ವಿತರಿಸಿದ್ದು, ಅದರಲ್ಲಿ 142 ಮಂದಿ ತಂಬಾಕನ್ನು ತ್ಯಜಿಸಿದ್ದಾರೆ.

ಕೋಟ್ಪಾ ಕಾಯ್ದೆ-2003 ರ ಪ್ರಕಾರ ಸೆಕ್ಷನ್-4 ರನ್ವಯ ಸಾರ್ವಜನಿಕ ಸ್ಥಳಗಳಾಸ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಮಾರ್ಕೆಟ್ ಇತ್ಯಾದಿ ಹೆಚ್ಚು ಜನಸಂದಣಿ ಇರುವ ಪ್ರದೇಶಗಳಲ್ಲಿ ಧೂಮಪಾನ ಮಾಡುವವರ ವಿರುದ್ದ ರೂ.200 ವರೆಗೆ ದಂಡ ವಿಧಿಸಿಲಾಗುವುದು. ಸಾರ್ವಜನಿಕ ಸ್ಥಳಗಳಲ್ಲಿರುವ ಅಂಗಡಿ ಮಾಲೀಕರು ಸೆಕ್ಷನ್-4 ರ ಧೂಮಪಾನ ನಿಷೇಧಿತ ಪ್ರದೇಶ ಎಂಬ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸುವುದು. ಸೆಕ್ಷನ್-5 ಅಡಿಯಲ್ಲಿ ತಂಬಾಕು ಉತ್ಪನ್ನಗಳ ಪ್ರತ್ಯಕ್ಷ ಹಾಗು ಪರೋಕ್ ಜಾಹೀರಾತನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಉಲ್ಲಂಘಿಸಿದ್ದಲ್ಲಿ ಪ್ರಕರಣವನ್ನು ದಾಖಲಿಸಿ ದಂಡ ವಿಧಿಸಲಾಗುವುದು. ಸೆಕ್ಷನ್-6ಎ ಅಡಿಯಲ್ಲಿ 18 ವರ್ಷದೊಳಗಿನ ಮಕ್ಕಳಿಗೆ ಹಾಗೂ ಮಕ್ಕಳಿಂದ ತಂಬಾಕು ಉತ್ಪನ್ನಗಳ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಸೆಕ್ಷನ್-6 ಬಿ ಅಡಿಯಲ್ಲಿ ಶೈಕ್ಷಣಿಕ ಸಂಸ್ಥೆಗಳ 100 ಗಜ ಅಂತರದಲ್ಲಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವುದನ್ನು ಕಟ್ಟಾಯವಾಗಿ ನಿಷೇಧಿಸಲಾಗಿದೆ. ಹಾಗೂ 3ಥ2 ಅಡಿ ಅಗಲದ ನಾಮಫಲಕವನ್ನು ಪ್ರದರ್ಶಿಸುವುದು. ಸೆಕ್ಷನ್-7 ಅಡಿಯಲ್ಲಿ ತಂಬಾಕು ಉತ್ಪನ್ನಗಳ ಪೊಟ್ಟಣಗಳ ಮೇಲೆ ಶೇ.85 ರಷ್ಟು ಆರೋಗ್ಯಕರ ಚಿಹ್ನೆಯನ್ನು ಪ್ರದರ್ಶಿಸಬೇಕು ಎಂದು ಆರೋಗ್ಯ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

# 20,000 ಮಹಿಳೆಯರ ಸಬಲೀಕರಣ

## ಭಾರತದಲ್ಲಿ ಋತುಚಕ್ರಕ್ಕೆ ಸಂಬಂಧಿಸಿದ ಕಳಂಕ ನಿವಾರಿಸಿದ ಅಮೆಜಾನ್



ಭಾರತದಲ್ಲಿ ತನ್ನ ಸಮುದಾಯ ಜೊತೆಗಿನ ಒಡನಾಟ ಕಾರ್ಯಕ್ರಮಗಳು ಬೀರಿರುವ ಗಣನೀಯ ಪರಿಣಾಮದ ವಿವರಗಳನ್ನು ಅಮೆಜಾನ್ ಇಂದು ಇಲ್ಲಿ ಪ್ರಕಟಿಸಿದೆ. ಮಹಿಳಾ ಸಬಲೀಕರಣ, ಋತುಚಕ್ರ ನೈರ್ಮಲ್ಯದ ಅರಿವು ಮತ್ತು ಸುಸ್ಥಿರ ನೈರ್ಮಲ್ಯ ಉತ್ಪನ್ನ ತಯಾರಿಕಾ ಪರಿಸರ ವ್ಯವಸ್ಥೆಯ ಮೇಲೆ ಅಮೆಜಾನ್ ತನ್ನೆಲ್ಲ ಗಮನವನ್ನು ಕೇಂದ್ರೀಕರಿಸಿದೆ.

ನಾವು ಸೇವೆ ಸಲ್ಲಿಸುತ್ತಿರುವ ಸಮುದಾಯಗಳ ಮೇಲೆ ಶಾಶ್ವತವಾದ ಸಕಾರಾತ್ಮಕ ಪ್ರಭಾವವನ್ನು ಸೃಷ್ಟಿಸಲು ನಾವು ಒಂದು ಪ್ರಮುಖ ಧ್ಯೇಯವನ್ನು ಅಮೆಜಾನ್ನಲ್ಲಿ ಪಾಲಿಸುತ್ತ ಬಂದಿದ್ದೇವೆ? ಎಂದು ಅಮೆಜಾನ್ ಇಂಡಿಯಾದ ಸಮುದಾಯ ಒಡನಾಟ ಕಾರ್ಯಕ್ರಮದ ಮುಖ್ಯಸ್ಥೆ ಮನೀಶಾ ಪಾಟೀಲ್ ಅವರು ಹೇಳಿದ್ದಾರೆ. ?ಮುಟ್ಟಿನ ಸುತ್ತ ಆಳವಾಗಿ ಬೇರೂರಿರುವ ಕಳಂಕ ಪರಿಹರಿಸಲು, ಕೈಗೆಟುಕುವ ನೈರ್ಮಲ್ಯ ಉತ್ಪನ್ನಗಳು ಸುಲಭವಾಗಿ ದೊರೆಯುವಂತೆ ಮಾಡುವುದನ್ನು ಉತ್ತೇಜಿಸಲು ಮತ್ತು ಸುಸ್ಥಿರ ಹಣಕಾಸು ಅವಕಾಶಗಳ ಮೂಲಕ ಮಹಿಳೆಯರನ್ನು ಸಬಲೀಕರಣಗೊಳಿಸುವ ರೀತಿಯಲ್ಲಿ ನಮ್ಮ ಕಾರ್ಯಕ್ರಮಗಳನ್ನು ವಿನ್ಯಾಸಗೊಳಿಸಲಾಗಿದೆ ಎಂದು ಅವರು ಹೇಳಿದ್ದಾರೆ.

**ಅಡೆತಡೆಗಳ ನಿವಾರಣೆ:** ಮುಟ್ಟಿನ ನೈರ್ಮಲ್ಯದ ಅರಿವಿನ ಮೂಲಕ ಮಹಿಳೆಯರ ಸಬಲೀಕರಣ

ಮಹಿಳೆಯರಲ್ಲಿನ ನೈಸರ್ಗಿಕ ಜೈವಿಕ ಪ್ರಕ್ರಿಯೆಯಾಗಿರುವ ಮಾಸಿಕ ಮುಟ್ಟನ್ನು ಭಾರತದ ಅನೇಕ ಭಾಗಗಳಲ್ಲಿ ರಹಸ್ಯ, ಪ್ರವೃತ್ತಿ ಮತ್ತು ಅವಮಾನದಿಂದ ನೋಡಲಾಗುತ್ತಿದೆ. 2021 ರಲ್ಲಿ ಪ್ರಾರಂಭಿಸಲಾಗಿರುವ ಅಮೆಜಾನ್ನ ಗ್ರಾಮ ಮಿತ್ರ ಮತ್ತು ಪ್ರಗತಿ ಮಿತ್ರ ಕಾರ್ಯಕ್ರಮಗಳು ಜನರಲ್ಲಿನ ಇಂತಹ ಪ್ರವೃತ್ತಿಗಳನ್ನು ದೂರ ಮಾಡಲಿವೆ. ಸ್ಥಳೀಯ ಸಮುದಾಯದ ಈ ರಾಯಭಾರಿಗಳು, ತಮ್ಮ ನೆರೆಹೊರೆಯಲ್ಲಿ ಇರುವ ವಿಶ್ವಾಸಾರ್ಹ ವ್ಯಕ್ತಿಗಳು, ಶಾಲೆ, ಅಂಗನವಾಡಿಗಳು (ಗ್ರಾಮೀಣ ಶಿಶುಪಾಲನಾ ಕೇಂದ್ರಗಳು), ಮತ್ತು ಸ್ವ-ಸಹಾಯ ಗುಂಪುಗಳಲ್ಲಿ (ಎಸ್ಎಚ್ಜಿ) ತಿಳಿವಳಿಕೆ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದಾರೆ.

**ಆರೋಗ್ಯಕರ ಪ್ರವೃತ್ತಿಗಳು:** ಮುಟ್ಟಿನ ಸಮಯದಲ್ಲಿ ನೈರ್ಮಲ್ಯ ಪ್ಯಾಡ್ಗಳು ಅಥವಾ ಶುದ್ಧ ಬಟ್ಟೆ ಬಳಸುವುದರ ಮಹತ್ವ, ಸಮರ್ಪಕ ರೀತಿಯಲ್ಲಿ ನೈರ್ಮಲ್ಯ ನಿರ್ವಹಣೆ, ಆಹಾರ ಮತ್ತು ಪೋಷಣೆಯ ಮೇಲೆ ಗಮನ ಕೇಂದ್ರೀಕರಿಸುವುದು ಸೇರಿದಂತೆ ಆರೋಗ್ಯಕರ ನಡವಳಿಕೆಗೆ ಪ್ರೋತ್ಸಾಹ ನೀಡುವುದು.

ಮಿಥ್ಯೆಗಳ ನಿವಾರಣೆ: ಮುಟ್ಟಿನ ಬಗೆಗಿನ ತಪ್ಪು ಕಲ್ಪನೆಗಳು ಮತ್ತು ನಿಷೇಧಗಳನ್ನು ನಿವಾರಿಸುವುದು, ನೈಸರ್ಗಿಕವಾಗಿ ಮಣ್ಣಿನಲ್ಲಿ ಸುಲಭವಾಗಿ ಕೊಳೆಯುವ ಜೈವಿಕ ಪ್ರಕ್ರಿಯೆಯ ಬಗ್ಗೆ ಮುಕ್ತವಾಗಿ ಮಾತನಾಡುವುದು

**ಪೂರಕ ಪರಿಸರ ನಿರ್ಮಾಣ:** ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ನೆರವಿನಿಂದ ಆರೋಗ್ಯ ಸಂಪನ್ಮೂಲ ಮೂಲಕ ಮಹಿಳೆಯರು ಮತ್ತು ಬಾಲಕಿಯರನ್ನು ಸಂಪರ್ಕಿಸುವುದು. ಅವರಿಗೆ ಅಗತ್ಯ ಆರೋಗ್ಯ ಸೇವೆಗಳು ದೊರೆಯುವುದನ್ನು ಖಚಿತಪಡಿಸುವುದು ಮತ್ತು ಅವರ ಸಮಸ್ಯೆಗಳನ್ನು ಸೂಕ್ಷ್ಮತೆಯಿಂದ ಪರಿಹರಿಸುವುದು.

ಈ ಕಾರ್ಯಕ್ರಮವು ಸಮುದಾಯದಲ್ಲಿ ಬೀರಿರುವ ಪ್ರಭಾವವು ಗಮನಾರ್ಹವಾಗಿದೆ. ಇಲ್ಲಿಯವರೆಗೆ 20,000ಕ್ಕೂ ಹೆಚ್ಚು ಮಹಿಳೆಯರು ಮತ್ತು ಬಾಲಕಿಯರನ್ನು ತಲುಪಿದೆ. ಇದು ಮಹಿಳೆಯರಲ್ಲಿ ಸಕಾರಾತ್ಮಕ ನಡವಳಿಕೆಯ ಬದಲಾವಣೆಯನ್ನು ಉತ್ತೇಜಿಸಿದೆ. ಮಹಿಳೆಯರು ತಮ್ಮ ಆರೋಗ್ಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಇದು ಅವರನ್ನು ಸಮರ್ಥರನ್ನಾಗಿಸಿದೆ. ಅವರಿಗೆ ಸಮಾನ ಅವಕಾಶಗಳು ಮತ್ತು ಪೂರಕ ವಾತಾವರಣದ ಕೊಡುಗೆ ನೀಡುತ್ತವೆ.

**ಆವಿಷ್ಕಾರದ ಮೂಲಕ ಸಬಲೀಕರಣ: ಸುಸ್ಥಿರ ಸ್ಯಾನಿಟರಿ ನ್ಯಾಪ್ಕಿನ್ ತಯಾರಿಕಾ ಘಟಕಗಳು:** ಮುಟ್ಟಿನ ನೈರ್ಮಲ್ಯ ನಿರ್ವಹಣೆಯಲ್ಲಿ ಸ್ಯಾನಿಟರಿ ನ್ಯಾಪ್ಕಿನ್ಗಳು ಮಹತ್ವದ ಪಾತ್ರ ನಿರ್ವಹಿಸುವ ಮತ್ತು ಅಗ್ಗದ ದರದಲ್ಲಿ ದೊರೆಯುವುದರ ಮಹತ್ವವನ್ನು ಚೆನ್ನಾಗಿ ಅರಿತುಕೊಂಡಿರುವ ಅಮೆಜಾನ್, ಭಾರತದಾದ್ಯಂತ ಆಯಕಟ್ಟಿನ ಸ್ಥಳಗಳಾದ ಹೈದರಾಬಾದ್, ಬೆಂಗಳೂರು, ಕೋಲ್ಕತ್ತಾ ಮತ್ತು ಚೆನ್ನೈ ಮಹಾನಗರಗಳಲ್ಲಿ ನಾಲ್ಕು ಅತ್ಯಾಧುನಿಕ ಸ್ಯಾನಿಟರಿ ನ್ಯಾಪ್ಕಿನ್ ತಯಾರಿಕಾ ಘಟಕಗಳನ್ನು ಸ್ಥಾಪಿಸಿದೆ. ಈ ಘಟಕಗಳು ಮಣ್ಣಿನಲ್ಲಿ ಸುಲಭವಾಗಿ ಕರಗುವ ಪ್ರತಿ ಗಂಟೆಗೆ 1,200 ಸ್ಯಾನಿಟರಿ ಪ್ಯಾಡ್ಗಳ ತಯಾರಿಕಾ ಸಾಮರ್ಥ್ಯ ಹೊಂದಿವೆ. ಈ ಉಪಕ್ರಮವು ಮುಟ್ಟಿನ ನೈರ್ಮಲ್ಯ ಉತ್ಪನ್ನಗಳು ಕೈಗೆಟುಕುವ ದರಗಳಲ್ಲಿ ಸುಲಭವಾಗಿ ದೊರೆಯುವುದನ್ನು ಖಚಿತಪಡಿಸುತ್ತದೆ. ಇದರ ಜೊತೆಗೆ ಪರಿಸರ ಸ್ನೇಹಿ ವಸ್ತುಗಳ ಬಳಕೆಯ ಮೂಲಕ ಮಹಿಳೆಯರಲ್ಲಿ ಪರಿಸರ ಪ್ರಜ್ಞೆಯನ್ನು ಉತ್ತೇಜಿಸುತ್ತದೆ.

**ತಯಾರಿಕೆ ಮೀರಿ: ಹಣಕಾಸು ಸ್ವಾತಂತ್ರ್ಯದ ಪಥ:** ಅಮೆಜಾನ್ನ ಸ್ಯಾನಿಟರಿ ನ್ಯಾಪ್ಕಿನ್ ತಯಾರಿಕಾ ಘಟಕಗಳು ಕೇವಲ ತಯಾರಿಕಾ ಸೌಲಭ್ಯಗಳಿಗಿಂತಲೂ ಹೆಚ್ಚು ಉಪಯುಕ್ತಕರವಾಗಿವೆ. ಗ್ರಾಮೀಣ ಸಮುದಾಯಗಳಲ್ಲಿ ಮಹಿಳಾ ಆರ್ಥಿಕ ಸಬಲೀಕರಣದ ಪ್ರಮುಖ ಮೂಲಗಳಾಗಿವೆ.

ಅಮೆಜಾನ್ ಇಂಡಿಯಾದ ಸಮುದಾಯ ಒಡನಾಟ ಮುಖ್ಯಸ್ಥೆ ಮನೀಶಾ ಪಾಟೀಲ್ ಅವರು ಮಾತನಾಡಿ, ಮಹಿಳೆಯರ ಸಬಲೀಕರಣಗೊಳಿಸಲು, ಮುಟ್ಟಿನ ನೈರ್ಮಲ್ಯವನ್ನು ಸುಧಾರಿಸಲು ಮತ್ತು ವಿನೂತನ ರೀತಿಯಲ್ಲಿನ ಸಮುದಾಯ ಒಡನಾಟ ಕಾರ್ಯಕ್ರಮಗಳ ಮೂಲಕ ಸುಸ್ಥಿರತೆ ಉತ್ತೇಜಿಸುವ ತನ್ನ ಉದ್ದೇಶಕ್ಕೆ ಅಮೆಜಾನ್ ಇಂಡಿಯಾ ಬದ್ಧವಾಗಿದೆ. ಈ ಉಪಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಮತ್ತು ಸುಸ್ಥಿರತೆ ಖಾತ್ರಿಪಡಿಸಲು ಅಮೆಜಾನ್ ಲಾಭದ ಉದ್ದೇಶವಿಲ್ಲದ ಸಂಘಸಂಸ್ಥೆಗಳ ಜೊತೆಗೆ ಸಹಕರಿಸಲಿದೆ. ಯೋಮಿನಿ, ಷಿ ಮತ್ತು ವುಯ್ ಮುಂತಾದ ಸಂಘ-ಸಂಸ್ಥೆಗಳು ಮಹಿಳೆಯರಿಗೆ ತರಬೇತಿ ನೀಡುವಲ್ಲಿ, ವ್ಯವಹಾರದ ಕುಶಾಗ್ರಮತಿ ಅಭಿವೃದ್ಧಿಪಡಿಸುವಲ್ಲಿ ಮತ್ತು ಈ ಯೋಜನೆಗಳ ದೀರ್ಘಾವಧಿಯ ಯಶಸ್ಸನ್ನು ಖಚಿತಪಡಿಸಿಕೊಳ್ಳುವಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸಲಿವೆ ಎಂದು ಹೇಳಿದ್ದಾರೆ.

# ಎಣ್ಣೆಯುಕ್ತ ತ್ವಚೆಗೆ ಟಿಪ್ಸ್

ಬ್ಯೂಟಿ ಟಿಪ್ಸ್



ಎಣ್ಣೆಯುಕ್ತ ಚರ್ಮ ಹೊಂದಿರುವವರು ತಮ್ಮ ಚರ್ಮದ ರಕ್ಷಣೆಯನ್ನು ಹೆಚ್ಚಾಗಿ ಮಾಡಬೇಕು. ಯಾಕೆಂದರೆ ಎಣ್ಣೆಯುಕ್ತ ಚರ್ಮದಲ್ಲಿ ಯಾವಾಗಲೂ ಎಣ್ಣೆಯಂಶ ಕಂಡುಬರುವುದರಿಂದ ಧೂಳು, ಕೊಳೆ ಅಂಟಿಕೊಳ್ಳುತ್ತದೆ. ಇದರಿಂದ ಮುಖದಲ್ಲಿ ಮೊಡವೆಗಳು, ಗುಳ್ಳೆಗಳು ಮೂಡುತ್ತವೆ. ಹಾಗಾಗಿ ಎಣ್ಣೆಯುಕ್ತ ತ್ವಚೆಯನ್ನು ಕಾಪಾಡಲು ಈ ಸಲಹೆಯನ್ನು ಪಾಲಿಸಿ.

ಎಣ್ಣೆಯುಕ್ತ ಚರ್ಮ ಹೊಂದಿರುವವರು ಕರಿದ ಆಹಾರಗಳಿಂದ ದೂರವಿರಿ. ವಿಟಮಿನ್ ಸಿ ಆಹಾರವನ್ನು ಹೆಚ್ಚಾಗಿ ಸೇವಿಸಿ. ಇದು ಮೊಡವೆಗಳ ಸಮಸ್ಯೆಯನ್ನು ನಿವಾರಿಸುತ್ತದೆ. ಹಾಗೇ ವಿಟಮಿನ್ ಇ ಯನ್ನು ಹೆಚ್ಚು ಸೇವಿಸಿ. ಇದು ಚರ್ಮದ ತೇವಾಂಶವನ್ನು ನಿಯಂತ್ರಿಸಲು ಸಹಕಾರಿಯಾಗಿದೆ.

ನೀವು ಚರ್ಮವನ್ನು ಹೈಡ್ರೇಟ್ ಮಾಡಿ. ಅದಕ್ಕಾಗಿ ಸಾಕಷ್ಟು ನೀರನ್ನು ಕುಡಿಯಿರಿ. ಇದರಿಂದ ಚರ್ಮ ಹೆಚ್ಚು ತೈಲ ಉತ್ಪತ್ತಿ ಮಾಡುವುದನ್ನು ನಿಲ್ಲಿಸುತ್ತದೆ.

ನೀವು ನಿದ್ರೆ ಮಾಡಿ ಎದ್ದಾಗ, ಮಲಗುವಾಗ ಮುಖವನ್ನು ವಾಶ್ ಮಾಡಿ. ಪ್ರತಿದಿನ 2 ಬಾರಿಯಾದರೂ ಮುಖವನ್ನು ತೊಳೆಯಿರಿ. ಆಗಾಗ ಎಣ್ಣೆಯುಕ್ತ ಚರ್ಮದ ರಕ್ಷಣೆಗಾಗಿ ಫೇಸ್ ಪ್ಯಾಕ್ ನ್ನು ಹಚ್ಚಿ. ಇದು ಎಣ್ಣೆಯಂಶವನ್ನು ಹೀರಿಕೊಂಡು ಚರ್ಮದ ಸಮಸ್ಯೆಯನ್ನು ದೂರ ಮಾಡುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ತಾಯಿಂದ ಅನುಕೂಲ, ಸ್ಥಿರಾಸ್ತಿ ಮತ್ತು ವಾಹನದಿಂದ ಯೋಗ ಫಲ, ಉತ್ತಮ ಹೆಸರು, ವ್ಯವಹಾರದಲ್ಲಿ ಅನುಕೂಲ, ಮಾಟ ಮಂತ್ರದ ಭೀತಿ.

**ವೃಷಭ:** ಉದ್ಯೋಗದಲ್ಲಿ ಒತ್ತಡ, ಅಧಿಕ ಕೋಪ ತಾಪಗಳು, ಅನಿರೀಕ್ಷಿತವಾಗಿ ಖರ್ಚು, ಮೋಜು ಮಸ್ತಿಗಳಿಂದ ಸಮಸ್ಯೆ.

**ಮಿಥುನ:** ಆರ್ಥಿಕವಾಗಿ ಅನುಕೂಲ, ಮಕ್ಕಳಿಂದ ಅನುಕೂಲ, ತಂದೆಯಿಂದ ಆರ್ಥಿಕವಾಗಿ ಸಹಾಯ, ದೂರ ಪ್ರಯಾಣದಿಂದ ಲಾಭ.

**ಕಟಕ:** ಅನಿರೀಕ್ಷಿತ ಯೋಗ ಫಲಗಳು, ಉದ್ಯೋಗದಲ್ಲಿ ಅನುಕೂಲ, ಸಂಗಾತಿಯೊಂದಿಗೆ ಮನಸ್ತಾಪ, ಲಾಭ.

**ಸಿಂಹ:** ಯಂತ್ರೋಪಕರಣಗಳಿಂದ ಅನುಕೂಲ, ದೂರ ಪ್ರಯಾಣದಿಂದ ಅನುಕೂಲ, ಅವಮಾನ ಮತ್ತು ಅಪವಾದಗಳು, ಮಹಿಳೆಯರೊಂದಿಗೆ ಮನಸ್ತಾಪ.

**ಕನ್ಯಾ:** ಸ್ನೇಹಿತರೊಂದಿಗೆ ಶತ್ರುತ್ವ, ಸಂಗಾತಿಯೊಂದಿಗೆ ಮನಸ್ತಾಪ, ಉದ್ಯೋಗ ಸ್ಥಳದಲ್ಲಿ ನಷ್ಟ, ಕೋರ್ಟ್ ಕೇಸ್‌ಗಳಲ್ಲಿ ಸೋಲು.

**ತುಲಾ:** ಮಕ್ಕಳಿಂದ ಸಹಾಯದ ನಿರೀಕ್ಷೆ, ದಾಂಪತ್ಯದಲ್ಲಿ ಕಲಹ, ಪಾಲುದಾರಿಕೆಗಳಲ್ಲಿ ಸಮಸ್ಯೆ, ಅನಿರೀಕ್ಷಿತ ಧನಾಗಮನ.

**ವೃಶ್ಚಿಕ:** ಸ್ವಯಂಕೃತ ಅಪರಾಧಗಳು, ಗಾಬರಿ ಮತ್ತು ಆತಂಕ, ಮಕ್ಕಳ ಭವಿಷ್ಯದ ಚಿಂತೆ, ವಿದ್ಯಾಭ್ಯಾಸದಲ್ಲಿ ಗೊಂದಲ.

**ಧನಸ್ಸು:** ಸಾಲದ ಸಹಾಯ, ಮಕ್ಕಳ ನಡವಳಿಕೆಯಿಂದ ಬೇಸರ, ಭಾವನಾತ್ಮಕವಾಗಿ ಸೋಲು, ಪ್ರಯಾಣದಲ್ಲಿ ಅನುಕೂಲ.

**ಮಕರ:** ಸ್ಥಿರಾಸ್ತಿ ವಿಚಾರವಾಗಿ ತಪ್ಪು ನಿರ್ಧಾರ, ಹೊಸ ವಸ್ತುಗಳ ಖರೀದಿಯಲ್ಲಿ ಮೋಸ, ಸಂಗಾತಿಯಿಂದ ಆರ್ಥಿಕ ನೆರವು, ಉದ್ಯೋಗ ಒತ್ತಡ ಮತ್ತು ಅವಮಾನ.

**ಕುಂಭ:** ಆರ್ಥಿಕ ಹಿನ್ನಡೆ, ಬಂಧು ಬಾಂಧವರಿಂದ ಮೋಸ, ಸಂಗಾತಿ ನಡವಳಿಕೆಯಲ್ಲಿ ವ್ಯತ್ಯಾಸ, ಉದ್ಯೋಗ ಸ್ಥಳದಲ್ಲಿ ಉತ್ತಮ ಬೆಳವಣಿಗೆ.

**ಮೀನ:** ಬಂಧು-ಬಾಂಧವರಿಂದ ಆರ್ಥಿಕ ಅನುಕೂಲ, ಸ್ವಂತ ವ್ಯಾಪಾರ ವ್ಯವಹಾರದಲ್ಲಿ ಲಾಭ, ಸ್ಪರ್ಧಾತ್ಮಕ ವಿಷಯಗಳಲ್ಲಿ ಜಯ, ಮಕ್ಕಳಿಂದ ನಿದ್ರಾಭಂಗ.

# ವಿಶ್ವ ಮಲ್ಟಿಪಲ್ ಸ್ಕ್ಲೆರೋಸಿಸ್ ದಿನ




ಮೇ 30 ರಂದು ಬರುವ ವಿಶ್ವ ಮಲ್ಟಿಪಲ್ ಸ್ಕ್ಲೆರೋಸಿಸ್ ದಿನವು ರೋಗದ ಕುರಿತು ಸಂವಾದವನ್ನು ಆಹ್ವಾನಿಸುತ್ತದೆ. ಮಲ್ಟಿಪಲ್ ಸ್ಕ್ಲೆರೋಸಿಸ್ ಬಹಳ ನಿಧಾನಗತಿಯ ಪ್ರಗತಿಯೊಂದಿಗೆ ಮರುಕಳಿಸುವಿಕೆ-ಪರಿಹರಿಸುವ ಕಾಯಿಲೆಯಾಗಿದೆ. MS ಅನ್ನು ಎನ್ಸೆಫಲೋಮೈಲಿಟಿಸ್ ಡಿಸೆಮಿನಾಟಾ ಎಂದೂ ಕರೆಯುತ್ತಾರೆ, ಮತ್ತು ಅದರ ರೋಗಲಕ್ಷಣಗಳು ಸ್ನಾಯು ದೌರ್ಬಲ್ಯ, ಎರಡು ದೃಷ್ಟಿ, ಮತ್ತು ಮಾನಸಿಕ/ದೈಹಿಕ ಸಮಸ್ಯೆಗಳನ್ನು ಒಳಗೊಂಡಿರುತ್ತದೆ. ರೋಗದ ಬಗ್ಗೆ ಸಂಶೋಧನಾ ಅಧ್ಯಯನಗಳ ಕೊರತೆಯಿಂದಾಗಿ, ಅದರ ಹಿಂದಿನ ನಿಖರವಾದ ಕಾರಣಗಳು ಸಾಮಾನ್ಯವಾಗಿ ತಿಳಿದಿಲ್ಲ. ಅನೇಕ ವಿಜ್ಞಾನಿಗಳು ರೋಗದ ಆಕ್ರಮಣ ಮತ್ತು ಜೀನ್ಗಳು ಮತ್ತು/ಅಥವಾ ನರ-ಕೋಶದ ಅಪಸಾಮಾನ್ಯ ಕ್ರಿಯೆಯ ನಡುವೆ ಸಂಪರ್ಕವಿರಬಹುದು ಎಂದು ನಂಬುತ್ತಾರೆ. ಇದಲ್ಲದೆ, ಇಲ್ಲಿಯವರೆಗೆ ಯಾವುದೇ ಶಾಶ್ವತ ಚಿಕಿತ್ಸೆ ಇಲ್ಲ. ಸರಿಯಾದ ಚಿಕಿತ್ಸೆಗಳು ಮತ್ತು ಔಷಧಿಗಳನ್ನು ಬಳಸಿಕೊಂಡು ರೋಗಲಕ್ಷಣಗಳನ್ನು ನಿವಾರಿಸಬಹುದು. ಮಲ್ಟಿಪಲ್ ಸ್ಕ್ಲೆರೋಸಿಸ್ ಇಂಟರ್ನ್ಯಾಷನಲ್ ಫೆಡರೇಶನ್ 2009 ರಲ್ಲಿ ಮೊದಲ ವಿಶ್ವ ಮಲ್ಟಿಪಲ್ ಸ್ಕ್ಲೆರೋಸಿಸ್ ದಿನವನ್ನು ಆಚರಿಸಿತು. MSIFಅನ್ನು ಅಧಿಕೃತವಾಗಿ 1967 ರಲ್ಲಿ ಅಂತರರಾಷ್ಟ್ರೀಯ ಸಂಸ್ಥೆಯಾಗಿ ಸ್ಥಾಪಿಸಲಾಯಿತು, ಇದು ಟರ್ಕಿ, ಸ್ಲೋವಾಕಿಯಾ, ಭಾರತ ಮತ್ತು U.S. ನಂತಹ ಅನೇಕ ದೇಶಗಳಿಗೆ ಸೇರಿದ ರಾಷ್ಟ್ರೀಯ MS ಸಂಸ್ಥೆಗಳೊಂದಿಗೆ ಸಂಯೋಜಿಸಲ್ಪಟ್ಟಿದೆ.

ಫೆಡರೇಶನ್ ಎಂಎಸ್ ಮತ್ತು ಅದಕ್ಕೆ ಸಂಬಂಧಿಸಿದ ವೈಜ್ಞಾನಿಕ ಸಂಶೋಧನೆಗಳಿಗೆ ಬೆಳಕನ್ನು ತರಲು ಗುರಿಯನ್ನು ಹೊಂದಿದೆ. ಈ ವರ್ಷದ ವಿಶ್ವ ಮಲ್ಟಿಪಲ್ ಸ್ಕ್ಲೆರೋಸಿಸ್ ದಿನದ ಥೀಮ್ 'ಸಂಪರ್ಕಿಸಿ.' ಈ ಥೀಮ್, 2020 ರಿಂದ 2022 ರವರೆಗೆ ಮುಂದುವರಿಯುತ್ತದೆ, ಉತ್ತಮ ಆರೈಕೆಗಾಗಿ ಪರಸ್ಪರ ಮತ್ತು ಸ್ವಯಂ ಸಂಪರ್ಕವನ್ನು ರೂಪಿಸುವ ಮೂಲಕ ಜಗತ್ತನ್ನು ಒಟ್ಟಿಗೆ ತರಲು ಕೇಂದ್ರೀಕರಿಸುತ್ತದೆ. MSIF ತಮ್ಮ ವಿಷಯಾಧಾರಿತ ಅಭಿಯಾನಗಳ ಮೂಲಕ MS ಬಗ್ಗೆ ಜಾಗೃತಿ ಮತ್ತು ಭರವಸೆಯನ್ನು ಹರಡಲು ಇಡೀ ಮೇ ತಿಂಗಳು ಮತ್ತು ಜೂನ್ ಆರಂಭದಲ್ಲಿ ಕಳೆಯುತ್ತದೆ. ಪ್ರತಿ ವರ್ಷ ಸುಮಾರು 2.8 ಮಿಲಿಯನ್ ಜನರು MS ನಿಂದ ಬಳಲುತ್ತಿದ್ದಾರೆ. ಈ ರೋಗವು ಬೆನ್ನುಹುರಿ ಮತ್ತು ಮೆದುಳಿನಲ್ಲಿರುವ ನರಮಂಡಲವನ್ನು ಆವರಿಸುವ ಹಾನಿಗೊಳಗಾದ ಮೈಲಿನ್ ಪೊರೆಗಳಿಗೆ ಸಂಬಂಧಿಸಿದೆ. ಹಾನಿಗೊಳಗಾದ ಮೈಲಿನ್ ಪೊರೆಗಳು ಗಾಯಗಳು ಅಥವಾ ಪ್ಲೇಕ್ಗಳಿಂದ ಮುಚ್ಚಲ್ಪಡುತ್ತವೆ ಮತ್ತು ಇಲ್ಲಿಯೇ ರೋಗವು ಅದರ ಹೆಸರನ್ನು ಪಡೆಯುತ್ತದೆ - 'ಮಲ್ಟಿಪಲ್ ಸ್ಕ್ಲೆರೋಸಿಸ್' ಎಂದರೆ 'ಮಲ್ಟಿಪಲ್ ಸ್ಕಾರ್ಸ್' ಎಂದರ್ಥ.

# ಇಸ್ರೇಲಿ ಕ್ಷಿಪಣಿಗೆ ಸಹಿ ಮಾಡಿ 'ಅವರನ್ನು ಮುಗಿಸಿ' ಎಂದ ನಿಕ್ಕಿ ಹ್ಯಾಲೆ!



**ಟೆಲ್ ಅವೀವ್:** ರಿಪಬ್ಲಿಕನ್ ಪಕ್ಷದ ಮಾಜಿ ಅಧ್ಯಕ್ಷೀಯ ಅಭ್ಯರ್ಥಿ ಮತ್ತು ದಕ್ಷಿಣ ಕೆರೊಲಿನಾದ ಮಾಜಿ ಗವರ್ನರ್ ನಿಕ್ಕಿ ಹ್ಯಾಲೆ ಅವರು ಇಸ್ರೇಲ್ ಭೇಟಿಯ ಸಂದರ್ಭದಲ್ಲಿ ಇಸ್ರೇಲ್ ನ ಫಿರಂಗಿ ಶೆಲ್ಗಳಿಗೆ ಅವರನ್ನು ಮುಗಿಸಿ! ಎಂಬ ಸಂದೇಶ ಬರೆದು ವಿವಾದ ಹುಟ್ಟುಹಾಕಿದ್ದಾರೆ.

ಗಾಝಾದಲ್ಲಿ ಇಸ್ರೇಲ್ ಮಿಲಿಟರಿಯಿಂದ ನಡೆಯುತ್ತಿರುವ ವಿನಾಶಕಾರಿ ಆಕ್ರಮಣದಿಂದಾಗಿ 15 ಸಾವಿರ ಮಕ್ಕಳು ಸೇರಿದಂತೆ 36 ಸಾವಿರ ಫೆಲೆಸ್ತೀನಿ ನಾಗರಿಕರು ಈಗಾಗಲೇ ಜೀವ ಕಳೆದುಕೊಂಡಿದ್ದಾರೆ. ಫೆಲೆಸ್ತೀನಿನ ರಫಾ ನಗರದಲ್ಲಿ ಸ್ಥಳಾಂತರಗೊಂಡಿರುವ ನಿರಾಶ್ರಿತರ ಶಿಬಿರದ ಮೇಲೆ ಇತ್ತೀಚೆಗೆ ಇಸ್ರೇಲ್ ಬಾಂಬ್ ದಾಳಿ ನಡೆಸಿದ್ದು ಜಾಗತಿಕ ಖಂಡನೆಗೆ ಕಾರಣವಾಯಿತು. ಈ ಮಧ್ಯೆ ಇಸ್ರೇಲ್ ಗೆ ಭೇಟಿ ನೀಡಿರುವ ನಿಕ್ಕಿ ಹ್ಯಾಲೆ ಇಸ್ರೇಲ್ಗೆ ತನ್ನ ಬೆಂಬಲವನ್ನು ವ್ಯಕ್ತಪಡಿಸಿದ್ದಾರೆ. ದಕ್ಷಿಣ ಗಾಝಾ ನಗರವಾದ ರಫಾದ ಮೇಲೆ ಇಸ್ರೇಲಿ ದಾಳಿಗೆ ಹಿನ್ನಡೆಯಾಗಲು ಶಸ್ತ್ರಾಸ್ತ್ರಗಳನ್ನು ತಾತ್ಕಾಲಿಕವಾಗಿ ತಡೆಹಿಡಿದಿದ್ದಕ್ಕಾಗಿ ಅಮೆರಿಕ ಅಧ್ಯಕ್ಷ ಜೋ ಬೈಡೆನ್ ಆಡಳಿತವನ್ನು ಅವರು ಟೀಕಿಸಿದ್ದಾರೆ. ಅಲ್ಲದೇ, ನೆತನ್ಯಾಹು ಅವರ ಬಂಧನವನ್ನು ಬಯಸುತ್ತಿರುವ ಮತ್ತು ಇಸ್ರೇಲ್ ವಿರುದ್ಧ ನರಮೇಧದ ಆರೋಪಗಳನ್ನು ಪರಿಗಣಿಸುತ್ತಿರುವ ಅಂತರರಾಷ್ಟ್ರೀಯ ಕ್ರಿಮಿನಲ್ ಕೋರ್ಟ್ ಮತ್ತು ಅಂತರರಾಷ್ಟ್ರೀಯ ನ್ಯಾಯಾಲಯವನ್ನು ನಿಕ್ಕಿ ಖಂಡಿಸಿದ್ದಾರೆ.

# ಯುರೋಪ್‌ನಾದ್ಯಂತ ದಡಾರ ಪ್ರಕರಣಗಳಲ್ಲಿ ಭಾರೀ ಏರಿಕೆ




**ಕೋಪನ್ಹೇಗನ್:** ಯುರೋಪ್‌ನಾದ್ಯಂತ ದಡಾರ ಸೋಂಕಿನ ಪ್ರಕರಣಗಳಲ್ಲಿ ಸತತ ಎರಡನೆ ವರ್ಷವೂ ಏರಿಕೆ ಕಂಡುಬಂದಿದ್ದು, ಶೀಘ್ರದಲ್ಲೇ 2023ರಲ್ಲಿ ದಾಖಲಾದ ದಡಾರದ ಪ್ರಕರಣಗಳ ಸಂಖ್ಯೆಯನ್ನು ಮೀರಲಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಮಂಗಳವಾರ ಎಚ್ಚರಿಕೆ ನೀಡಿದೆ.

ದಡಾರ ಸೋಂಕಿನ ವಿರುದ್ಧ ಲಸಿಕೀಕರಣ ಅಭಿಯಾನವನ್ನು ಉತ್ತೇಜಿಸುವಂತೆ ಅದು ಯುರೋಪ್ ನ ರಾಷ್ಟ್ರಗಳಿಗೆ ಕರೆ ನೀಡಿದೆ. ಈ ವರ್ಷದ ಮೊದಲ ಮೂರು ತಿಂಗಳುಗಳಲ್ಲಿಮಧ್ಯ ಏಶ್ಯ ಸೇರಿದಂತೆ ಯುರೋಪ್ ಖಂಡದ 53 ರಾಷ್ಟ್ರಗಳ ಪೈಕಿ 41 ದೇಶಗಳಲ್ಲಿ ಒಟ್ಟು 56,634 ದಡಾರ ಪ್ರಕರಣಗಳು ವರದಿಯಾಗಿದ್ದು ನಾಲ್ಕು ಮಂದಿ ಸೋಂಕಿಗೆ ಬಲಿಯಾಗಿದ್ದಾರೆ. 2023ರಲ್ಲಿ ವರದಿಯಾದ ದಡಾರ ಒಟ್ಟು ಪ್ರಕರಣಗಳ ಒಟ್ಟು ಸಂಖ್ಯೆಯು ಈ ವರ್ಷದ ಮೊದಲ ಐದು ತಿಂಗಳುಗಳಲ್ಲಿ ವರದಿಯಾದ ಪ್ರಕರಣಗಳ ಸಂಖ್ಯೆಗಿಂತ ಕೇವಲ ಐದು ಸಾವಿರದಷ್ಟು ಕಡಿಮೆಯೆಂದು ವಿಶ್ವಸಂಸ್ಥೆ ಹೇಳಿದೆ. 2022ರಲ್ಲಿ 941 ಪ್ರಕರಣಗಳಷ್ಟೇ ವರದಿಯಾಗಿದ್ದರೆ, ಈ ವರ್ಷ ಅದಕ್ಕಿಂತ 60 ಪಟ್ಟು ಅಧಿಕ ದಡಾರದ ಪ್ರಕರಣಗಳು ವರದಿಯಾಗಿವೆ ಎಂದು ವರದಿ ತಿಳಿಸಿದೆ.

ಯುರೋಪ್‌ನಾದ್ಯಂತ ಈ ವರ್ಷ ದಡಾರದ ಪ್ರಕರಣಗಳಲ್ಲಿ ಹೆಚ್ಚಳವಾಗುತ್ತಿದೆ. 2023ನೇ ಇಸವಿಯುದ್ದಕ್ಕೂ ವರದಿಯಾದ ಒಟ್ಟು ಪ್ರಕರಣಗಳ ಸಂಖ್ಯೆಯನ್ನು ಅವು ಮೀರಿಸಲಿದೆ'' ಎಂದು ವಿಶ್ವ ಆರೋಗ್ಯ ಸಂಸ್ಥೆಯು ಹೇಳಿಕೆಯೊಂದರಲ್ಲಿ ತಿಳಿಸಿದೆ.

# ಉಕ್ರೇನ್‌ಗೆ 123 ಕೋಟಿ ಸೇನಾ ನೆರವು ನೀಡಿದ ಸ್ವೀಡನ್ ಸರ್ಕಾರ



**ಕೋಪನ್ಹೆಗನ್:** ಉಕ್ರೇನ್‌ಗೆ 123 ಕೋಟಿ ಅಮೆರಿಕನ್ ಡಾಲರ್ ಮೊತ್ತದ ಸೇನಾ ನೆರವನ್ನು ನೀಡುವುದಾಗಿ ಸ್ವೀಡನ್ ಸರ್ಕಾರ ತಿಳಿಸಿದೆ. ಸ್ವೀಡನ್ ಇದುವರೆಗೆ ನೀಡಿರುವ ಸೇನಾ ನೆರವಿನ ಪ್ಯಾಕೇಜ್‌ಗಳಲ್ಲಿಯೇ ಇದು ಅತಿ ದೊಡ್ಡದು ಎಂದು ಅದು ಹೇಳಿಕೊಂಡಿದೆ. ಉಕ್ರೇನ್‌ಗೆ ಸದ್ಯಕ್ಕೆ ಅತ್ಯಗತ್ಯವಾಗಿರುವ ಸೇನಾ ಸಾಧನಗಳನ್ನು ನೆರವಿನ ಪ್ಯಾಕೇಜ್ ಒಳಗೊಂಡಿದೆ. ವಾಯುಪಡೆಯ ರಕ್ಷಣಾ ಸಾಧನಗಳು, ಮದ್ದು–ಫಿರಂಗಿಗಳು, ಸಶಸ್ತ್ರ ವಾಹನಗಳನ್ನು ಉಕ್ರೇನ್ಗೆ ಒದಗಿಸಲಾಗುವುದು ಎಂದು ಸ್ವೀಡನ್ನ ಉಪ ಪ್ರಧಾನಿ ಎಬ್ಬಾ ಬುಶ್ ತಿಳಿಸಿದ್ದಾರೆ. ಸ್ವೀಡಿಶ್ ನಿರ್ಮಿತ ಜೆಎಎಸ್ 39 ಗ್ರಿಪನ್ ಜೆಟ್‌ಗಳನ್ನು ಉಕ್ರೇನ್‌ಗೆ ಕಳುಹಿಸುವ ಸಾಧ್ಯತೆ ಇಲ್ಲ ಎನ್ನುವುದನ್ನು ಪುನರುಚ್ಚರಿಸಿದ ಸ್ವೀಡನ್ ರಕ್ಷಣಾ ಸಚಿವ ಪಾಲ್ ಜಾನ್ಸನ್, ಎಫ್–16 ಫೈಟರ್ ಜೆಟ್‌ಗಳನ್ನು ಪೂರೈಸುವ ಕುರಿತು ಆಸಕ್ತಿ ಇರುವುದಾಗಿ ಹೇಳಿದ್ದಾರೆ. ಕೆಲವು ದೇಶಗಳು ಈಗಾಗಲೇ ಎಫ್–16 ಫೈಟರ್ ಜೆಟ್ಗಳನ್ನು ಉಕ್ರೇನ್ಗೆ ಒದಗಿಸಲು ಮುಂದೆ ಬಂದಿವೆ. 30 ಎಫ್–16 ಜೆಟ್ಗಳನ್ನು ಉಕ್ರೇನ್ಗೆ ನೀಡುವುದಾಗಿ ಮಂಗಳವಾರ ಬೆಲ್ಜಿಯಂ ವಾಗ್ದಾನ ಮಾಡಿದೆ. ಮುಂದಿನ ಹಂತದಲ್ಲಿ ಗ್ರಿಪನ್ ಜೆಟ್ಗಳನ್ನು ಉಕ್ರೇನ್ಗೆ ಒದಗಿಸುವ ಕುರಿತು ಆಲೋಚಿಸುವುದಾಗಿ ಜಾನ್ಸನ್ ತಿಳಿಸಿದ್ದಾರೆ.

# ಕಾಲು ಕಟ್ಟಿ ಥಳಿಸಿದಲ್ಲದೇ ಬಲವಂತವಾಗಿ ಮಹಿಳೆಯ ಬಾಯಿಗೆ ಕೀಟನಾಶಕ ಸುರಿದ್ರು!

**ಲಕ್ನೋ:** ಪತಿ ಮತ್ತು ಮಾವ ಸೇರಿ ಮಹಿಳೆಯ ಕೈ ಕಾಲು ಕಟ್ಟಿ ಹಾಕಿ ಥಳಿಸಿದ್ದಲ್ಲದೇ ಆಕೆಯ ಬಾಯಿಗೆ ಕೀಟನಾಶಕವನ್ನು ಸುರಿದ ಅಮಾನವೀಯ ಘಟನೆಯೊಂದು ಉತ್ತರಪ್ರದೇಶದ ಹಾಪುರ ಜಿಲ್ಲೆಯಲ್ಲಿ ನಡೆದಿದೆ. ಪತಿ ಮತ್ತು ಮಾವ ಮಹಿಳೆಗೆ ಥಳಿಸಿದ್ದಲ್ಲದೆ, ಆಕೆಯನ್ನು ಕೊಲ್ಲುವ ಉದ್ದೇಶದಿಂದ ಬೆಳೆಗೆ ಬಳಸುವ ಕೀಟನಾಶಕವನ್ನು ಆಕೆಯ ಬಾಯಿಗೆ ಸುರಿದಿದ್ದಾರೆ. ಈ ವೇಳೆ ಸಹೋದರ ವಿರೋಧ ವ್ಯಕ್ತಪಡಿಸಿದಾಗ ಆರೋಪಿಗಳು ಆತನಿಗೂ ಥಳಿಸಿದ್ದಾರೆ. ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

**ಘಟನೆ ವಿವರ:** ಹಾಪುರ್ ಜಿಲ್ಲೆಯ ಗರ್ಮುಕ್ತೇಶ್ವರ ಪೊಲೀಸ್ ಠಾಣಾ ವ್ಯಾಪ್ತಿಯ ಬಗದ್‌ಪುರ ಗ್ರಾಮದ ನಿವಾಸಿ ಶೀಲಾ ಅವರು ಗಜ್ರೌಲಾ ಪೊಲೀಸ್ ಠಾಣಾ ವ್ಯಾಪ್ತಿಯ ಫಿರೋಜ್ ಪುರ ಗ್ರಾಮದ ಸುರೇಂದ್ರ ಎಂಬಾತನನ್ನು ವಿವಾಹವಾಗಿದ್ದರು. ಮಂಗಳವಾರ ರಾತ್ರಿ 8.30ರ ಸುಮಾರಿಗೆ ಪೋಷಕರಿಗೆ ಶೀಲಾಳ ಮೇಲೆ ನಡೆದ ಹಲ್ಲೆಯ ಬಗ್ಗೆ ಮಾಹಿತಿ ಲಭಿಸಿದೆ.ವಿಚಾರ ಗೊತ್ತಾಗುತ್ತಿದ್ದಂತೆಯೇ ಶೀಲಾಳ ಸಹೋದರ ಜಯಪ್ರಕಾಶ್ ತನ್ನ ಸ್ನೇಹಿತನ ಜೊತೆ ನೇರವಾಗಿ ಆಕೆಯ ಮನೆಗೆ ಬಂದರು. ಈ ವೇಳೆ ಸಹೋದರನ ಮುಂದೆಯೇ ಪತಿ ಮತ್ತು ಮಾವ ಸೇರಿ ಆಕೆಯ ಕೈಕಾಲು ಕಟ್ಟಿ ಥಳಿಸಿದ್ದಾರೆ. ಇದನ್ನು ಕಣ್ಣಾರೆ ಕಂಡ ಸಹೋದರ ತಡೆಯಲು ಪ್ರಯತ್ನಿಸಿದ್ದಾನೆ. ಈ ವೇಳೆ ಆತನ ಮೇಲೆಯೇ ಹಲ್ಲೆ ನಡೆಸಿದ್ದಾರೆ. ಅಲ್ಲದೇ ಸಹೋದರನ ಸಮ್ಮುಖದಲ್ಲೇಯೇ ಆರೋಪಿಗಳಿಬ್ಬರೂ ಬೆಳೆಗೆ ಬಳಸುವ ಕೀಟನಾಶಕವನ್ನು ಆಕೆಯ ಬಾಯಿಗೆ ಬಲವಂತವಾಗಿ ಸುರಿದಿದ್ದಾರೆ. ಪರಿಣಾಮ ಆಕೆಯ ಸ್ಥಿತಿ ಹದಗೆಟ್ಟಿದೆ. ಕೂಡಲೇ ಮಹಿಳೆಯನ್ನು ಸ್ಥಳೀಯ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಬಗ್ಗೆ ತನಿಖೆ ನಡೆಸಿ ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಭಾರಿ ಇನ್ಸ್‌ಪೆಕ್ಟರ್ ಹರೀಶ್ ವರ್ಧನ್ ಸಿಂಗ್ ತಿಳಿಸಿದ್ದಾರೆ.

# ತಮಿಳುನಾಡಿಗೆ ಕಾವೇರಿ ನೀರು ಬಿಡಿ: ಮುಕ್ಕೊಂಬು ಅಣೆಕಟ್ಟೆಯಲ್ಲಿ ರೈತರ ಪ್ರತಿಭಟನೆ

**ಚೆನ್ನೈ:** ಕಾವೇರಿ ನೀರನ್ನು ತಮಿಳುನಾಡಿಗೆ ಬಿಡುವಂತೆ ಆಗ್ರಹಿಸಿ ರೈತರು ತಿರುಚಿರಾಪಳ್ಳಿಯಲ್ಲಿ ಪ್ರತಿಭಟನೆ ನಡೆಸಿದ್ದಾರೆ.ತಮಿಳುನಾಡಿಗೆ ಕಾವೇರಿ ನೀರು ಬಿಡುವಂತೆ ಕೇಂದ್ರ ಮತ್ತು ಕರ್ನಾಟಕ ಸರ್ಕಾರಗಳಿಗೆ ಒತ್ತಾಯಿಸಿ ರೈತ ಅಯ್ಯಕಣ್ಣು ನೇತೃತ್ವದಲ್ಲಿ ರೈತರ ಗುಂಪು ಮುಕ್ಕೊಂಬು ಅಣೆಕಟ್ಟೆಯಲ್ಲಿ ಪ್ರತಿಭಟನೆ ನಡೆಸಿತು. ರೈತರ ಆದಾಯವನ್ನು ದ್ವಿಗುಣಗೊಳಿಸುವುದು ಮತ್ತು ಕನಿಷ್ಠ ಬೆಂಬಲ ಬೆಲೆಯನ್ನು ಖಾತರಿಪಡಿಸುವುದು ಮುಂತಾದ ಭರವಸೆಗಳನ್ನು ಈಡೇರಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಇದೇ ವೇಳೆ ಒತ್ತಾಯಿಸಿದರು.ತಮಿಳುನಾಡಿಗೆ 2.5 ಟಿಎಂಸಿ ನೀರು ಹರಿಸುವಂತೆ ಕರ್ನಾಟಕಕ್ಕೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ವಾರದ ಹಿಂದೆಯಷ್ಟೇ ಸೂಚನೆ ನೀಡಿತ್ತು. ಮೇ ತಿಂಗಳ ಭಾಗವಾಗಿ 2.5 ಟಿಎಂಸಿ ನೀರು ಹರಿಸಲು ಪ್ರಾಧಿಕಾರ ನಿರ್ದೇಶನ ನೀಡಿತ್ತು. ಈ ಹಿಂದೆ ಕಾವೇರಿ ನೀರು ನಿರ್ವಹಣಾ ಸಮಿತಿಯೂ 2.5 ಟಿಎಂಸಿ ನೀರು ಬಿಡಲು ಶಿಫಾರಸು ಮಾಡಿತ್ತು.



# ಕಾಂಗ್ರೆಸ್ ಜೊತೆಗಿನ ಮೈತ್ರಿ ಶಾಶ್ವತವಲ್ಲ

## ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಸ್ಪಷ್ಟನೆ



**ನವದೆಹಲಿ:** ಕಾಂಗ್ರೆಸ್ ಜೊತೆಗಿನ ನಮ್ಮ ಮೈತ್ರಿ ಶಾಶ್ವತವಲ್ಲ ಎಂದು ಎಎಪಿ ಮುಖಂಡ ಹಾಗೂ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ. ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ನಮ್ಮ ಹಾಗೂ ಕಾಂಗ್ರೆಸ್ ನಡುವೆ ನಡೆದಿರುವುದು ಶಾಶ್ವತದ ಮದುವೆಯಲ್ಲ. ಇದು ಅರೇಂಜ್ಡ್ ಅಥವಾ ಲವ್ ಮ್ಯಾರೇಜ್ ಅಲ್ಲ.ದೇಶವನ್ನು ಉಳಿಸಲು ಮತ್ತು ಬಿಜೆಪಿಯನ್ನು ಸೋಲಿಸಲು ಜೂನ್ 4 ರವರೆಗೆ ನಾವು ಒಟ್ಟಾಗಿ ಇರಲಿದ್ದೇವೆ. ಸದ್ಯಕ್ಕೆ ಬಿಜೆಪಿಯನ್ನು ಸೋಲಿಸುವುದು ಮತ್ತು ಬಿಜೆಪಿಯ ಸರ್ವಾಧಿಕಾರ ಮತ್ತು ಗೂಂಡಾಗಿರಿಯನ್ನು ಕೊನೆಗೊಳಿಸುವುದು ನಮ್ಮ ಗುರಿಯಾಗಿದೆ ಎಂದು ಹೇಳಿದ್ದಾರೆ. ಈ ಲೋಕಸಭೆ ಚುನಾವಣೆಯಲ್ಲಿ ಎಎಪಿಯು ರಾಷ್ಟ್ರ ರಾಜಧಾನಿ ನವದೆಹಲಿಯ 22 ಸ್ಥಾನಗಳಲ್ಲಿ ಕನಿಷ್ಠ 15 ಸ್ಥಾನಗಳನ್ನು ಗೆಲ್ಲಲಿದೆ. ದೇಶದಲ್ಲಿ ಇಂಡಿಯಾ ಮೈತ್ರಿಕೂಟ 300 ಸೀಟುಗಳನ್ನು ಗೆಲ್ಲಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಗಾಂಧಿ ಸಿನಿಮಾ ಬರುವವರೆಗೂ ಮಹಾತ್ಮ ಗಾಂಧೀಜಿ ಯಾರಂತ ಗೊತ್ತಿರಲಿಲ್ಲ - ಮೋದಿ



**ನವದೆಹಲಿ:** 1982ರಲ್ಲಿ ರಿಚರ್ಡ್ ಅಟೆನ್ಬರೋ ಅವರ 'ಗಾಂಧಿ' ಸಿನಿಮಾ ನಿರ್ಮಾಣವಾಗುವವರೆಗೂ ಜಗತ್ತಿಗೆ ಮಹಾತ್ಮ ಗಾಂಧಿ ಬಗ್ಗೆ ತಿಳಿದಿರಲಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಹಿಂದಿನ ಕಾಂಗ್ರೆಸ್ ನೇತೃತ್ವದ ಸರ್ಕಾರಗಳು ಮಹಾತ್ಮ ಗಾಂಧಿಗೆ ಅರ್ಹವಾದ ರೀತಿಯಲ್ಲಿ ಪ್ರಚಾರ ಮಾಡಲಿಲ್ಲ ಎಂದು ಮೋದಿ ಟೀಕಿಸಿದರು. ಸಂದರ್ಶನವೊಂದರಲ್ಲಿ ಮಾತನಾಡಿದ ಮೋದಿ, ಕಳೆದ 75 ವರ್ಷಗಳಲ್ಲಿ ಗಾಂಧಿಯವರ ಉನ್ನತ ಜಾಗತಿಕ ಖ್ಯಾತಿಯನ್ನು ಭದ್ರಪಡಿಸುವುದು ದೇಶದ ಕೆಲಸವಲ್ಲವೇ ಎಂದು ಪ್ರಶ್ನಿಸಿದರು.



ಮಹಾತ್ಮ ಗಾಂಧಿ ಒಬ್ಬ ಮಹಾನ್ ಚೇತನ. ಕಳೆದ 75 ವರ್ಷಗಳಲ್ಲಿ ಅವರಿಗೆ ಆ ಮಟ್ಟದ ಜಾಗತಿಕ ಮನ್ನಣೆಯನ್ನು ಪಡೆಯುವುದು ನಮ್ಮ ಜವಾಬ್ದಾರಿಯಲ್ಲವೇ ಯಾರಿಗೂ ತಿಳಿದಿರಲಿಲ್ಲ, ದಯವಿಟ್ಟು ಈ ಬಗ್ಗೆ ನನ್ನನ್ನು ಕ್ಷಮಿಸಿ. ಮೊದಲ ಬಾರಿಗೆ, ಗಾಂಧಿ ಚಲನಚಿತ್ರವನ್ನು (1982) ಮಾಡಿದಾಗ, ಅವರು ಯಾರಾಗಿರಬಹುದು ಎಂಬ ಕುತೂಹಲ ಜಗತ್ತಿಗೆ ಇತ್ತು. ನಾವು ಅಗತ್ಯವಾದದ್ದನ್ನು ಮಾಡಲಿಲ್ಲ? ಮಾರ್ಟಿನ್ ಲೂಥರ್ ಕಿಂಗ್, ನೆಲ್ಸನ್ ಮಂಡೇಲಾ ಅವರನ್ನು ಜಗತ್ತು ತಿಳಿದಿದ್ದರೆ, ಗಾಂಧಿ ಅವರಿಗಿಂತ ಕಡಿಮೆಯಿಲ್ಲ ಮತ್ತು ನೀವು ಅದನ್ನು ಒಪ್ಪಿಕೊಳ್ಳಬೇಕು. ಗಾಂಧಿ ಮತ್ತು ಅವರ ಮೂಲಕ ಭಾರತವನ್ನು ಗುರುತಿಸಬೇಕಾಗಿತ್ತು ಎಂದು ವಿಶ್ವದಾದ್ಯಂತ ಪ್ರಯಾಣಿಸಿದ ನಂತರ ನಾನು ಇದನ್ನು ಹೇಳುತ್ತಿದ್ದೇನೆ '' ಎಂದು ಅವರು ಭಾರತದ ಸಂಸ್ಕೃತಿ ಮತ್ತು ಮೌಲ್ಯಗಳ ಬಗ್ಗೆ ಪ್ರತಿಪಕ್ಷಗಳ ತಿಳುವಳಿಕೆಯ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದರು.

# ಟೈಟಾನಿಕ್ ದುರಂತದ ಸ್ಥಳಕ್ಕೆ ಜಲಾಂತರ್ಗಾಮಿಯಲ್ಲಿ ತೆರಳಲಿರುವ ಅಮೆರಿಕದ ಕೋಟ್ಯಧಿಪತಿ ಲ್ಯಾರಿ ಕಾರ್ನರ್

**ನ್ಯೂಯಾರ್ಕ್:** ಟೈಟಾನಿಕ್ ಹಡಗು ದುರಂತ ಸಂಭವಿಸಿದ್ದ ಸ್ಥಳದ ವೀಕ್ಷಣೆಗೆ ತೆರಳಿದ್ದ ಟೈಟನ್ ಜಲಾಂತರ್ಗಾಮಿ ಸ್ಫೋಟಗೊಂಡ ಘಟನೆ ನಡೆದು 11 ತಿಂಗಳಾಗಿದೆ. ಈ ಘಟನೆಯಲ್ಲಿ ಓಶಿಯನ್ ಗೇಟ್ ಸಿಇಒ ಸ್ಟಾಕ್ಟನ್ ರಶ್ ಸೇರಿದಂತೆ ಒಟ್ಟು ಐದು ಮಂದಿ ಮೃತಪಟ್ಟಿದ್ದರು. ಈ ನಡುವೆ, ಇಬ್ಬರು ಪ್ರಯಾಣಿಕರನ್ನು ಹೊಂದಿರುವ ಜಲಾಂತರ್ಗಾಮಿ ನೌಕೆಯ ಪಯಣದ ಮೂಲಕ ಟೈಟಾನಿಕ್ ದುರಂತ ಸ್ಥಳದ ತಳವನ್ನು ಸುರಕ್ಷಿತವಾಗಿ ತಲುಪಲು ಸಾಧ್ಯ ಎಂದು ನಿರೂಪಿಸಲು ಓಹಿಯೊ ರಿಯಲ್ ಎಸ್ಟೇಟ್ ಹೂಡಿಕೆದಾರ ಹಾಗೂ ಕೋಟ್ಯಧಿಪತಿ ಲ್ಯಾರಿ ಕಾರ್ನರ್ ಮುಂದಾಗಿದ್ದಾರೆ.



ಈ ಕುರಿತು The Wall Street Journal ಸುದ್ದಿ ಸಂಸ್ಥೆಗೆ ನೀಡಿರುವ ಸಂದರ್ಶನದಲ್ಲಿ ಮಾತನಾಡಿರುವ ಲ್ಯಾರಿ ಕಾರ್ನರ್, ನಾನು ಹಾಗೂ ಟೈಟನ್ ಜಲಾಂತರ್ಗಾಮಿ ಸಂಸ್ಥೆಯ ಸಹ ಸಂಸ್ಥಾಪಕ ಪ್ಯಾಟ್ರಿಕ್ ಲಾಹೆ ಇಬ್ಬರೂ ಒಟ್ಟಾಗಿ ಟೈಟಾನಿಕ್ ಹಡಗು ಅವಶೇಷಗಳಿರುವ 12,400 ಅಡಿಯ ಆಳಕ್ಕೆ ಜಲಾಂತರ್ಗಾಮಿಯಲ್ಲಿ ಪಯಣ ಬೆಳೆಸಲಿದ್ದೇವೆ ಎಂದು ಹೇಳಿದ್ದಾರೆ.

ಸಾಗರವು ಅತ್ಯಂತ ಶಕ್ತಿಯುತವಾಗಿದ್ದು, ಅದರೊಳಗೆ ನೀವು ಸರಿಯಾದ ಮಾರ್ಗದಲ್ಲಿ ಸಂಚರಿಸಿದರೆ, ಅದು ವಿಸ್ಮಯಕಾರಿ, ಚೇತೋಹಾರಿ ಹಾಗೂ ನಿಜಕ್ಕೂ ಜೀವನದ ದಿಕ್ಕನ್ನು ಬದಲಿಸುವ ಪಯಣವಾಗಲಿದೆ ಎಂಬುದನ್ನು ನಾನು ಇಡೀ ಜಗತ್ತಿಗೆ ತೋರಿಸಲು ಬಯಸಿದ್ದೇನೆ ಎಂದು ಲ್ಯಾರಿ ಕಾರ್ನರ್ ಹೇಳಿಕೊಂಡಿದ್ದಾರೆ.

# ಪಾಕಿಸ್ತಾನದಲ್ಲಿ ಏರಿದ ಬಿಸಿಲು

**ಇಸ್ಲಾಮಾಬಾದ್:** ಪಾಕಿಸ್ಥಾನದಲ್ಲಿ ಬಿಸಿಲ ಝಳ ಭಾರೀ ಪ್ರಮಾಣದಲ್ಲಿ ಏರಿಕೆಯಾಗಿದೆ. ಸಿಂಧ್ ಪ್ರಾಂತದ ಮೊಹೆಂಜೋದಾರೋದಲ್ಲಿ 52.2 ಡಿಗ್ರಿ ಸೆ. ತಾಪಮಾನ ದಾಖಲಾಗಿದೆ. ಪಾಕಿಸ್ಥಾನದಲ್ಲಿ ಆರ್ಥಿಕ ಸಂಕಷ್ಟ ಉಂಟಾಗಿರುವಂತೆಯೇ ಬಿಸಿಲ ಝಳವೂ ಏರಿಕೆಯಾಗಿ ಜನ ಜೀವನ ಅಸ್ತವ್ಯಸ್ತವಾಗಿದೆ ಎಂದು ಪಾಕಿಸ್ಥಾನದ ಹವಾಮಾನ ಇಲಾಖೆ ತಿಳಿಸಿದೆ. 2017 ರಲ್ಲಿ 54 ಡಿ.ಸೆ ತಲುಪುವ ಮೂಲಕ ಪಾಕ್ನಲ್ಲಿ ಗರಿಷ್ಠ ತಾಪಮಾನ ದಾಖಲಾಗಿತ್ತು. ಕಳೆದ ವರ್ಷವಷ್ಟೇ ಅಲ್ಲಿ ಭಾರೀ ಪ್ರಮಾಣದ ಪ್ರವಾಹದಿಂದ ಸಾವು –ನೋವು ಉಂಟಾಗಿತ್ತು. ಇನ್ನೊಂದೆಡೆ, ಭಾರತದಲ್ಲಿ ಬಿಸಿಲ ಪ್ರಕೋಪ ಮುಂದುವರಿದಿದ್ದು, ಹಿಮಾಚಲ ಪ್ರದೇಶದ ಉನಾದಲ್ಲಿ ತಾಪಮಾನ 45 ಡಿ.ಸೆ ತಲುಪಿದ ಹಿನ್ನೆಲೆಯಲ್ಲಿ ಎಲ್ಲ ಶಾಲೆಗಳನ್ನು ಮೇ31ರ ವರೆಗೆ ಮುಚ್ಚುವುದಾಗಿ ಜಿಲ್ಲಾಡಳಿತ ತಿಳಿಸಿದೆ.

# 30 ಮಿಲಿಯನ್ ಜನರನ್ನು ತಲುಪಿದ 'ಆಲ್ ಐಸ್ ಆನ್ ರಫಾ' ಪೋಸ್ಟ್!




**ನವದೆಹಲಿ:** ಹಲವಾರು ಮಂದಿಯ ಇನ್ ಸ್ಟಾಗ್ರಾಮ್ ಖಾತೆಗಳಲ್ಲಿ ಮಂಗಳವಾರ 'ಆಲ್ ಐಸ್ ಆನ್ ರಫಾ' ಎಂಬ ಶೀರ್ಷಿಕೆಯೊಂದಿಗೆ ಚಿತ್ರ ಕಾಣಿಸಿಕೊಂಡಿದೆ. ಸೋಶಿಯಲ್ ಮೀಡಿಯಾ ಬಳಕೆದಾರರು ಎಐ ರಚಿತವಾದ ಚಿತ್ರವನ್ನು ಪೋಸ್ಟ್ ಮಾಡಿದ್ದು, ಹಲವಾರು ಟೆಂಟ್ ಮನೆಗಳನ್ನು ಚಿತ್ರದಲ್ಲಿ ಕಾಣಬಹುದಾಗಿದೆ. ಆಲ್ ಐಸ್ ಆನ್ ರಫಾ ಚಿತ್ರವು ಗಾಝಾದ ದಕ್ಷಿಣದಲ್ಲಿರುವ ರಾಫಾ ನಗರದ ನಿರಾಶ್ರಿತರ ಶಿಬಿರದಲ್ಲಿರುವ ಡೇರೆಗಳನ್ನು ತೋರಿಸಿದೆ. ಅಲ್ಲಿ ಇಸ್ರೇಲ್ ನಿಂದ ನಡೆಸಿದ ದಾಳಿಯ ಅನಂತರ ಅನೇಕ ಪ್ಯಾಲೇಸ್ಟಿನಿಯರು ಇಲ್ಲಿಗೆ ಸ್ಥಳಾಂತರಗೊಂಡಿದ್ದಾರೆ. ಇಸ್ರೇಲ್ ದಾಳಿಯನ್ನು ಖಂಡಿಸಿ ಪ್ಯಾಲೆಸ್ಟೈನ್ ಗೆ ಬೆಂಬಲ ಸೂಚಿಸಿ ಅನೇಕರು ಇನ್ ಸ್ಟಾಗ್ರಾಮ್ ನಲ್ಲಿ 'ಆಲ್ ಐಸ್ ಆನ್ ರಫಾ' ಘೋಷಣೆಯೊಂದಿಗೆ ಹಂಚಿಕೊಂಡಿದ್ದಾರೆ. ಇದನ್ನು ಇನ್ ಸ್ಟಾಗ್ರಾಮ್ ನಲ್ಲಿ ಹಂಚಿಕೊಂಡಿರುವವರ ಸಂಖ್ಯೆ 30 ಮಿಲಿಯನ್ ದಾಟಿದೆ. ಪ್ಯಾಲೇಸ್ಟಿನಿಯನ್ನರ ವಿರುದ್ಧದ ದಾಳಿಯನ್ನು ಖಂಡಿಸಿ ಮತ್ತು ಕದನ ವಿರಾಮಕ್ಕೆ ಒತ್ತಾಯಿಸಲು ಇದು ಸಾಮಾಜಿಕ ಜಾಲತಾಣದ ಮೂಲಕ ಜನರನ್ನು ಒಗ್ಗೂಡಿಸುತ್ತಿದೆ. ವರದಿಗಳ ಪ್ರಕಾರ ಡಬ್ಲ್ಯು ಹೆಚ್ ಒ ಪ್ರತಿನಿಧಿ ರಿಚರ್ಡ್ ಪೀಪರ್ಕಾರ್ನ್ ಅವರು ಫೆಬ್ರವರಿಯಲ್ಲಿ ಮೊದಲು ಈ ಘೋಷಣೆಯನ್ನು ಮಾಡಿದರು. ಡೇರೆ ಶಿಬಿರಗಳಿಂದ ತುಂಬಿದ ಪ್ರದೇಶವನ್ನು ಚಿತ್ರದಲ್ಲಿ ಕಾಣಬಹುದು. ಇದು ಇತ್ತೀಚಿನದು. ಎಲ್ಲರ ಗಮನ ಸೆಳೆಯಲು ಇದು ಅವರ ಪ್ರಯತ್ನ. ಇಸ್ರೇಲ್ ದಾಳಿಯಿಂದ ರಫಾದಲ್ಲಿ ಕನಿಷ್ಠ 45 ನಾಗರಿಕರು ಮೃತಪಟ್ಟಿದ್ದಾರೆ ಎಂದು ಹಲವರು ನೆಟ್ಟಿಗರು ಕಾಮೆಂಟ್ ನಲ್ಲಿ ಹೇಳಿದ್ದಾರೆ.

# ಮಿಲಿಟರಿ ವಿಮಾನ ಪತನ

**ಅಲ್ಬುಕರ್ಕ್:** ನ್ಯೂ ಮೆಕ್ಸಿಕೋದ ಅಲ್ಬುಕರ್ಕ್ನ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಅಮೆರಿಕದ ಮಿಲಿಟರಿ ವಿಮಾನ ಪತನಗೊಂಡು ಪೈಲೆಟ್ ಗಾಯಗೊಂಡಿದ್ದಾರೆ. ಅಪಘಾತಕ್ಕೀಡಾದ ನಂತರ ವಿಮಾನದಲ್ಲಿ ಏಕೈಕ ಪೈಲಟ್ ಇದ್ದರು ಅವರು ಹೊರಗೆ ಜಿಗಿದು ಪಾರಾಗಿದ್ದಾರೆ, ಗಂಭೀರವಾದ ಸುಟ್ಟ ಗಾಯಗಳೊಂದಿಗೆ ಆಸ್ಪತ್ರೆಗೆ ಕರೆದೊಯ್ಯಲಾಯಿತು ಎಂದು ಅಲ್ಬುಕರ್ಕ್ನ ಅಗ್ನಿಶಾಮಕ ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ. ಅಲ್ಬುಕರ್ಕ್ನ ದಕ್ಷಿಣದ ತುದಿಯಲ್ಲಿ 377ನೇ ಏರ್ ಬೇಸ್ ವಿಂಗ್ ಸೇನಾ ನೆಲೆಯಾಗಿದ್ದು ಅಲ್ಲಿನ ವಿಮಾನವೇ ಅಪಘಾತಕ್ಕೀಡಾಗಿದೆ ಎಂದು ತಿಳಿದುಬಂದಿದೆ. ವಿಮಾನ ನಿಲ್ದಾಣದ ರಸ್ತೆಯಲ್ಲಿ ಅಪಘಾತ ವಿಮಾನ ತುಂಡು ಕಂಡಿತು ಎಂದು ಅಮೆರಿಕ ಮಿಲಿಟರಿ ಅಧಿಕಾರಿ ತಿಳಿಸಿದ್ದಾರೆ. ವಿಮಾನ ನಿಲ್ದಾಣದ ದಕ್ಷಿಣ ಭಾಗದಲ್ಲಿ ಪತನ ಸಂಭವಿಸಿದೆ ಎಂದು ವಕ್ತಾರ ಡಯಾನಾ ಲೋಪೆಜ್ ಹೇಳಿದ್ದಾರೆ. ಹತ್ತಿರದ ಕಿಟ್ಲ್ಯಾಂಡ್ ಏರ್ ಫೋರ್ಸ್ ಬೇಸ್ ಅಪಘಾತದ ತನಿಖೆಯನ್ನು ಮುನ್ನಡೆಸುತ್ತಿದೆ ಎಂದು ಅವರು ಹೇಳಿದರು.



# ಕಸ ತುಂಬಿಸಿ ದಕ್ಷಿಣ ಕೊರಿಯಾಗೆ ರವಾನಿಸಿದ ಉತ್ತರ ಕೊರಿಯಾ

**ಸಿಯೋಲ್:** ಕಿರುಕುಳ ನೀಡುವ ಉದ್ದೇಶದಿಂದ ಉತ್ತರ ಕೊರಿಯಾ ಬಲೂನುಗಳಲ್ಲಿ ಹೊಲಸು, ಕಸ ಕಡ್ಡಿಗಳನ್ನು ತುಂಬಿಸಿ ದಕ್ಷಿಣ ಕೊರಿಯಾಕ್ಕೆ ಹಾರಿ ಬಿಟ್ಟಿವೆ.

ದಕ್ಷಿಣ ಕೊರಿಯಾದ 8 ಪ್ರಾಂತ್ಯಗಳಲ್ಲಿ ಸುಮಾರು 260 ಬಲೂನ್ ಗಳು ಪತ್ತೆಯಾಗಿವೆ. ರಾಜಧಾನಿ ಸಿಯೋಲ್ ಮತ್ತು ದೇಶದ ಆಗ್ನೇಯ ಪ್ರಾಂತ್ಯದ ಜಿಯೊಂಗ್ಸಾಂಗ್ನಲ್ಲಿಯೂ ಬಲೂನ್‌ಗಳು ಬಿದ್ದಿವೆ.

ದಕ್ಷಿಣ ಕೊರಿಯಾದ ಅಧಿಕಾರಿಗಳು ಮನೆಯೊಳಗೆ ಇರುವಂತೆ ಜನರಿಗೆ ಸಲಹೆ ನೀಡಿದ್ದಾರೆ. ಅಲ್ಲದೇ ಬಲೂನ್ಗಳ ಹತ್ತಿರ ಹೋಗಬೇಡಿ ಹಾಗೂ ಅವುಗಳನ್ನು ಮುಟ್ಟಬೇಡಿ ಎಂಬುದಾಗಿ ಸೂಚನೆ ನೀಡಿದ್ದಾರೆ.

ಬಲೂನ್‌ಗಳೊಂದಿಗೆ ಬಂದಿರುವ ಕಸದಲ್ಲಿ ಪ್ಲಾಸ್ಟಿಕ್ ಬಾಟ್ಲಿಗಳು, ಹಾಳಾದ ಶೂಗಳ ಭಾಗಗಳು ಮತ್ತು ಮಣ್ಣು ಸೇರಿವೆ ಎಂದು ದಕ್ಷಿಣ ಕೊರಿಯಾದ ಮಿಲಿಟರಿಯ ಜಂಟಿ ಮುಖ್ಯಸ್ಥರು ತಿಳಿಸಿದ್ದಾರೆ.

ಉತ್ತರ ಕೊರಿಯಾದ ಈ ಕ್ರಮದಿಂದ ಅಂತಾರಾಷ್ಟ್ರೀಯ ಕಾನೂನುಗಳ ಉಲ್ಲಂಘನೆಯಾಗಿದೆ. ಇದೊಂದು ಬೆದರಿಕೆಯಾಗಿದ್ದು, ಇಂತಹ ಅಮಾನವೀಯ ಕ್ರಮಗಳನ್ನು ಕೂಡಲೇ ನಿಲ್ಲಿಸುವಂತೆ ದಕ್ಷಿಣ ಕೊರಿಯಾದ ಸೇನೆಯು ಉತ್ತರ ಕೊರಿಯಾಕ್ಕೆ ಎಚ್ಚರಿಕೆ ನೀಡಿದೆ.

ಬಲೂನ್‌ಗಳನ್ನು ಕಂಡ ದಕ್ಷಿಣ ಕೊರಿಯಾದ ಜನರು ಅದರ ವೀಡಿಯೋ ಹಾಗೂ ಫೋಟೋಗಳನ್ನು ತಮ್ಮ ಮೊಬೈಲ್‌ನಲ್ಲಿ ಸೆರೆಹಿಡಿದು ಅದನ್ನು ಸಾಮಾಜಿಕ ಜಾಲತಾಣಗಳಲ್ಲಿ ಶೇರ್ ಮಾಡಿಕೊಂಡಿದ್ದಾರೆ.



# ಟೆಕ್ಸಾಸ್ ವಿಮಾನ ನಿಲ್ದಾಣದಲ್ಲಿ ಭಾರಿ ಬಿರುಗಾಳಿಗೆ ಚಲಿಸಿದ ವಿಮಾನ

**ಟೆಕ್ಸಾಸ್:** ಬಿರುಗಾಳಿ ಪೀಡಿತ ಟೆಕ್ಸಾಸ್ ನಲ್ಲಿನ ಡಲ್ಲಾಸ್ ಫೋರ್ಟ್ ವರ್ತ್ ವಿಮಾನ ನಿಲ್ದಾಣದಲ್ಲಿ ಬೀಸಿದ ಭಾರಿ ಬಿರುಗಾಳಿಯ ತೀವ್ರತೆಗೆ ಅಮೆರಿಕನ್ ಏರ್ ಲೈನ್ಸ್ ವಿಮಾನವೊಂದು ನಿಂತಲ್ಲಿಂದಲೇ ಮುಂದಕ್ಕೆ ಚಲಿಸಿರುವ ಘಟನೆ ವರದಿಯಾಗಿದೆ. ಸುಮಾರು 90,000 ಪೌಂಡ್ ತೂಕದ ಬೋಯಿಂಗ್ ವಿಮಾನವು ಬಿರುಗಾಳಿಯ ತೀವ್ರತೆಗೆ ಮುಂದಕ್ಕೆ ಚಲಿಸಿದ್ದು, ಸರಕು ತುಂಬುವ ಏಣಿಯಿಂದ ಕಳಚಿಕೊಂಡಿದೆ ಎಂದು ಹೇಳಲಾಗಿದೆ.

ಈ ಘಟನೆಯ ವಿಡಿಯೊ ವೈರಲ್ ಆಗಿದೆ.

ಟೆಕ್ಸಾಸ್ ವಿಮಾನ ನಿಲ್ದಾಣದ ಪ್ರದೇಶದಲ್ಲಿ ಬೀಸಿದ ಭಾರಿ ಬಿರುಗಾಳಿಯ ಕಾರಣಕ್ಕೆ ವಿಮಾನವು ಸರಕು ತುಂಬುವ ಏಣಿಯಿಂದ ಕಳಚಿಕೊಂಡು ಮುಂದಕ್ಕೆ ಚಲಿಸಿರುವುದು ವಿಡಿಯೊದಲ್ಲಿ ಸೆರೆಯಾಗಿದೆ. ವಿಮಾನದ ಪಕ್ಕ ಸರಂಜಾಮು ಟ್ರಕ್ ಕೂಡಾ ನಿಂತಿರುವುದು ವಿಡಿಯೊದಲ್ಲಿ ಕಂಡು ಬಂದಿದೆ. ಹೀಗಿದ್ದೂ, ವಿಮಾನವು ಟ್ರಕ್ ಗೆ ಡಿಕ್ಕಿ ಹೊಡೆದಿಲ್ಲ.

ಅಮೆರಿಕನ್ ಏರ್ ಲೈನ್ಸ್ ಪ್ರಕಾರ, ಗಂಟೆಗೆ 80 ಮೈಲಿ ವೇಗದಲ್ಲಿ ಬೀಸುತ್ತಿರುವ ಬಿರುಗಾಳಿಯಿಂದ ತೊಂದರೆಗೊಳಗಾಗಿರುವ ವಿಮಾನಗಳ ಪೈಕಿ ಈ ವಿಮಾನವೂ ಒಂದಾಗಿದೆ. ಈ ಬಿರುಗಾಳಿಯ ತೀವ್ರತೆಯಿಂದಾಗಿ ವಿಮಾನ ನಿಲ್ದಾಣದ ಆವರಣದಲ್ಲಿನ ಬೃಹತ್ ವಾಣಿಜ್ಯ ಗೋದಾಮು ಕೂಡಾ ಹಾನಿಗೊಳಗಾಗಿದೆ ಎಂದು ವರದಿಯಾಗಿದೆ.

ಭಾರಿ ಬಿರುಗಾಳಿಯ ಕಾರಣಕ್ಕೆ ಕನಿಷ್ಠ ಓರ್ವ ವ್ಯಕ್ತಿ ಮೃತಪಟ್ಟಿದ್ದು, ಆರು ಲಕ್ಷ ನಿವಾಸಿಗಳನ್ನು ಹೊಂದಿರುವ ಟೆಕ್ಸಾಸ್ ನಲ್ಲಿ ಮಂಗಳವಾರ ರಾತ್ರಿ ವಿದ್ಯುತ್ ಕಡಿತವುಂಟಾಗಿದೆ ಎಂದು ಅಟಿಓ ಸುದ್ದಿ ಸಂಸ್ಥೆ ವರದಿ ಮಾಡಿದೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಮಯ ಕೂಡಿ ಬರಲಿ ಗುಡ್ ನ್ಯೂಸ್ ಕೊಟ್ಟ ರಾಧಿಕಾ



ಮದುವೆ ನಂತರ ಸಿನಿಮಾ ರಂಗದಿಂದಲೇ ದೂರವಾಗಿದ್ದಾರೆ ನಟಿ ರಾಧಿಕಾ ಪಂಡಿತ್. ಕನ್ನಡ ಸಿನಿಮಾ ರಂಗದಲ್ಲಿ ಬಹುಬೇಡಿಕೆ ಇರುವಾಗಲೇ ಮದುವೆ, ಸಂಸಾರ, ಮಕ್ಕಳು ಕಾರಣದಿಂದಾಗಿ ಮತ್ತೆ ಚಿತ್ರಗಳನ್ನು ಒಪ್ಪಿಕೊಂಡಿಲ್ಲ. ರಾಧಿಕಾ ಪಂಡಿತ್ ಮತ್ತು ಸಿನಿಮಾ ರಂಗಕ್ಕೆ ಬರಬೇಕು. ಅಭಿಮಾನಿಗಳನ್ನು ರಂಜಿಸಬೇಕು ಅನ್ನುವುದು ಅಸಂಖ್ಯಾತ ಅಭಿಮಾನಿಗಳ ಮನವಿ ಆಗಿತ್ತು.

ಹೌದು, ಮತ್ತೆ ರಾಧಿಕಾ ಅವರನ್ನು ಸ್ಕ್ರೀನ್ ಮೇಲೆ ನೋಡಬೇಕು ಎನ್ನುವುದು ಅವರ ಫ್ಯಾನ್ಸ್ ಬೇಡಿಕೆಯಾಗಿತ್ತು. ಅದಕ್ಕೆ ಈಗ ರಾಧಿಕಾ ಸ್ಪಂದಿಸಿದ್ದಾರೆ. ಅಭಿಮಾನಿಯೊಬ್ಬ ಕೇಳಲಾದ ಪ್ರಶ್ನೆಗೆ ಉತ್ತರಿಸಿರುವ ರಾಧಿಕಾ, ಸಮಯ ಕೂಡಿ ಬರಲಿ ಸಿನಿಮಾ ರಂಗಕ್ಕೆ ಮತ್ತೆ ಬರುತ್ತೇನೆ ಅಂದಿದ್ದಾರೆ. ಯಶ್ ಮತ್ತು ರಾಧಿಕಾ ಅಪರೂಪದ ಜೋಡಿ. ಸಿನಿಮಾ ಮತ್ತು ಖಾಸಗಿ ಬದುಕಿನಲ್ಲೂ ಅಷ್ಟೇ ಪ್ರೀತಿ ವಿಶ್ವಾಸವನ್ನು ಉಳಿಸಿಕೊಂಡಿದ್ದಾರೆ. ಸತಿಪತಿಯಾದ ನಂತರ ಮತ್ತೆ ಈ ಜೋಡಿ ಜೊತೆಯಾಗಿ ನಟಿಸಬೇಕು ಎನ್ನುವುದು ಅಭಿಮಾನಿಗಳ ಆಸೆ. ಆದರೆ, ಆ ದಿನ ಯಾವತ್ತು ಬರತ್ತೋ ಕಾದು ನೋಡಬೇಕು.

ಸದ್ಯ ರಾಧಿಕಾ ಪಂಡಿತ್ ಕುಟುಂಬವನ್ನು ನಿಭಾಯಿಸ್ತಾ ಇದ್ದಾರೆ. ಯಶ್ ಸಿನಿಮಾ ಮಾಡುತ್ತಿದ್ದಾರೆ. ಯಶ್ ನಟನೆಯ ಟಾಕ್ಸಿಕ್ ಸಿನಿಮಾ ಇನ್ನಷ್ಟೇ ಚಿತ್ರೀಕರಣ ಪ್ರಾರಂಭಿಸಬೇಕು. ಈ ಸಮಯದಲ್ಲಿ ರಾಧಿಕಾ ಅಭಿಮಾನಿಗಳ ಜೊತೆ ಸೋಷಿಯಲ್ ಮೀಡಿಯಾದಲ್ಲಿ ಹಲವು ಪ್ರಶ್ನೆಗಳಿಗೆ ಉತ್ತರಿಸಿದ್ದಾರೆ.

# ಒಟಿಟಿಯಲ್ಲಿ 'ಶಾಖಾಹಾರಿ' ಅಬ್ಬರ 10 ಮಿಲಿಯನ್‌ಗೂ ಹೆಚ್ಚು ಸ್ಟ್ರೀಮಿಂಗ್



ಕನ್ನಡ ಚಿತ್ರರಂಗದಲ್ಲಿ ಭಿನ್ನ-ವಿಭಿನ್ನ ಪ್ರಯತ್ನಗಳು ನಡೆಯುತ್ತಿವೆ. ಹೊಸಬರ ಜೊತೆಗೆ ಅನುಭವಿ ತಾರಾಬಳಗ ಕೈ ಜೋಡಿಸಿದಾಗ ಒಂದೊಳ್ಳೆ ಅದ್ಭುತ ಸಿನಿಮಾ ಹೊರಹೊಮ್ಮಲಿದೆ ಎಂಬುದಕ್ಕೆ ಶಾಖಾಹಾರಿ ಚಿತ್ರ ತಾಜಾ ಉದಾಹರಣೆ..ತನ್ನ ಗಟ್ಟಿ ಕಂಟೆಂಟ್ ನಿಂದಲೇ ಭಾರೀ ಸದ್ದು ಮಾಡಿದ್ದ ಈ ಚಿತ್ರವೀಗ ಅಮೇಜಾನ್ ಪ್ರೈಮ್ ನಲ್ಲಿ ಅಪಾರ ಮೆಚ್ಚುಗೆ ಪಡೆದುಕೊಳ್ಳುತ್ತಿದೆ. ಶಾಖಾಹಾರಿ ನೋಡಿದವರೆಲ್ಲಾ ಇಂತಹ ಸಿನಿಮಾವನ್ನು ಥಿಯೇಟರ್ ನಲ್ಲಿ ಮಿಸ್ ಮಾಡಿಕೊಂಡ್ವಲ್ಲಾ ಅಂತಾ ತಮ್ಮ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.

ಫೆಬ್ರವರಿ 16ರಂದು ಬೆಳ್ಳಿಪರದೆಗೆ ಎಂಟ್ರಿ ಕೊಟ್ಟಿದ್ದ ಶಾಖಾಹಾರಿ ಸಿನಿಮಾವೀಗ ಮೂರು ತಿಂಗಳ ಬಳಿಕ ಒಟಿಟಿಗೆ ಲಗ್ಗೆ ಇಟ್ಟಿದೆ. ಶುಕ್ರವಾರದಿಂದ ಅಮೇಜಾನ್ ಪ್ರೈಮ್ ನಲ್ಲಿ ಸ್ಟ್ರೀಮ್ ಆಗಿರುವ ಈ ಚಿತ್ರವನ್ನು ನೋಡಿದವರೆಲ್ಲಾ ವಾವ್ ಇಂತಹ ಪ್ರಯತ್ನಗಳು ಮಾಲಿವುಡ್ ನಲ್ಲಿ ಮಾತ್ರವಲ್ಲ ನಮ್ಮಲ್ಲಿಯೂ ನಡೆಯುತ್ತವೆ. ಅದಕ್ಕೆ ಪ್ರೇಕ್ಷಕಪ್ರಭು ಬೆನ್ನುತಟ್ಟಬೇಕಷ್ಟೇ.. ಚಿತ್ರಮಂದಿರದಲ್ಲಿ ದಕ್ಕದ ಪ್ರೀತಿ ಶಾಖಾಹಾರಿ ಚಿತ್ರಕ್ಕೆ ಒಟಿಟಿಯಲ್ಲಿ ದೊರೆಯುತ್ತಿದೆ. ಅಮೇಜಾನ್ ಪ್ರೈಮ್ ಗೆ ಎಂಟ್ರಿ ಕೊಟ್ಟ ಬರೀ 4 ದಿನದಲ್ಲಿ 10 ಮಿಲಿಯನ್ ನಿಮಿಷಗಳ ಸ್ಟ್ರೀಮಿಂಗ್ ಕಂಡಿರುವ ಸಿನಿಮಾ.. ಎಲ್ಲಾ ಜಾಲತಾಣಗಳಲ್ಲು ಬಹಳಷ್ಟು ಜನ ದಿನೇ ದಿನೇ ಮೆಚ್ಚುಗೆ ವ್ಯಕ್ತಪಡಿಸುತ್ತ ಇರುವುದು ಗಮನಾರ್ಹ..

ನೀನಾಸಂ ಸತೀಶ್ ಶಾಖಾಹಾರಿ ಸಿನಿಮಾವನ್ನು ಬಾಯ್ ತುಂಬಾ ಹೊಗಳಿದ್ದಾರೆ. ಯಾವ ನಿರೀಕ್ಷೆಯು ಇಲ್ಲದೆ ಸುಮ್ಮನೆ ಸಿನಿಮಾ ನೋಡುತ್ತಾ ಹೋದಾಗ,ಸಿನಿಮಾ ನಮ್ಮನ್ನು ಒಳಗೆ ಸೆಳೆದೊಯ್ಯುತ್ತದೆ,ಸುಳಿಯಂತೆ. ಪ್ರಾಮಾಣಿಕವಾದ, ಯಾರನ್ನೂ ಮೆಚ್ಚಿಸಲು ಅಲ್ಲದೆ ತಮ್ಮಷ್ಟಕ್ಕೆ ತಂಡ ಧ್ಯಾನಿಸಿದೆ.ಸಿನಿಮಾ ಬರೀ ನಿರ್ದೇಶಕ,ಅಥವಾ ನಟರಲ್ಲದೆ ಸಮೂಹದ ಕೆಲಸ ಎಂಬುದನ್ನು ಮತ್ತೆ ಸಾಬೀತು ಮಾಡಿದೆ. ಗೆಳೆಯ ಗೋಪಿ ವಾವ್! ರಘು ಅಣ್ಣ ನಮ್ಮ ಹೆಮ್ಮೆ! ನಿರ್ದೇಶಕ ಸಂದೀಪ್ ,ಮತ್ತು ಛಾಯಾಗ್ರಹಣ, ಸಂಗೀತ ಎಲ್ಲವೂ ಅದ್ಭುತ.ನೋಡಲೇಬೇಕಾದ ನಮ್ಮ ಚಿತ್ರ ಎಂದು ಟ್ವೀಟ್ ಮಾಡಿದ್ದಾರೆ. ನಟ ಪೃಥ್ವಿ ಅಂಬಾರ್ ಕೂಡ ಚಿತ್ರವನ್ನು ನೋಡಿ ಮನಸಾರೆ ಕೊಂಡಾಡಿದ್ದಾರೆ. ಶಾಖಾಹಾರಿ ಬಿಡುಗಡೆ ಸಮಯದಲ್ಲಿ ನನ್ನ ಚಿತ್ರ ಬಿಡುಗಡೆಯಾಗಿತ್ತು. ಹೀಗಾಗಿ ಇಂತಹ ಒಳ್ಳೆ ಸಿನಿಮಾವನ್ನು ಮಿಸ್ ಮಾಡಿಕೊಂಡಿದ್ದೇನೆ. ಅದಕ್ಕಾಗಿ ನನಗೆ ಬೇಸರವಿದೆ. ಚಿತ್ರದ ಕಥೆ, ಟ್ವಿಸ್ಟ್, ಕ್ಲೈಮ್ಯಾಕ್ಸ್ ಎಲ್ಲವೂ ಅದ್ಭುತ. ರಂಗಾಯಣ ರಘು ಸರ್ ಹಾಗೂ ಗೋಪಾಲ್ ದೇಶಪಾಂಡೇ ಸರ್ ಅಭಿನಯ ಸೂಪರ್ ಎಂದಿದ್ದಾರೆ.

ಸಂದೀಪ್ ಸುಂಕದ್ ನಿರ್ದೇಶನದ 'ಶಾಖಾಹಾರಿ' ಸಿನಿಮಾದ ಸೂತ್ರಧಾರಿ. ಕನ್ನಡ ಚಿತ್ರರಂಗದ ಹಿರಿಯ ನಟ ರಂಗಾಯಣ ರಘು ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದರು. ಪೊಲೀಸ್ ಅಧಿಕಾರಿಯಾಗಿ ಗೋಪಾಲಕೃಷ್ಣ ದೇಶಪಾಂಡೆ ಅತ್ಯದ್ಭುತವಾಗಿ ನಟಿಸಿದ್ದರು. ಉಳಿದಂತೆ ವಿನಯ್, ನಿಧಿ ಹೆಗಡೆ, ಸುಜಯ್ ಶಾಸ್ತ್ರೀ, ಹರಿಣಿ ಹಾಗೂ ಕಾನ್‌ಸ್ಟೇಬಲ್ ಮಮತಕ್ಕನ ಪಾತ್ರಧಾರಿಯಾಗಿ ಪ್ರತಿಭಾ ನಾಯಕ್ ತಮ್ಮ ಪಾತ್ರಗಳಿಗೆ ನ್ಯಾಯ ಸಲ್ಲಿಸಿದ್ದಾರೆ. ಕೀಲಂಬಿ ಮೀಡಿಯಾ ಲ್ಯಾಬ್ ಬ್ಯಾನರ್ ನಡಿ ರಾಜೇಶ್ ಕೀಲಾಂಬಿ, ರಂಜಿನಿ ಪ್ರಸನ್ನ ಶಾಖಾಹಾರಿಗೆ ಬಂಡವಾಳ ಹೂಡಿದ್ದಾರೆ.



# ಕಪಲ್ ಸಾಂಗ್‌ಗೆ ಹೆಜ್ಜೆ ಹಾಕಿದ ರಶ್ಮಿಕಾ ಮಂದಣ್ಣ- ಅಲ್ಲು



ಅಲ್ಲು ಅರ್ಜುನ್ ನಟನೆಯ ಬಹುನಿರೀಕ್ಷಿತ ಸಿನಿಮಾ ಪುಷ್ಪ 2 ಅಂಗಳದಿಂದ ಎರಡನೇ ಹಾಡು ಬಿಡುಗಡೆಯಾಗಿದೆ. ದಿ ಕಪಲ್ ಸಾಂಗ್ ಗೆ ಪುಷ್ಪರಾಜ್ ಹಾಗೂ ಶ್ರೀವಲ್ಲಿ ಹೆಜ್ಜೆ ಹಾಕಿದ್ದಾರೆ. ಗಣೇಶ್ ಆಚಾರ್ಯ ನೃತ್ಯ ಸಂಯೋಜನೆಯಲ್ಲಿ ಮೂಡಿಬಂದಿರುವ ಹಾಡಿಗೆ ದೇವಿಶ್ರೀ ಪ್ರಸಾದ್ ಟ್ಯೂನ್ ಹಾಕಿದ್ದಾರೆ. ಕನ್ನಡ, ತೆಲುಗು, ತಮಿಳು, ಹಿಂದಿ, ಮಲಯಾಳಂ ಹಾಗೂ ಬೆಂಗಾಲಿ ಭಾಷೆಯಲ್ಲಿ ಸೆಕೆಂಡ್ ಸಾಂಗ್ ಬಿಡುಗಡೆಯಾಗಿದೆ. ಕನ್ನಡದ ಹಾಡಿಗೆ ವರದರಾಜು ಚಿಕ್ಕಬಳ್ಳಾಪುರ ಸಾಹಿತ್ಯ ಬರೆದಿದ್ದು, ಮೆಲೋಡಿ ಕ್ವೀನ್ ಶ್ರೇಯಾ ಘೋಷಾಲ್ ಆರು ಭಾಷೆಯ ಹಾಡಿಗೆ ಧ್ವನಿಯಾಗಿದ್ದಾರೆ.

ಪುಷ್ಪ ಸೀಕ್ವೆಲ್ ಟೀಸರ್ ಹಾಗೂ ಟೈಟಲ್ ಟ್ರ್ಯಾಕ್ ಈಗಾಗ್ಲೇ ಭಾರೀ ಸದ್ದು ಮಾಡಿದ್ದು, ಇದೀಗ ರಿಲೀಸ್ ಆಗಿರುವ ಸಾಂಗ್ ಕೂಡ ಸೆನ್ಸೇಷನ್ ಸೃಷ್ಟಿಸುವ ಎಲ್ಲಾ ಲಕ್ಷಣ ಕಾಣುತ್ತಿದೆ. ಅದ್ಧೂರಿ ಸೆಟ್ ನಲ್ಲಿ ರಶ್ಮಿಕಾ ಹಾಗೂ ಅಲ್ಲು ಅರ್ಜುನ್ ಹೆಜ್ಜೆ ಹಾಕಿದ್ದಾರೆ. ಇವರಿಬ್ಬರ ಆನ್ ಸ್ಕ್ರೀನ್ ಕೆಮಿಸ್ಟ್ರೀಗೆ ಫ್ಯಾನ್ಸ್ ಫಿದಾ ಆಗಿದ್ದಾರೆ. ಪುಷ್ಪ ಪುಷ್ಪ ಹಾಡು 100 ಮಿಲಿಯನ್ಸ್ ವೀಕ್ಷಣೆ ಕಂಡಿದೆ, ಕಪಲ್ ಸಾಂಗ್ ಕೂಡ ದಾಖಲೆ ಬರೆಯಲಿದೆ ಎಂಬ ನಿರೀಕ್ಷೆ ಚಿತ್ರತಂಡದಲ್ಲಿದೆ. ತೆಲುಗಿನಲ್ಲಿ 'ಸೂಸೆಕಿ..', ಕನ್ನಡದಲ್ಲಿ 'ನೋಡೋಕ..' ಎಂದು ಹಾಡು ಶುರುವಾಗುವ ಹಾಡು ಕೇಳುಗರಿಗೆ ಕಿಕ್ ಕೊಡುತ್ತಿದೆ. ಈ ವರ್ಷದ ಬಹುನಿರೀಕ್ಷಿತ ಸಿನಿಮಾವಾಗಿರುವ ಪುಷ್ಪ 2 ಈ ಸಿನಿಮಾ ಆಗಸ್ಟ್ 15ರಂದು ಬಿಡುಗಡೆಯಾಗಲಿದೆ.

ಈ ಚಿತ್ರಕ್ಕೆ ಸುಕುಮಾರ್ ಆಕ್ಷನ್ ಕಟ್ ಹೇಳಿದ್ದಾರೆ ಮೈತ್ರಿ ಮೂವೀ ಮೇಕರ್ಸ್ ದುಬಾರಿ ಬಜೆಟ್ ನಲ್ಲಿ ಚಿತ್ರ ನಿರ್ಮಾಣ ಮಾಡಿದೆ. ಈ ಸಿನಿಮಾದಲ್ಲಿ ಅಲ್ಲು ಅರ್ಜುನ್ ಗೆ ಜೊತೆಯಾಗಿ ಶ್ರೀವಲ್ಲಿಯಾಗಿ ರಶ್ಮಿಕಾ ಮಂದಣ್ಣ ನಟಿಸಿದ್ದಾರೆ. ಫಹದ್ ಫಾಸಿಲ್ , ಡಾಲಿ ಧನಂಜಯ್ ಸೇರಿದಂತೆ ಹಲವು ಕಲಾವಿದರು ನಟಿಸಿದ್ದಾರೆ.

# ಭಾರತ- ಪಾಕಿಸ್ತಾನ ಟಿ20 ವಿಶ್ವಕಪ್ ಪಂದ್ಯಕ್ಕೆ ಬೆದರಿಕೆ ಕರೆ



ಇದೇ ಜೂ.9 ರಂದು ನಡೆಯಲಿರುವ ಐಸಿಸಿ ಟಿ20 ವಿಶ್ವಕಪ್ ಭಾರತ-ಪಾಕಿಸ್ತಾನ ಹೈವೋಲ್ಟೇಜ್ ಪಂದ್ಯಕ್ಕೆ ಬೆದರಿಕೆ ಕರೆಗಳು ಬಂದಿದ್ದು, ಆತಂಕ ಮೂಡಿಸಿದೆ. ಈ ಹಿನ್ನೆಲೆಯಲ್ಲಿ ನ್ಯೂಯಾರ್ಕ್‌ನ ಐಸೆನ್‌ಹೋವರ್ ಪಾರ್ಕ್ ಕ್ರೀಡಾಂಗಣದಲ್ಲಿ ಭದ್ರತೆ ಹೆಚ್ಚಿಸಲಾಗಿದೆ.

ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ. ಸಾರ್ವಜನಿಕರ ಸುರಕ್ಷತೆ ನಮ್ಮ ಪ್ರಮುಖ ಆದ್ಯತೆಯಾಗಿದೆ. ಪಂದ್ಯಗಳು ಸುಗಮವಾಗಿ ನಡೆಯುವುದನ್ನು ಖಚಿತಪಡಿಸಿಕೊಳ್ಳಲು ಕಾನೂನು ಜಾರಿ ಅಧಿಕಾರಿಗಳೊಂದಿಗೆ ಕೆಲಸ ಮಾಡುತ್ತಿದ್ದೇನೆ ಎಂದು ನ್ಯೂಯಾರ್ಕ್‌ನ ಗವರ್ನರ್ ಕ್ಯಾಥಿ ಹೊಚುಲ್ ತಿಳಿಸಿದ್ದಾರೆ. ಮ್ಯಾನ್‌ಹ್ಯಾಟನ್‌ನ ಪೂರ್ವಕ್ಕೆ 25 ಮೈಲುಗಳಷ್ಟು ದೂರದಲ್ಲಿರುವ ಐಸೆನ್‌ಹೋವರ್ ಪಾರ್ಕ್ ಕ್ರೀಡಾಂಗಣವು ಜೂನ್ 3 ರಿಂದ 12 ರ ವರೆಗೆ ಎಂಟು ಖಅಅ ಖ20 ಘಅ ಪಂದ್ಯಗಳ ಆತಿಥ್ಯ ವಹಿಸುತ್ತದೆ. ಇದರಲ್ಲಿ ಎರಡು ಏಷ್ಯನ್ ಸಾಂಪ್ರದಾಯಿಕ ಎದುರಾಳಿಗಳ ನಡುವಿನ ಹಣಾಹಣಿಯೂ ಸೇರಿದೆ.

ಸುಧಾರಿತ ಕಣ್ಗಾವಲು ಮತ್ತು ಸಂಪೂರ್ಣ ಸ್ಕ್ರೀನಿಂಗ್ ಪ್ರಕ್ರಿಯೆಗಳು ಸೇರಿದಂತೆ ಉನ್ನತ ಭದ್ರತಾ ಕ್ರಮಗಳಲ್ಲಿ ತೊಡಗಿಸಿಕೊಳ್ಳಲು ನಾನು ನ್ಯೂಯಾರ್ಕ್ ರಾಜ್ಯ ಪೊಲೀಸರಿಗೆ ನಿರ್ದೇಶನ ನೀಡಿದ್ದೇನೆ ಎಂದು ಹೊಚುಲ್ ಮಾಹಿತಿ ನೀಡಿದ್ದಾರೆ.

ಜೂ.5 ರಂದು ಐರ್ಲೆಂಡ್ ವಿರುದ್ಧ, ಜೂ.9 ಕ್ಕೆ ಪಾಕಿಸ್ತಾನ, ಜೂ.12 ರಂದು ಯುಎಸ್‌ಎ ಹಾಗೂ ಜೂ.15 ಕ್ಕೆ ಕೆನಡಾ ತಂಡಗಳ ವಿರುದ್ಧ ಭಾರತ ತಂಡ ಸೆಣಸಲಿದೆ. ಯುಎಸ್‌ನಲ್ಲಿ ಭಾರತ ತಂಡ ಈ ನಾಲ್ಕು ಪಂದ್ಯಗಳನ್ನು ಆಡಲಿದೆ. ಮೆನ್ ಇನ್ ಬ್ಲೂ ತಂಡ ಮಂಗಳವಾರ ನ್ಯೂಯಾರ್ಕ್‌ಗೆ ಆಗಮಿಸಿ ತರಬೇತಿ ಪಡೆಯುತ್ತಿದ್ದಾರೆ.

## ಸೂಪರ್-8 ಆಟದಲ್ಲಿರುವ ತಂಡಗಳನ್ನು ಹೆಸರಿಸಿದ ಮೊಹಮ್ಮದ್ ಶಮಿ




ಅಮೇರಿಕ ಮತ್ತು ವೆಸ್ಟ್ ಇಂಡೀಸ್‌ನಲ್ಲಿ ನಡೆಯಲಿರುವ ಟಿ20 ವಿಶ್ವಕಪ್‌ಗಾಗಿ ಎಲ್ಲಾ ತಂಡಗಳು ನ್ಯೂಯಾರ್ಕ್‌ಗೆ ತಲುಪಿವೆ. ಈಗಾಗಲೇ ಅಭ್ಯಾಸ ಪಂದ್ಯಗಳು ಸಹ ಆರಂಭವಾಗಿವೆ. ಇದೇ ಮೊದಲ ಬಾರಿಗೆ ಟಿ20 ವಿಶ್ವಕಪ್‌ನಲ್ಲಿ 20 ತಂಡಗಳು ಸ್ಥಾನ ಪಡೆದಿವೆ. ಇವುಗಳನ್ನು 4 ಗುಂಪುಗಳಾಗಿ ವಿಂಗಡಿಸಲಾಗಿದೆ. ಪ್ರತಿ ಗುಂಪಿನಲ್ಲಿ 5 ತಂಡಗಳನ್ನು ಇರಿಸಲಾಗಿದೆ. ಈ ತಂಡಗಳು ಪರಸ್ಪರರ ವಿರುದ್ಧ ಆಡಲಿವೆ. ಅಂದರೆ ಪ್ರತಿ ತಂಡವು ರೌಂಡ್-1 ರಲ್ಲಿ 4 ಪಂದ್ಯಗಳನ್ನು ಆಡಬೇಕಾಗುತ್ತದೆ. ಇದರ ನಂತರ, ಪ್ರತಿ ಗುಂಪಿನಿಂದ 2 ತಂಡಗಳು ಸೂಪರ್-8 ಗೆ ಅರ್ಹತೆ ಪಡೆಯುತ್ತವೆ. ಈ 8 ತಂಡಗಳು ಯಾರಾಗಬಹುದು ಎಂಬುದರ ಕುರಿತು ಅನೇಕ ಆಟಗಾರರು ಈಗಾಗಲೇ ಭವಿಷ್ಯ ನುಡಿದಿದ್ದಾರೆ. ಅವರಲ್ಲಿ ಟೀಂ ಇಂಡಿಯಾದ ಸ್ಟಾರ್ ಬೌಲರ್ ಮೊಹಮ್ಮದ್ ಶಮಿ ಕೂಡ ಒಬ್ಬರು.

**ಶಮಿ ಆಯ್ಕೆ ಮಾಡಿದ 8 ತಂಡಗಳಿವು:** ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಈ ಬಗ್ಗೆ ಮಾತನಾಡಿದ ಮೊಹಮ್ಮದ್ ಶಮಿ, ಎ ಗುಂಪಿನಿಂದ ಭಾರತ-ಪಾಕಿಸ್ತಾನ, ಬಿ ಗುಂಪಿನಿಂದ ಆಸ್ಟ್ರೇಲಿಯಾ-ಇಂಗ್ಲೆಂಡ್, ಸಿ ಗುಂಪಿನಿಂದ ನ್ಯೂಜಿಲೆಂಡ್-ವೆಸ್ಟ್ ಇಂಡೀಸ್ ಮತ್ತು ಡಿ ಗುಂಪಿನಿಂದ ದಕ್ಷಿಣ ಆಫ್ರಿಕಾ-ಶ್ರೀಲಂಕಾ ತಂಡಗಳನ್ನು ಆಯ್ಕೆ ಮಾಡಿದ್ದಾರೆ.

**ಯಾವ ಗುಂಪಿನಲ್ಲಿ ಯಾವ ತಂಡಗಳು?:** ಎ ಗುಂಪಿನಲ್ಲಿ ಭಾರತ, ಪಾಕಿಸ್ತಾನ, ಕೆನಡಾ, ಐರ್ಲೆಂಡ್ ಮತ್ತು ಯುಎಸ್‌ಎ ಸೇರಿವೆ. ಗುಂಪು-ಬಿ ಆಸ್ಟ್ರೇಲಿಯಾ, ಇಂಗ್ಲೆಂಡ್, ನಮೀಬಿಯಾ, ಓಮನ್ ಮತ್ತು ಸ್ಕಾಟ್ಲೆಂಡ್ ತಂಡವನ್ನು ಒಳಗೊಂಡಿದೆ. ಸಿ ಗುಂಪಿನಲ್ಲಿ ಅಫ್ಘಾನಿಸ್ತಾನ, ನ್ಯೂಜಿಲೆಂಡ್, ಪಪುವಾ ನ್ಯೂಗಿನಿಯಾ, ಉಗಾಂಡಾ ಮತ್ತು ವೆಸ್ಟ್ ಇಂಡೀಸ್ ಸೇರಿವೆ. ಬಾಂಗ್ಲಾದೇಶ, ದಕ್ಷಿಣ ಆಫ್ರಿಕಾ, ಶ್ರೀಲಂಕಾ, ನೇಪಾಳ ಮತ್ತು ನೆದರ್ಲೆಂಡ್ಸ್ ತಂಡಗಳು ಡಿ ಗುಂಪಿನಲ್ಲಿ ಸ್ಥಾನ ಪಡೆದಿವೆ.

**ಚೇತರಿಸಿಕೊಳ್ಳುತ್ತಿರುವ ಶಮಿ:** ಭಾರತದಲ್ಲಿ ನಡೆದ ಏಕದಿನ ವಿಶ್ವಕಪ್ ವೇಳೆ ಇಂಜುರಿಗೆ ತುತ್ತಾಗಿದ ಮೊಹಮ್ಮದ್ ಶಮಿ ಗಾಯದಿಂದ ಚೇತರಿಸಿಕೊಳ್ಳುತ್ತಿದ್ದಾರೆ ಎಂಬುದು ಗಮನಾರ್ಹ. ಗಾಯದ ಸಮಸ್ಯೆಯಿಂದಾಗಿ ಶಮಿ ಟಿ20 ವಿಶ್ವಕಪ್ ನಿಂದ ಹೊರಗುಳಿಯಬೇಕಾಯಿತು. ಆದರೆ ಟೀಂ ಇಂಡಿಯಾಗೆ ಶುಭ ಹಾರೈಸಿರುವ ಶಮಿ, 'ಭಾರತ ತಂಡ ಚಾಂಪಿಯನ್ ಆಗಬೇಕೆಂದು ನಾನು ಬಯಸುತ್ತೇನೆ. ಹಾಗೆಯೇ ಆಟಗಾರರು ತಮ್ಮ ಫಿಟ್ನೆಸ್ ಮತ್ತು ಚೇತರಿಕೆಯ ಬಗ್ಗೆ ಕಾಳಜಿ ವಹಿಸಿ ಎಂದು ತಂಡದ ಆಟಗಾರರಿಗೆ ಎಚ್ಚರಿಕೆ ಕೂಡ ನೀಡಿದ್ದಾರೆ.

# ವಾಲ್ಮೀಕಿ ನಿಗಮದಲ್ಲಿ 94 ಕೋಟಿ ಗೋಲ್ಮಾಲ್
## ಯೂನಿಯನ್ ಬ್ಯಾಂಕ್‌ನಿಂದಲೇ ವಂಚನೆ, ಕೇಸ್ ದಾಖಲು




**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್ ಆತ್ಮಹತ್ಯೆ ಮಾಡಿಕೊಂಡ ಬೆನ್ನಲ್ಲೇ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ನಿಗಮದ ಪ್ರಧಾನ ವ್ಯವಸ್ಥಾಪಕ ರಾಜಶೇಖರ್ ಅವರು ಯೂನಿಯನ್ ಬ್ಯಾಂಕ್ ನ ಎಂಡಿ ಹಾಗೂ ಸಿಇಓ ಮನಿಮೇಖಲೈ, ಕಾರ್ಯನಿರ್ವಾಹಕ ನಿರ್ದೇಶಕ ನಿತೇಶ್ ರಂಜನ್, ರಾಮಸುಬ್ರಮಣ್ಯಂ, ಸಂಜಯ್ ರುದ್ರ, ಪಂಕಜ್ ದ್ವಿವೇದಿ, ಸುಶಿಚಿತ ರಾವ್ ವಿರುದ್ಧ ಹೈಗ್ರೌಂಡ್ಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

ದೂರಿನ ಆಧಾರದಲ್ಲಿ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ವಿರುದ್ಧ ಐಪಿಸಿ ಸೆಕ್ಷನ್ 149 (ಒಂದೇ ಉದ್ದೇಶವನ್ನು ಇಟ್ಟುಕೊಂಡು ಗುಂಪಿನಲ್ಲಿರುವ ಪ್ರತಿಯೊಬ್ಬ ಸದಸ್ಯ ಕೃತ್ಯ ಎಸಗಿರುವುದು), 409( ಸರ್ಕಾರಿ ನೌಕರ ಅಥವಾ ಬ್ಯಾಂಕರ್‌ನಿಂದ ನಂಬಿಕೆ ದ್ರೋಹ), 420 (ವಂಚನೆ), 467 (ಬೆಲೆಯುಳ್ಳ ಭದ್ರತಾ ಪತ್ರ ಇತ್ಯಾದಿಗಳ ಸುಳ್ಳು ಸೃಷ್ಟನೆ), 468 (ವಂಚಿಸುವ ಉದ್ದೇಶದಿಂದಲೇ ಸುಳ್ಳು ಸೃಷ್ಟನೆ), 471(ಸುಳ್ಳು ಸೃಷ್ಟನೆಯ ದಾಖಲೆಯನ್ನು ನೈಜವೆಂದು ಬಳಸುವುದು) ಅಡಿ ಎಫ್‌ಐಆರ್ ದಾಖಲಾಗಿದೆ.

**ದೂರಿನಲ್ಲಿ ಏನಿದೆ?:** ನಿಗಮದ ಹೆಸರಲ್ಲಿ ವಸಂತನಗರದಲ್ಲಿರುವ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕ್‌ನಲ್ಲಿ ಖಾತೆ ಇತ್ತು. ಫೆ.19, 2024 ರಂದು ಎಂಜಿ ರಸ್ತೆಯಲ್ಲಿರುವ ಬ್ಯಾಂಚ್ ಖಾತೆಯನ್ನು ವರ್ಗಾವಣೆ ಮಾಡಲಾಗಿರುತ್ತದೆ.

ಫೆ.26 ರಂದು ಬ್ಯಾಂಕಿನವರು ನಿಗಮದ ಎಂಡಿ ಹಾಗೂ ಲೆಕ್ಕಾಧಿಕಾರಿಗಳ ಸಹಿಯನ್ನು ಪಡೆದುಕೊಂಡಿರುತ್ತಾರೆ. ನಂತರ ಈ ಖಾತೆಗೆ ನಿಗಮ ಮಾರ್ಚ್ 3 ರಂದು 25 ಕೋಟಿ ರೂ., ಮಾರ್ಚ್ 6 ರಂದು 44 ಕೋಟಿ ರೂ., ಮಾರ್ಚ್ 21 ರಂದು 33 ಕೋಟಿ ರೂ., ಮಾರ್ಚ್ 22 ರಂದು 33 ಕೋಟಿ ರೂ., ಮಾರ್ಚ್ 21 ರಂದು 50 ಕೋಟಿ ರೂ. ಹಣವನ್ನು ವರ್ಗಾವಣೆ ಮಾಡಿತ್ತು. ಒಟ್ಟು 187.33 ಕೋಟಿ ರೂ. ಹಣ ವರ್ಗಾವಣೆಯಾಗಿತ್ತು

ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿ ಇದ್ದ ಹಿನ್ನೆಲೆಯಲ್ಲಿ ಬ್ಯಾಂಕ್ ಜೊತೆ ನಿಗಮದಿಂದ ಯಾವುದೇ ಪತ್ರ ವ್ಯವಹಾರ ನಡೆಸಿರುವುದಿಲ್ಲ. ಹೀಗಿದ್ದರೂ ನಕಲಿ ದಾಖಲೆ ಸೃಷ್ಟಿಸಿ 94,73,08,500 ರೂ. ಹಣವನ್ನು ವರ್ಗಾವಣೆ ಮಾಡಲಾಗಿದೆ. ಇಷ್ಟೊಂದು ಹಣ ವರ್ಗಾವಣೆಯಾದರೂ ನಿಗಮದ ನೊಂದಾಯಿಸಿದ ಇಮೇಲ್, ಮೊಬೈಲಿಗೆ ಯಾವುದೇ ಮಸೇಜ್ ಬಂದಿರುವುದಿಲ್ಲ.

ಚಂದ್ರಶೇಖರನ್ ಅವರು ಬ್ಯಾಂಕ್ ದೃಢೀಕರಣ ಚೆಕ್, ಆರ್‌ಟಿಜಿಎಸ್, ಬ್ಯಾಂಕ್ ಹೇಳಿಕೆಗಳನ್ನು ಸಮನ್ವಯಗೊಳಿಸುವ ಕೆಲಸ ಮಾಡುತ್ತಿದ್ದರು. ಈ ರೀತಿ ಹಣ ವರ್ಗಾವಣೆಯಾದ ವಿಚಾರ ಗೊತ್ತಾದ ಬಳಿಕ ನಿಗಮ ಪ್ರಶ್ನೆ ಮಾಡಿದ್ದಕ್ಕೆ ಬ್ಯಾಂಕ್ ತಕ್ಷಣ 5 ಕೋಟಿ ರೂ. ಹಣವನ್ನು ಖಾತೆಗೆ ಹಾಕಿದೆ. ಅಕ್ರಮಗಳಿಗೆ ಸಂಬಂಧಿಸಿದಂತೆ ಸಿಸಿಟಿವಿ ದೃಶ್ಯಗಳನ್ನು ನೀಡುವಂತೆ ಕೋರಿದ್ದು ಇಲ್ಲಿಯವರೆಗೆ ಬ್ಯಾಂಕ್ ಯಾವುದೇ ಸಿಸಿಟಿವಿ ದೃಶ್ಯ ನೀಡಿಲ್ಲ.

ಬ್ಯಾಂಕ್‌ನ ಲೋಪದಿಂದಲೇ ಈ ಅಕ್ರಮ ವ್ಯವಹಾರ ನಡೆದಿದೆ. ಬ್ಯಾಂಕಿಂಗ್ ವ್ಯವಸ್ಥೆಯಲ್ಲಿ ನಡೆದ ಈ ಲೋಪಗಳಿಗೆ ಮುನ್ನೆಚ್ಚರಿಕೆ ತಗೆದುಕೊಳ್ಳುವಲ್ಲಿ ಬ್ಯಾಂಕ್ ಆಫ್ ಇಂಡಿಯಾದ ಉನ್ನತ ಆಡಳಿತವೇ ಜವಾಬ್ದಾರರಾಗಿದ್ದಾರೆ. ಯಾವುದೇ ಪರಿಶೀಲನೆ ನಡೆಸದೇ ಬ್ಯಾಂಕ್‌ನಿಂದ ಓವರ್ ಡ್ರಾಫ್ಟ್ ಸೌಲಭ್ಯವನ್ನು ಸೃಷ್ಟಿಸಿ ಹಾಗೂ ನಕಲಿ ದಾಖಲೆ ಸೃಷ್ಟಿಸಿ ಅಧಿಕೃತವಾಗಿ ಬೇರೆ ಬೇರೆ ಖಾತೆಗಳಿಗೆ ಹಣ ವರ್ಗಾವಣೆ ಮಾಡಿ ನಿಗಮಕ್ಕೆ ಭಾರೀ ಆರ್ಥಿಕ ನಷ್ಟ ಉಂಟಾಗಿದೆ. ಈ ಕೃತ್ಯಕ್ಕೆ ಕಾರಣದವರ ವಿರುದ್ಧ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡುತ್ತಿದ್ದೇನೆ.

## ಮೇಲ್ಮನೆ ಚುನಾವಣೆಯಲ್ಲಿ ಬಿಜೆಪಿ- ಜೆಡಿಎಸ್ ಮೈತ್ರಿಕೂಟಕ್ಕೆ ಬೆಂಬಲ



**ಬೆಂಗಳೂರು:** ಯುಕವರು, ಪದವೀಧದರು ಮತ್ತು ಶಿಕ್ಷಕರ ಪರವಾಗಿ ಬಿಜೆಪಿ ಸದಾ ನಿಂತಿದೆ. ಹಲವಾರು ಸುಧಾರಣೆಗಳನ್ನು ತಂದಿದೆ. ಈ ಬಾರಿ ನಡೆಯುವ ವಿಧಾನಪರಿಷತ್ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟವನ್ನು ಬೆಂಬಲಿಸಬೇಕು ಎಂದು ಮಾಜಿ ಡಿಸಿಎಂ ಡಾ.ಸಿ.ಎನ್.ಅಶ್ವತ್ಥನಾರಾಯಣ್ ಮನವಿ ಮಾಡಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ-ಜೆಡಿಎಸ್ ಮೈತ್ರಿ ಪಕ್ಷಗಳು ಪದವೀಧರರ ವಿಚಾರ, ಶಿಕ್ಷಕರ ವಿಚಾರದಲ್ಲಿ ಕೇಂದ್ರ ಮತ್ತು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಕೆಲಸ ಮಾಡಿವೆ. ಹಲವು ಸುಧಾರಣೆ, ಪ್ರಗತಿ, ನೂತನ ಕಾಯ್ದೆ ಕಾನೂನು ಜಾರಿಗೆ ತಂದಿವೆ. ಇವೆರಡು ಪಕ್ಷಗಳು ಶಿಕ್ಷಕರು, ಪದವೀಧರರ ಪರವಾಗಿ ನಿರಂತರವಾಗಿ ಶ್ರಮಿಸುತ್ತಿವೆ ಎಂದು ವಿವರಿಸಿದರು.

ಗುಣಮಟ್ಟದ ಶಿಕ್ಷಣದಲ್ಲಿ ಶಿಕ್ಷಕರ ಪಾತ್ರ ಮತ್ತು ಆಡಳಿತ ನೀತಿ ಮಹತ್ವದ ಪಾತ್ರ ವಹಿಸುತ್ತದೆ. ಶಿಕ್ಷಕರ ಕುರಿತು ಕಾಳಜಿ, ಗೌರವ ನೀಡದೆ ಕಾಂಗ್ರೆಸ್ ಆಡಳಿತ ನಡೆಸಿದೆ. ಕಾಂಗ್ರೆಸ್ ಪಕ್ಷವು ಶಿಕ್ಷಕರ, ಪದವೀಧರರ ವಿರುದ್ಧವಾಗಿ ನೀತಿಗಳನ್ನು ಹೊಂದಿದೆ. ಆದರೆ, ಬಿಜೆಪಿ ಶಿಕ್ಷಕರ ಪರವಾಗಿ ಹಲವಾರು ಸುಧಾರಣೆಗಳನ್ನು, ಅನುದಾನಿತ ಸಂಸ್ಥೆಗಳಲ್ಲಿ ಹುದ್ದೆ ಭರ್ತಿ ಮಾಡುವ ಕಾರ್ಯ ಮಾಡಿದೆ. ಕಾಂಗ್ರೆಸ್ ಪಕ್ಷದ ಆಡಳಿತ ನೇಮಕಾತಿಯನ್ನು ಸಂಪೂರ್ಣವಾಗಿ ನಿಷೇಧಿಸಿತ್ತು. ಯಡಿಯೂರಪ್ಪನವರ ಅವಧಿಯಲ್ಲಿ ಹುದ್ದೆ ಭರ್ತಿಗೆ ಅವಕಾಶ ಮಾಡಿಕೊಡಲಾಯಿತು. ಅನುದಾನ ಕೊಡುವ ವಿಚಾರದಲ್ಲೂ ಅವಕಾಶ, ಆಜ್ಞೆ ಮಾಡಲಾಗಿದೆ. ಜ್ಞಾನ ಆಯೋಗ ಆರಂಭ, ಮೂರನೇ ರಾಷ್ಟ್ರೀಯ ಶಿಕ್ಷಣ ನೀತಿ ತರುವ ಮೂಲಕ ದೊಡ್ಡ ಸುಧಾರಣೆ ಮಾಡಲಾಗಿದೆ ಎಂದರು.

ಕೌಶಲ್ಯಯುಕ್ತ ಶಿಕ್ಷಣ ನೀಡುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿಜೀ ಅವರು ಮಹತ್ವದ ಕ್ರಮ ತೆಗೆದುಕೊಂಡಿದ್ದಾರೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜಕೀಯ ಪ್ರೇರಿತವಾಗಿ ಕಾಂಗ್ರೆಸ್ ಪಕ್ಷವು ವಿರೋಧಿಸಿದೆ. ವೈಜ್ಞಾನಿಕವಾಗಿ ಯೋಚಿಸದೆ, ಚರ್ಚೆ-ವಿಮರ್ಶೆ ಇಲ್ಲದೆ ಏಕಾಏಕಿಯಾಗಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ತೆಗೆದುಹಾಕುತ್ತೇವೆ ಹಾಗೂ ರಾಜ್ಯ ಶಿಕ್ಷಣ ನೀತಿ ತರುವುದಾಗಿ ಮನಬಂದಂತೆ ನಿಲುವು ತೆಗೆದುಕೊಂಡಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

7ನೇ ವೇತನ ಆಯೋಗದ ಶಿಫಾರಸು ಜಾರಿ ಮಾಡದ ಈ ಕಾಂಗ್ರೆಸ್ ಸರಕಾರವು ರಾಜ್ಯವನ್ನು ಸಾಲದ ಸುಳಿಯಲ್ಲಿ ಸಿಲುಕಿಸಿದೆ. ಒಪಿಎಸ್ ಕುರಿತು ಸುಳ್ಳು ಭರವಸೆ ಕೊಟ್ಟಿದ್ದಾರೆ. ಇದೇ ಯುಪಿಎ ಸರಕಾರ ಎನ್‌ಪಿಎಸ್ ಜಾರಿಗೊಳಿಸಿತ್ತು. ಶಿಕ್ಷಣ ಕ್ಷೇತ್ರವನ್ನು ಸದಾ ಹಾಳು ಮಾಡುವ ಕೆಲಸದಲ್ಲಿ ಕಾಂಗ್ರೆಸ್ಸಿನವರು ತೊಡಗಿದ್ದಾರೆ ಎಂದು ದೂರಿದರು.

ಸಿಇಟಿ ಪರೀಕ್ಷೆ ವಿಚಾರ, ಹೊಸದಾಗಿ ಜಾರಿ ಮಾಡಿದ ಪಬ್ಲಿಕ್ ಎಕ್ಸಾಮ್ ವಿಚಾರದಲ್ಲಿ ಗೊಂದಲ, ಸಮಸ್ಯೆಗಳು ಕಾಡುವಂತಾಗಿದೆ. ಶಿಕ್ಷಣ ವಾತಾವರಣವನ್ನು ಹದಗೆಡಿಸಿದ್ದಾರೆ. ಯುವ ನೀತಿಯಲ್ಲೂ ಡೋಂಗಿ ನೀತಿ ಜಾರಿ ಮಾಡಿದ್ದಾರೆ ಎಂದು ಆರೋಪಿಸಿದರು.

ನಮ್ಮ ಸರ್ಕಾರ ಪಾಲಿಟೆಕ್ನಿಕ್, ಐಟಿಐ ಗುಣಮಟ್ಟ ಹೆಚ್ಚಿಸಿ ಅಡ್ಮಿಶನ್ ಶೇ.100ಕ್ಕೆ ಹೆಚ್ಚಳವಾಗಿದೆ. ಇಲ್ಲಿ ಕಲಿತ ಎಲ್ಲರಿಗೂ ಉದ್ಯೋಗ ಸಿಗುತ್ತಿದೆ. ಎಲ್ಲ ಸರ್ಕಾರಿ ಕಾಲೇಜುಗಳಲ್ಲಿ 87%ರಷ್ಟು ಅಕ್ರೆಡಿಷನ್ ಕೊಡಿಸಿದ್ದೇವೆ. ಇದೊಂದು ದೊಡ್ಡ ಸಾಧನೆ. ಶಿಕ್ಷಕರ ನೇಮಕಾತಿ ವೇಳೆ ಪಾರದರ್ಶಕ ಕೌನ್ಸೆಲಿಂಗ್ ನಡೆಸಿದ್ದೇವೆ ಎಂದು ಹೇಳಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com